ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 121

20-10-2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 121

## ಸುವರ್ಣ ಮಹೋತ್ಸವ ಸಂಭ್ರಮಾಚರಣೆಯ ಪೂರ್ವಭಾವಿ ಸಭೆ

**ದಾವಣಗೆರೆ:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಸ್ಥಾಪನೆಗೊಂಡು 50 ವರ್ಷಗಳಾಗಿರುವ ಹಿನ್ನೆಲೆಯಲ್ಲಿ ಸುವರ್ಣ ಮಹೋತ್ಸವ ಸಂಭ್ರಮಾಚರಣೆ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 23 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇ-ರಿಯ ತುಂಗಭದ್ರಾ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

## ನ.4 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ಚಿಕ್ಕಮಗಳೂರು, ಅ.18:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರೂ ಯುವ ಕೇಂದ್ರದ ಸಹಯೋಗದಲ್ಲಿ ಅಕ್ಟೋಬರ್ 28 ರಂದು ನಿಗದಿಪಡಿಸಲಾಗಿದ್ದ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಮುಂದೂಡಿ ನವೆಂಬರ್ 4 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕುವೆಂಪು ಕಲಾ ಮಂದಿರದಲ್ಲಿ ಆಯೋಜಿಸಲಾಗಿದೆ.

ಜಿಲ್ಲೆಯ ಎಲ್ಲ ತಾಲ್ಲೂಕುಗಳ ಯುವಜನರಿಗೆ ಜನಪದ ನೃತ್ಯ, ಜನಪದ ಗೀತೆ, ಕಥೆ ಬರೆಯುವುದು, ಕವಿತೆ ಬರೆಯುವುದು, ಘೋಷಣೆ, ಚಿತ್ರಕಲೆ, ವಿಜ್ಞಾನ ಮೇಳ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶವಿದೆ. 15 ರಿಂದ 29ರ ವಯೋಮಿತಿಯ ಎಲ್ಲ ಯುವಕ, ಯುವತಿಯರು ಈ ಸ್ಪರ್ಧಾ ಕಾರ್ಯಕ್ರಮದಲ್ಲಿ ಮುಕ್ತವಾಗಿ ಭಾಗವಹಿಸಬಹುದು. ಆಸಕ್ತ ಯುವಜನರು ತಮ್ಮ ಹೆಸರು, ವಿಳಾಸ, ವಯಸ್ಸಿನ ಪ್ರಮಾಣಪತ್ರ ಸಹಿತ ಭಾಗವಹಿಸುವ ಸ್ಪರ್ಧೆ ವಿವರಗಳೊಂದಿಗೆ ನವೆಂಬರ್ 4 ರಂದು ಬೆಳಿಗ್ಗೆ 9.30 ಗಂಟೆಯೊಳಗೆ ಕುವೆಂಪು ಕಲಾ ಮಂದಿರದಲ್ಲಿ ವರದಿ ಮಾಡಿಕೊಳ್ಳಲು ಕೋರಲಾಗಿದೆ. ವಿಜೇತರಿಗೆ ಪಾರಿತೋಷಕ, ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಕಚೇರಿ ವೇಳೆಯಲ್ಲಿ (ದೂರವಾಣಿ ಸಂಖ್ಯೆ:-08262-295724) ಸಂಪರ್ಕಿಸಬಹುದು. ವಿಜ್ಞಾನ ಮೇಳಕ್ಕೆ ಸಂಪರ್ಕಿಸಬೇಕಾದ ಸಂಖ್ಯೆ: 7892442286 ಹಾಗೂ ಚಿತ್ರಕಲೆ ಸ್ಪರ್ಧೆಗೆ ಸಂಪರ್ಕಿಸಬೇಕಾದ ಸಂಖ್ಯೆ: 6360448844 ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀಬೀರಲಿಂಗೇಶ್ವರ ದೇವಸ್ಥಾನದ ಮೈದಾನದಲ್ಲಿ ವ್ಯಾಪಾರಕ್ಕೆ ಅವಕಾಶ

**ದಾವಣಗೆರೆ :** ಅ.19 ರಿಂದ 22 ರವರೆಗೆ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಮೈದಾನದಲ್ಲಿ ಬಾಳೆಕಂಬ, ಹೂ, ಹಣ್ಣು ಮಾವಿನ ತೋರಣ, ಬೂದೂ ಗುಂಬಳ ಕಾಯಿ, ಕಾಂಚಿಕಡ್ಡಿ ಹಾಗೂ ಸಗಣಿ ಗುರ್ಜಿಗಳ ವ್ಯಾಪಾರಕ್ಕೆ ಅವಕಾಶ ಕಲ್ಪಿಸಲಾಗಿದೆ.

ನಗರದ ಪಿ.ಬಿ. ರಸ್ತೆಯ ಅರಸು ಕ್ರಾಸ್ ಮತ್ತು ಐಬಿ ರಸ್ತೆ ಹಾಗೂ ಇತರೆ ಯಾವುದೇ ಭಾಗಗಳಲ್ಲಿ ರಸ್ತೆ ಸಂಚಾರ-ಕ್ಕೆ ಅಡ್ಡಿಯಾಗುವಂತೆ ಬಾಳೆಕಂಬ, ಹೂ, ಹಣ್ಣು ಮಾವಿನ ತೋರಣ, ಬೂದು ಗುಂಬಳ ಕಾಯಿ, ಕಾಚಿಕಡ್ಡಿ ಹಾಗೂ ಸಗಣಿ ಗುರ್ಜಿಗಳ ವ್ಯಾಪಾರ ಮಾಡದೇ ಶ್ರೀ ಬೀರಲಿಂಗೇಶ್ವರ ದೇವಸ್ತಾನದ ಮೈದಾನದಲ್ಲಿ ಈ ಸಾಮಗ್ರಿಗಳನ್ನು ಮಾರಾಟ ಮಾಡುವಂತೆ ಹಾಗೂ ಉಳಿದ ಸಾಮಗ್ರಿಗಳನ್ನು ಅಲ್ಲಿಯೇ ಬಿಡದೇ ಹಿಂದಿರುಗಿ ಸಾಗಿಸುವಂತೆ ಸೂಚಿಸಿದೆ. ತಪ್ಪಿದಲ್ಲಿ ಪ್ರತಿ ಮಾರಾಟಗಾರರಿಂದ ತ್ಯಾಜ್ಯ ಸಂಗ್ರಹಣಾ ಶುಲ್ಕವನ್ನು ವಸೂಲಿ ಮಾಡಲಾಗುವುದೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.

## ಬಾಲ ನ್ಯಾಯ ಮಂಡಳಿ ಹಾಗೂ ಮಕ್ಕಳ ಕಲ್ಯಾಣ ಸಮಿತಿ ಕಟ್ಟಡದ ಉದ್ಘಾಟನೆ

**ಗದಗ :** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಬಾಲ ನ್ಯಾಯ ಮಂಡಳಿ ಹಾಗೂ ಮಕ್ಕಳ ಕಲ್ಯಾಣ ಸಮಿತಿ ಕಟ್ಟಡದ ಉದ್ಘಾಟನೆ ಕಾರ್ಯಕ್ರಮವನ್ನು ಅಕ್ಟೋಬರ್ 20 ರಂದು ಬೆಳಿಗ್ಗೆ 11.30 ಗಂಟೆಗೆ ಗದಗ ಬೆಟಗೇರಿಯ ಹಾಕಿ ಗ್ರೌಂಡ್ ಹತ್ತಿರ ಬಾಲಕರ ಸರಕಾರಿ ಬಾಲಮಂದಿರದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು ಮತ್ತು ಉಡುಪಿ ಜಿಲ್ಲಾ ಉಸ್ತುವಾರಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

## ವಿವಿಧ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯದ ಕ್ರೀಡಾ ಇಲಾಖೆಯು ಕ್ರೀಡಾ ಸಾಧನೆಗೆ ಸಂಬಂಧಪಟ್ಟಂತೆ ವಿವಿಧ ಕ್ರೀಡಾ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ಸಾಧಕರಿಗೆ ವಿವಿಧ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜುನ ಪ್ರಶಸ್ತಿ, ರಾಷ್ಟ್ರೀಯ ಕ್ರೀಡಾ ಪೋಷಕ ಪ್ರಶಸ್ತಿ, ದ್ರೋಣಚಾರ್ಯ ಪ್ರಶಸ್ತಿ, ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿಗೆ ಆನ್ ಲೈನ್ ಮೂಲಕ ಅಕ್ಟೋಬರ್ 28 ರೊಳಗಾಗಿ ಸಲ್ಲಿಸಬೇಕು. ಅರ್ಜಿದಾರರು ವೆಬ್ ಸೈಟ್ ತಿತಿತಿ.ಜಥ-ಣಥಿಷೆ.ಶಿಡಿಣ.ರಥತ ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 011-23387432, 1800-202-5155, 1800-258-5155 ಸಂಪರ್ಕಿಸಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕರಾದ ಹರ್ಷ ತಿಳಿಸಿದ್ದಾರೆ.

### ಹೃದಯವಂತ ಆರ್.ಎಲ್.ಜಾಲಪ್ಪ ಜೀವನ ಪಥ

# ಕೃತಿ ಲೋಕಾರ್ಪಣೆಗೊಳಿಸಿದ ಸಿಎಂ ಸಿದ್ದರಾಮಯ್ಯ



**ದೊಡ್ಡಬಳ್ಳಾಪುರ:** ಹಿರಿಯ ರಾಜಕೀಯ ಮುತ್ಸದ್ದಿ ಹಾಗೂ ಮಾಜಿ ಕೇಂದ್ರ ಸಚಿವ ಆರ್.ಎಲ್. ಜಾಲಪ್ಪ ಅವರ ಜನ್ಮ ಶತಮಾನೋತ್ಸವ ಅಂಗವಾಗಿ ದೊಡ್ಡಬಳ್ಳಾಪುರ ನಗರದ ಆರ್. ಎಲ್. ಜಾಲಪ್ಪ ಕ್ರೀಡಾಂಗಣದಲ್ಲಿ ಭಾನುವಾರ ನಡೆದ ಕಾರ್ಯಕ್ರಮದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.

ಇದೇ ವೇಳೆ ಪ್ರೊಫೆಸರ್ ಕೆ.ಆರ್. ರವಿಕಿರಣ್ ಹಾಗೂ ಲಕ್ಷ್ಮಣ ಕೊಡಸೆ ಅವರು ಬರೆದಿರುವ 'ನೇರ ನಿಷ್ಠುರ ನಡೆಯ ಹೃದಯವಂತ ಆರ್.ಎಲ್. ಜಾಲಪ್ಪ ಜೀವನ ಪಥ' ಪುಸ್ತಕವನ್ನು ಲೋಕಾರ್ಪಣೆಗೊಳಿಸಿದರು.

ಬಳಿಕ ಮಾತನಾಡಿದ ಮುಖ್ಯಮಂತ್ರಿ, ಆರ್.ಜಾಲಪ್ಪ ಅವರ ವ್ಯಕ್ತಿತ್ವ ನೇರ-ನಿಷ್ಠುರ ಮತ್ತು ಹೃದಯವಂತಿಕೆಯಿಂದ ಕೂಡಿತ್ತು. ಜಾಲಪ್ಪನವರಿಗೆ ಸಮಯ ಪ್ರಜ್ಞೆ ಇತ್ತು. ಒಬ್ಬ ದಕ್ಷ ಆಡಳಿತಗಾರರಾಗಿದ್ದ ಜಾಲಪ್ಪ ಅವರು ನಿರ್ವಹಿಸಿದ ಎಲ್ಲಾ ಖಾತೆಗಳಲ್ಲೂ ತಮ್ಮದೇ ಆದ ಹೆಜ್ಜೆ ಗುರುತುಗಳನ್ನು ದಾಖಲಿಸಿದ್ದು ಮಾತ್ರವಲ್ಲ, ರೈತರಿಗೆ, ಕೃಷಿಗೆ ಅತ್ಯಂತ ಮಹತ್ವದ ಕೊಡುಗೆ ನೀಡಿದ್ದರು ಎಂದು ಸ್ಮರಿಸಿದರು.

ನಾನು ಮೊದಲ ಬಾರಿ ಸಚಿವನಾಗಲು ರಾಚಯ್ಯನವರಷ್ಟೇ ಜಾಲಪ್ಪನವರೂ ಕಾರಣ. ಜಾಲಪ್ಪನವರಿಗೆ ಹಿಂದುಳಿದವರ ಏಳಿಗೆಯ ವಿಚಾರದಲ್ಲಿ ದೂರದೃಷ್ಟಿ ಇತ್ತು. ಹೀಗಾಗಿ ಆಗಲೇ ವೈದ್ಯಕೀಯ ಕಾಲೇಜು ಸ್ಥಾಪಿಸಿದ್ದರು. ಮೊದಲಿಗೆ 150 ವಿದ್ಯಾರ್ಥಿಗಳಿಂದ ಆರಂಭವಾದ ಸಂಸ್ಥೆ ಈಗ 40 ಸಾವಿರದಷ್ಟು ವಿದ್ಯಾರ್ಥಿಗಳು ನಾನಾ ವಿಭಾಗಗಳಲ್ಲಿ ಓದುತ್ತಿರುವುದು ಶ್ಲಾಘನೀಯ ಎಂದರು.

ನಾನು ಕಂದಾಯ ಸಚಿವನಾಗಬೇಕು ಎಂದುಕೊಂಡಿದ್ದೆ. ಆದರೆ, ನಾನು ಹಣಕಾಸು ಸಚಿವ ಆಗಲೇಬೇಕು ಎಂದು ಸೂಚಿಸಿದರು. ಅವರ ಕಾರಣದಿಂದ ನಾನು ಇಂದು ಹದಿನಾರು ಬಜೆಟ್ ಗಳನ್ನು ಮಂಡಿಸುವಂತಾಯಿತು ಎಂದು ತಿಳಿಸಿದರು.


**ಸಾಮಾಜಿಕ ನ್ಯಾಯದ ಪರವಾಗಿ ಜೀವನ ಮುಡುಪು:** ಇಂದು ನಾನು ರಾಜಕೀಯವಾಗಿ ಈ ಮಟ್ಟದ ಏಳಿಗೆ ಆಗಿದ್ದರೆ ಅದರಲ್ಲಿ ಜಾಲಪ್ಪನವರ ಪಾತ್ರ ದೊಡ್ಡದಿದೆ.

### ಹದಿನಾರು ಬಜೆಟ್ ಮಂಡಿಸುವಂತಾಗಲು ಜಾಲಪ್ಪ ಕಾರಣ

ಬಹಳ ಸ್ವಾಭಿಮಾನಿ ಆಗಿದ್ದ ಜಾಲಪ್ಪನವರು ನನ್ನ ರಾಜಕೀಯ ಏಳಿಗೆಗೆ ಕಾರಣಕರ್ತರು. ನನ್ನನ್ನು ಮುಖ್ಯಮಂತ್ರಿ ಮಾಡಲೇಬೇಕು ಎಂದು ಜಾಲಪ್ಪನವರು ದೇವೇಗೌಡರ ಎದುರು ಹಠ ಹಿಡಿದು ಆಗ್ರಹ ಪೂರ್ವಕವಾಗಿ ಒತ್ತಾಯಿಸಿದ್ದರು. ನಾನು ಮತ್ತೆ ಜೆ.ಹೆಚ್.ಪಟೇಲರು ಇಬ್ಬರ ನಡುವೆ ಮುಖ್ಯಮಂತ್ರಿ ಯಾರಾಗಬೇಕು ಎನ್ನುವ ಚರ್ಚೆ ನಡೆಯುತ್ತಿದ್ದಾಗ ನನ್ನ ಪರವಾಗಿ ಗಟ್ಟಿಯಾಗಿ ನಿಂತು ದೇವೇಗೌಡರಿಗೆ ನನ್ನನ್ನೇ ಸಿಎಂ ಮಾಡಬೇಕು ಎಂದು ಒತ್ತಾಯಿಸಿದ್ದರು. ನಾನು ಮೊದಲ ಬಾರಿ ಹಣಕಾಸು ಸಚಿವನಾಗುವಾಗಲೂ ಜಾಲಪ್ಪನವರ ಪ್ರಯತ್ನ ಇದೆ ಎಂದು ತಿಳಿಸಿದರು.

### ರೈತರಿಗೆ ಕೆರೆ ಹೂಳು ಮಣ್ಣು ಬಳಸಿಕೊಳ್ಳಲು ಮುಕ್ತ ಅವಕಾಶ,

# ಅಕ್ರಮ ಮರಳು ಗಣಿಗಾರಿಕೆ ತಡೆಗೆ ಕಠಿಣ ಕ್ರಮಕ್ಕೆ ಸೂಚನೆ : ಜಿ.ಎಂ.ಗಂಗಾಧರಸ್ವಾಮಿ



**ದಾವಣಗೆರೆ:** ಕೆರೆ ಹೂಳೆತ್ತುವ ವೇಳೆ ತೆಗೆಯುವ ಮಣ್ಣನ್ನು ರೈತರು ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿರುವ ಯಾವುದೇ ಕೆರೆಗಳಲ್ಲಿ ರೈತರು ತಮೊಮ ತೋಟ, ಹೊಲಗಳಿಗೆ ಮಣ್ಣು ಬಳಸಿಕೊಳ್ಳಬಹುದು. ಇದರಿಂದ ಕೆರೆಯ ನೀರಿನ ಸಂಗ್ರಹಣಾ ಸಾಮರ್ಥ್ಯ ಹೆಚ್ಚುವ ಜೊತೆಗೆ ರೈತರ ಜಮೀನಿನ ಫಲವತ್ತತೆ ಹೆಚ್ಚಿ ರಸಗೊಬ್ಬರಗಳ ಬಳಕೆ ಪ್ರಮಾಣ ಕಡಿಮೆ ಮಾಡುವರು. ಆದ-ರೆ ಆಳವಾಗಿ ತೆಗೆಯಲು ಮತ್ತು ವಾಣಿಜ್ಯ ಉದ್ದೇಶಕ್ಕೆ ಬಳಕೆ ಮಾಡುವಂತಿಲ್ಲ, ಮಾಡಿದಲ್ಲಿ ರಾಜಧಾನ ಪಾವತಿ ಮತ್ತು ಅನುಮತಿ ಪಡೆದುಕೊಳ್ಳಬೇಕಾಗುತ್ತದೆ. ಆದರೆ ಕೃಷಿ ಚಟುವಟಿಕೆಗಳಿಗೆ ಅನುಮತಿ ಬೇಕಿಲ್ಲ ಎಂದು ಸಷ್ಟಪಡಿಸಿದರು.

ಆದ್ದರಿಂದ ಅಧಿಕಾರಿಗಳು ತಾಲ್ಲೂಕುವಾರು ಊಳೆತ್ತಲು ಅರ್ಹವಿರುವ ಕೆರೆಗಳ ಸಮಗ್ರ ವರದಿ ಒಂದು ವಾರದೊಳಗೆ ನೀಡಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

**ಡಿಸೆಂಬರ್ ಅಂತ್ಯಕ್ಕೆ ಮರಳು ಲಭ್ಯ:** ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿ-ಕೆ ಕುರಿತು ಹಲವು ದೂರುಗಳು ಕೇಳಿ ಬರುತ್ತಿವೆ. ಹಾಗಾಗಿ ಅಂತವರ ಮೇಲೆ ಕಾನೂನಾತ್ಮಕ ಕಠಿಣ ಕ್ರಮ ಕೈಗೊಳ್ಳಬೇಕು. ಹಾಗೆಯೇ ನಿಯಮಾನುಸಾರ ವೇ-ಬ್ರಿಡ್ಜ್‌ಳಲ್ಲಿ ತೂಕ ನಿರ್ದಿಷ್ಟವಾಗಿದ್ದರೂ, ತದನಂತರ ನಿಗದಿತ ತೂಕಕ್ಕಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಅಕ್ರಮವಾಗಿ ಸಾಗಾಣೆ ಮಾಡಲಾಗುತ್ತಿದೆ. ಅಷ್ಟೇ ಅಲ್ಲದೇ ವಾಹನಗಳ ಮೇಲ್ಪದರಗಳಲ್ಲಿ ಎಂಸ್ಯಾಂಡ್ ಮತ್ತು ಮಧ್ಯ ಭಾಗದಲ್ಲಿ ಮರಳು ತುಂಬಿ, ಎಂಸ್ಯಾಂಡ್ ರೂಪದಲ್ಲಿ ಮರಳು ಸಾಗಾಣೆ ಮಾಡುತ್ತಿರುವ ಬಗ್ಗೆ ದೂರುಗಳಿವೆ. ಈ ಕುರಿತು ಸೂಕ್ಷ್ಮವಾಗಿ ಗಮನಿಸಿ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.ಸರ್ಕಾರ ಪ್ರತಿ 1 ಟನ್ ಮರಳಿಗೆ ರೂ.850 ನಂತೆ ದರ ನಿಗದಿ ಮಾಡಿದೆ. ಜಿಲ್ಲೆಯಲ್ಲಿ 24 ಮರಳು ಬ್ಲಾಕ್ ಗಳನ್ನು ಗುರುತಿಸಿ ಟೆಂಡರ್ ಅಂತಿಮಗೊಳಿಸಲಾಗಿದೆ.ಡಿಸೆಂಬರ್ ಅಂತ್ಯದ ವೇಳೆಗೆ ಮನೆ ನಿರ್ಮಾಣ ಹಾಗೂ ಇನ್ನಿತರೆ ಕಾಮಗಾರಿಗಳಿಗೆ ಮರಳು ಲಭ್ಯವಾಗಲಿದೆ ಎಂದು ಮಾಹಿತಿ ನೀಡಿದರು.

**19 ಮರಳು ಬ್ಲಾಕ್‌ಗಳಿಗೆ ಟೆಂಡರ್:** ಜಿಲ್ಲಾದ್ಯಾಂತ ಒಟ್ಟು 24 ಮರಳು ಬ್ಲಾಕ್‌ಗಳನ್ನು ಗುರುತಿಸಲಾಗಿದೆ. ಈ ಪೈಕಿ 4 ಬ್ಲಾಕ್ ಸರ್ಕಾರಿ ಕಾಮಗಾರಿಗಳಿಗೆ, 19 ಬ್ಲಾಕ್‌ಗಳು ಸಾರ್ವಜನಿಕ ಉಪಯೋಗಕ್ಕೆ ನಿಗದಿಪಡಿಸಿದ್ದು, ಟೆಂಡರ್ ಅಂತಿಮವಾಗಿದೆ. ಇನ್ನೂ ಒಂದು ಬ್ಲಾಕ್ ಮಾತ್ರ ಬಾಕಿ ಇದೆ. ಟೆಂಡರ್‌ದಾರರು ಷರತ್ತುಗಳನ್ವಯ ಮರಳು ಪೂರೈಕೆ ಮಾಡಲಾಗುತ್ತದೆ.

ಬ್ಲಾಕ್ ವಿವರ: ಹರಿಹರ ತಾಲ್ಲೂಕಿನ ಗೋವಿನಾಳು, ಎಲೆಹೊಳೆ, ಚಿಕ್ಕಬಿದರೆ, ಗುತ್ತೂರು, ಮಳಲಹಳ್ಳಿ ಹಾಗೂ ಬಿಲಾಸನೂರು, ಹೊನ್ನಾಳಿ ತಾಲ್ಲೂಕಿನ ಬುಳ್ಳಾಪುರ, ಚಿಕ್ಕಬಸಾಪುರ, ರಾಂಪುರ, ಬಿಳೆಮಲ್ಲೂರು, ಹಿರೇಬಸೂರು, ಬುಳ್ಳಾಪುರ, ಬೀರಗೊಂಡನಹಳ್ಳಿ ಮತ್ತು ಬಾಗೇವಾಡಿ ವ್ಯಾಪ್ತಿಯಲ್ಲಿ ಹಾಗೂ ನ್ಯಾಮತಿ ತಾಲ್ಲೂಕಿನಲ್ಲಿ ಗೋವಿನಕೋವಿ, ಮಾರಿಗೊಂಡನಹಳ್ಳಿ, ತಗ್ಗಿಹಳ್ಳಿ ಮತ್ತು ಕೋಟೆಹಾಳ್‌ನಲ್ಲಿ ಮರಳು ಬ್ಲಾಕ್ ಗುರುತಿಸಲಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಉಪಸ್ಥಿತರಿದ್ದರು.

# ಸಂಕಷ್ಟದಲ್ಲಿರುವ ಮಹಿಳೆಯರಿಗೆ ಆಶ್ರಯ ನೀಡುವ ಸರ್ಕಾರದ ಯೋಜನೆಯ ಪ್ರಚಾರಕ್ಕೆ ನ್ಯಾ. ಮಹಾವೀರ ಕರೆಣ್ಣವರ ಚಾಲನೆ



**ದಾವಣಗೆರೆ : :** ಸ್ವಧಾರ್ ಗೃಹ ಒದಗಿಸುವ ಸೌಲಭ್ಯಗಳು ಉಚಿತ ಊಟ, ಬಟ್ಟೆ, ಆಶ್ರಯ, ವೈದ್ಯಕೀಯ ಸೌಲಭ್ಯ, ಆಪ್ತಸಮಾಲೋಚನೆ, ಜಿಲ್ಲಾ ಕಾನೂನು ಪ್ರಾಧಿಕಾರದಿಂದ ಅಗತ್ಯ ಕಾನೂನು ಸಲಹೆ ನೀಡಲಾಗುವುದು ಎಂದು ನ್ಯಾಯಾಧೀಶರು ಹಾಗೂ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ತಿಳಿಸಿದರು.

ಶನಿವಾರ(ಅ.18) ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ದಾವಣಗೆರೆ ಇವರ ಕಚೇರಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಶಕ್ತಿ ಸದನ ಶುಭೋದಯ ಸ್ವಾಧಾರ ಗ್ರಹ ಇವರ ಸಂಯುಕ್ತ ಆಶ್ರಯದಲ್ಲಿ ಸಂಕಷ್ಟದಲ್ಲಿರುವ ಮಹಿಳೆಯರಿಗೆ ಉಚಿತ ಊಟ, ಬಟ್ಟೆ, ಆಶ್ರಯ ನೀಡುವ ಸರ್ಕಾರದ ಯೋಜನೆಗಳಿಗೆ ಚಾಲನೆ ನೀಡಿ ಬಿತ್ತಿ ಪತ್ರಗಳನ್ನು ಪ್ರದರ್ಶಿಸಿ ಬಳಿಕ ಮಾತನಾಡಿದ ಅವರು


ಯಾರು ಇದರ ಆಶ್ರಯ ಪಡೆಯಬಹುದು ಎಂಬುದರ ಬಗ್ಗೆ ಮಾಹಿತಿ ನೀಡಿದರು.

18 ರಿಂದ 55 ವರ್ಷದೊಳಗಿನ ನಿರಾಶ್ರಿತ, ನಿರ್ಗತಿಕ ಮಹಿಳೆಯರು ಮತ್ತು ಆರ್ಥಿಕ ಭದ್ರತೆ ಇಲ್ಲದ ಮಹಿಳೆಯರು, ಪ್ರಕೃತಿ ವಿಕೋಪಕ್ಕೆ ಒಳಗಾಗಿ ಮನೆ, ಆಶ್ರಯ ಕಳೆದುಕೊಂಡು, ಜೈಲಿನಿಂದ ಬಿಡುಗಡೆ ಹೊಂದಿ ಸಾಮಾಜಿಕ ಮತ್ತು ಆರ್ಥಿಕ ಸಹಾಯ ಇಲ್ಲದೇ ಇರುವವರು, ದೈಹಿಕ ಮತ್ತು ಮಾನಸಿಕ ಹಿಂಸೆಗೆ ಒಳಪಟ್ಟವರು, ಕುಟುಂಬ, ಮನೆಯಿಂದ ಹೊರಹಾಕಲ್ಪಟ್ಟವರು, ಪತಿಯಿಂದ ಅಥವಾ ಬೇರೆ ಸದಸ್ಯರಿಂದ ದೌರ್ಜನ್ಯಕ್ಕೆ ಒಳಪಟ್ಟವರು, ವಿಧವೆಯರು, ವಿಚ್ಚೇದಿತ ಮಹಿಳೆಯರು, ಮನೆಯವರಿಂದ ನಿರ್ಲಕ್ಷಕ್ಕೆ ಒಳಪಟ್ಟವರು ಇತ್ಯಾದಿ ಮಹಿಳೆಯರು ಹಾಗೂ ಈ ಮಹಿಳೆಯರಿಗೆ 12 ವರ್ಷದೊಳಗಿನ ಗಂಡುಮಕ್ಕಳು ಹಾಗೂ 18 ವರ್ಷದೊಳಗಿನ ಹೆಣ್ಣುಮಕ್ಕಳಿದ್ದರೆ ಅವರೂ ಕೂಡಾ ತಾಯಿಯೊಂದಿಗೆ ಆಶ್ರಯ ಪಡೆಯಬಹುದು.

ಸ್ವಧಾರ್ ಗೃಹ ಒದಗಿಸುವ ಸೌಲಭ್ಯಗಳುಃ ಉಚಿತ ಊಟ, ಬಟ್ಟೆ, ಆಶ್ರಯ, ವೈದ್ಯಕೀಯ ಸೌಲಭ್ಯ, ಆಪ್ತಸಮಾಲೋಚನೆ, ಜಿಲ್ಲಾ ಕಾನೂನು ಪ್ರಾಧಿಕಾರದಿಂದ ಅಗತ್ಯ ಕಾನೂನು ಸಲಹೆ ಕೊಡಿಸುವುದವುದು. ವೃತ್ತಿ ತರಬೇತಿಗಳಾದ ಟೈಲರಿಂಗ್ ಎಂಬ್ರಾಯಿಡರಿ ತರಬೇತಿ, ಅಗರಬತ್ತಿ ಮೆಕಿಂಗ್ ಇತ್ಯಾದಿ ಕೌಶ್ಯಲ್ಯಾದಾರಿತ ಸ್ವಾವಲಂಬನೆಯ ತರಬೇತಿ ಮತ್ತು ಮಾರ್ಗದರ್ಶನ, ಆಪ್ತ ಸಮಾಲೋಚನೆ ಮೂಲಕ ನಿವಾಸಿಗಳನ್ನು ತಂದೆ, ತಾಯಿ, ಅಥವಾ ಪತಿಯೊಂದಿಗೆ ಸೇರಿಸುವುದು, ಮನರಂಜನೆ ಇತ್ಯಾದಿ. ಮಹಿಳೆಯರಿಗೆ ಯಾವುದೇ ತೊಂದರೆಗಳಾದಲ್ಲಿ ಉಚಿತ ಸಹಾಯವಾಣಿ 181 ಅಥವಾ ಕಾನೂನು ಸೇವೆಗಳ ಪ್ರಾಧಿಕಾರದ ಟೋಲ್ ಫ್ರೀ ಸಂಖ್ಯೆ 15100 ಅಥವಾ ಪೊಲೀಸ್ ಸಹಾಯವಾಣಿ 112 ಗೆ ಕರೆ ಮಾಡಲು ಸಲಹೆ ನೀಡಿದರು

ಪ್ರಸ್ತುತ ದಾವಣಗೆರೆ ನಗರ ಪ್ರದೇಶದಲ್ಲಿ ಸರ್ಕಾರಿ ಬಾಲಕಿಯರ ಬಾಲ ಮಂದಿರ, ರಾಜ್ಯ ಮಹಿಳಾ ನಿಲಯ, ಸರ್ಕಾರಿ ಬಾಲಕರ ಬಾಲ ಮಂದಿರ, ತುರುಚುಗಟ್ಟದ ನಿರಾಶ್ರಿತರ ಕೇಂದ್ರ, ಜಾಗೃತ ಮಹಿಳಾ ನಿಲಯ, ಮತ್ತು ಶುಭೋದಯ ಮಹಿಳಾ ನಿಲಯ ಇವುಗಳು ಮತ್ತು ಇನ್ನೂ ಕೆಲವು ಸರ್ಕಾರಿ ಅನುದಾನಿತ ಸಂಸ್ಥೆಗಳು ಕರ್ತವ್ಯ ನಿರ್ವಹಿಸುತ್ತಿದ್ದು ಇಲ್ಲಿ ಬರುವ ಎಲ್ಲಾ ನಿರಾಶ್ರಿತರಿಗೆ ಮತ್ತು ಬಾದೀತರಿಗೆ ಮತ್ತು ಮಕ್ಕಳಿಗೆ ಉಚಿತ ಊಟ ವಸತಿ ಮತ್ತು ಸೌಲಭ್ಯಗಳನ್ನು ಒದಗಿಸಿಕೊಡಲಾಗುವುದು ಎಂದು ತಿಳಿಸಿದರು. ಇದಕ್ಕೆ ತಗಲುವ ಎಲ್ಲಾ ವೆಚ್ಚವನ್ನು ಸರ್ಕಾರದಿಂದಲೇ ಪಾವತಿಸಲಾಗುತ್ತದೆ ಯಾರೊಬ್ಬರೂ ಕೂಡ ಹಣ ಪಾವತಿಸುವ ಅಗತ್ಯವಿಲ್ಲವೆಂದು ತಿಳಿಸಿದರು.

## ವಿಜಯಪುರ: ಎಸ್ಕೇಪ್ ಆಗಲು ಯತ್ನಿಸಿದ ರೌಡಿಶೀಟರ್ ಪೊಲೀಸರ ಗುಂಡಿಗೆ ಬಲಿ!



**ವಿಜಯಪುರ:** ಸಿಂದಗಿ ತಾಲ್ಲೂಕಿನ ರಾಂಪುರ ಗ್ರಾಮದ ಹೊರವಲಯದಲ್ಲಿ ಶನಿವಾರ ನಡೆದ ಎನ್‌ಕೌಂಟರ್‌ನಲ್ಲಿ ಕುಖ್ಯಾತ ರೌಡಿ ಶೀಟರ್ ಯೂನಸ್ ಇಕ್ಲಾಸ್ ಪಟೇಲ್(35) ಎಂಬಾತನನ್ನು ಪೊಲೀಸರು ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ.

ಪೊಲೀಸ್ ಮೂಲಗಳ ಪ್ರಕಾರ, ಅಪರಾಧಿ ಯೂನಸ್ ಗುರುವಾರ ವ್ಯಕ್ತಿಯೊಬ್ಬರಿಗೆ ಚಾಕು ತೋರಿಸಿ, ಅವರಿಂದ 25,000 ರೂ. ದೋಚಿ, ಅವರ ಬೈಕ್ ನೊಂದಿಗೆ ಪರಾರಿಯಾಗಿದ್ದ. ಈ ದರೋಡೆಗೆ ಸಂಬಂಧಿಸಿದಂತೆ ಗಾಂಧಿ ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಯೂನಸ್, ಅಲ್ಮೇಲ್ ತಾಲ್ಲೂಕಿನ ತನ್ನ ಹುಟ್ಟೂರಾದ ದೇವಾಂಗಾಂವ್ ಗ್ರಾಮದ ಕಡೆಗೆ ಹೋಗುತ್ತಿದ್ದಾನೆ ಎಂಬ ಖಚಿತ ಮಾಹಿತಿ ದೊರೆತ ನಂತರ ಪೊಲೀಸ್ ತಂಡ ಇಂದು ರಾಂಪುರ ಬಳಿ ಆತನನ್ನು ತಡೆದಿದೆ. ಬಳಿಕ ಪೊಲೀಸರು ಆತನನ್ನು ಬಂಧಿಸಲು ಪ್ರಯತ್ನಿಸಿದಾಗ, ಆರೋಪಿ ಇಬ್ಬರು ಕಾನ್‌ಸ್ಟೆಬಲ್‌ಗಳು ಮತ್ತು ಇನ್ಸ್‌ಪೆಕ್ಟರ್ ಪ್ರದೀಪ್ ತಳಕೇರಿ ಮೇಲೆ ಚಾಕುವಿನಿಂದ ಹಲ್ಲೆ ಮಾಡಿ, ಪರಾರಿಯಾಗಲು ಯತ್ನಿಸಿದ್ದಾನೆ

ಈ ವೇಳೆ ಇನ್ಸ್‌ಪೆಕ್ಟರ್ ತಳಕೇರಿ ಮೊದಲು ಗಾಳಿಯಲ್ಲಿ ಗುಂಡು ಹಾರಿಸಿ, ಎಚ್ಚರಿಕೆ ನೀಡಿದ್ದಾರೆ. ಆದರೆ ಆರೋಪಿ ತನ್ನ ದಾಳಿಯನ್ನು ಮುಂದುವರಿಸುತ್ತಿದ್ದಂತೆ, ಆತ್ಮರಕ್ಷಣೆಗಾಗಿ ಯೂನಸ್ ಕಾಲಿಗೆ ಗುಂಡು ಹಾರಿಸಿದರು.

ಗಂಭೀರವಾಗಿ ಗಾಯಗೊಂಡಿದ್ದ ಆರೋಪಿಗೆ ಸಿಂದಗಿ ತಾಲೂಕು ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿ ನಂತರ ವಿಜಯಪುರ ಜಿಲ್ಲಾ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ವೈದ್ಯರು ಆತ ಮೃತಪಟ್ಟಿರುವುದಾಗಿ ಘೋಷಿಸಿದರು.

## ದೀಪಾವಳಿಗೆ ಮನೆ ಬಾಗಿಲಲ್ಲಿ ಹಚ್ಚಿದ್ದ ದೀಪ ಹೊತ್ತಿ ಉರಿದು ಅವಘಡ; 7 ಜನರಿಗೆ ಗಾಯ, ಮನೆ ಸುಟ್ಟು ಭಸ್ಮ

**ಬಾಗಲಕೋಟೆ:** ದೇಶಾದ್ಯಂತ ದೀಪಾವಳಿ ಹಬ್ಬ ನಾಳೆ ಆರಂಭವಾಗುತ್ತಿದೆ. ಜನರು ಲಗುಬಗೆಯಿಂದ ಸಿದ್ಧತೆ ನಡೆಸುತ್ತಿದ್ದಾರೆ. ಬಾಗಲಕೋಟೆ ತಾಲ್ಲೂಕಿನ ಗದ್ದನಕೇರಿ ಕ್ರಾಸ್‌ನಲ್ಲಿರುವ ಮನೆಯೊಂದರ ಬಾಗಿಲು ಎದುರು ಹಚ್ಚಿದ್ದ ದೀಪದಿಂದ ಬೆಂಕಿ ತಗುಲಿ ಏಳು ಜನರಿಗೆ ಗಾಯಗಳಾಗಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಗಾಯಾಳುಗಳನ್ನು ಬಾಗಲಕೋಟೆ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

**ಆಗಿದ್ದೇನು?:** ಉಮೇಶ್ ಮೇಟಿ ಎಂಬುವವರ ಕಟ್ಟಡದಲ್ಲಿ ಬೆಂಕಿ ಅವಘಡ ಸಂಭವಿಸಿದೆ. ಇದೇ ಕಟ್ಟಡದಲ್ಲಿ ರಾಜೇಂದ್ರ ತಪಶೆಟ್ಟಿ ಕುಟುಂಬ ಸೇರಿ ಮತ್ತೊಂದು ಕುಟುಂಬ ಬಾಡಿಗೆಗೆ ಇದ್ದರು. ರಾಜೇಂದ್ರ ತಪಶೆಟ್ಟಿ ಕುಟುಂಬಸ್ಥರು ಮನೆ ಎದುರು ದೀಪ ಹಚ್ಚಿದ್ದರು.

ಆ ದೀಪದ ಬೆಂಕಿ ಮನೆ ಎದುರಿಗೆ ಬಿದ್ದ ಆಯಿಲ್‌ಗೆ ತಗುಲಿ ಬೆಂಕಿ ಹೊತ್ತಿದೆ. ಮನೆ ಮುಂದಿನ ಎರಡು ಬೈಕ್ ಸುಟ್ಟು, ಮನೆಗೂ ಬೆಂಕಿ ಪ್ರವೇಶಿಸಿದೆ. ಅಡುಗೆ ಮನೆಯ ಸಿಲಿಂಡರ್ ಕೂಡ ಸೋರಿ ಮತ್ತಷ್ಟು ಬೆಂಕಿಯ ತೀವ್ರತೆ ಹೆಚ್ಚಾದೆ. ನೋಡನೋಡುತ್ತಿದ್ದಂತೆ ಮನೆ ಸುಟ್ಟು ಕರಕಲಾಗಿ ಹೋಗಿದೆ.

ರಾಜೇಂದ್ರ ತಪಶೆಟ್ಟಿ ಬೋರ್ ವೆಲ್ ಕೆಲಸ ಮಾಡುತ್ತಿದ್ದರು. ಮನೆ ಎದುರು ಬೋರ್ ವೆಲ್??? ವಾಹನಗಳ ಆಯಿಲ್, ಗ್ರೀಸ್ ಬಿದ್ದಿತ್ತು. ದೀಪದ ಬೆಂಕಿ ಆಯಿಲ್, ಗ್ರೀಸ್‌ಗೆ ತಗುಲಿ ನಂತರ ಬೈಕ್ ಮತ್ತು ಮನೆಗೂ ವ್ಯಾಪಿಸಿದೆ. ಈ ವೇಳೆ ಹೊರಗಡೆ ಓಡಿ ಬಂದು ರಾಜೇಂದ್ರ ತಪಶೆಟ್ಟಿ ಕುಟುಂಬ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದೆ.

# ಮಾಯಕೊಂಡ ಕ್ಷೇತ್ರದ ಅಭಿವೃದ್ಧಿ ಕುಂಠಿತ : ಮಾಜಿ ಶಾಸಕ ಬಸವರಾಜ್ ನಾಯ್ಕ



**ಮಾಯಕೊಂಡ :** 'ಮಾಯಕೊಂಡ ಕ್ಷೇತ್ರದಲ್ಲಿ ರಸ್ತೆ ಸಂಪೂರ್ಣ ಹಾಳಾಗಿವೆ. ಯಾವುದೇ ಅಭಿವೃದ್ಧಿ ಕಾಮಗಾರಿಗಳೂ ನಡೆಯುತ್ತಿಲ್ಲ. ಶಾಸಕರಿಗೇ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಗಮನವಿಲ್ಲ, ಎಂದು ಮಾಜಿ ಶಾಸಕ ಬಸವರಾಜ ನಾಯ್ಕ ಆರೋಪಿಸಿದರು.

ಇಲ್ಲಿನ ಪವಾಸಿ ಮಂದಿರದಲ್ಲಿ ನಡೆಸಿದ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು.

ಕ್ಷೇತ್ರದ ಸುಮಾರು 110 ಗ್ರಾಮಗಳಲ್ಲಿ ರಸ್ತೆ ಗುಂಡಿಬಿದ್ದಿವೆ. ಪಿಡ್ಲ್ಯೂಡಿ, ನೀರಾವರಿ ಇಲಾಖೆ ರಸ್ತೆ ಹಾಳಾಗಿವೆ. ನಾನು ಶಾಸಕನಾಗಿದ್ದಾಗ ಭದ್ರಾ ಚಾನೆಲ್ ಆಧುನೀಕರಣಕ್ಕೆ 700 ಕೋಟಿ ಬಿಡುಗಡೆ ಮಾಡಲಾಗಿತ್ತು, ಅದೆಲ್ಲ ಕಿತ್ತು ಹೋಗಿದೆ. ನಾಲೆ ಆಧುನೀಕರಣವಾಗದ ಕಾರಣ ಕೊನೆ ಭಾಗದವರಿಗೆ ನೀರು ತಲುಪುತ್ತಿಲ್ಲ. ಎಸ್ಸಿಎಸ್ಪಿ, ಟಿಎಸ್ಪಿ ಹಣ ಎಲ್ಲಿ ಹೋಗ್ತಿದೆ ಎಂಬುದನ್ನು ಶಾಸಕರೇ ಪತ್ತೆಹಚ್ಚಬೇಕು, ಎಂದು ವ್ಯಂಗ್ಯವಾಡಿದರು.

ನಾನು ಶಾಸಕನಾಗಿದ್ದಾಗ ಸುವರ್ಣ ಗ್ರಾಮ ಯೋಜನೆಯಡಿ ಕ್ಷೇತ್ರದ ಅಭಿವೃದ್ಧಿಗೆ 200 ಕೋಟಿ ಅನುದಾನ ತರಲಾಗಿತ್ತು. ಎಲ್ಲಾ ಹಳ್ಳಿಗಳಲ್ಲಿಯೂ ಜನ ನಿಮ್ಮ ಕಾಲದ ರಸ್ತೆ ಎನ್ನುತ್ತಾರೆ. ನಾನು ಶಾಸಕನಾಗಿದ್ದಾಗ ಮಾಡಿಸಿದ ರಸ್ತೆ ಹಾಳಾಗಿಲ್ಲ ಆದರೆ ಈಚಿನ ರಸ್ತೆಗಳೇ ಕಿತ್ತು ಹೋಗಲು ಪರ್ಸೆಂಟೇಜ್ ವ್ಯವಹಾರ ಕಾರಣವಿರಬಹುದು. ಇಂದು ಕ್ಷೇತ್ರದ ಸ್ಥಿತಿ ನೋಡಿದರೆ ದುಃಖವಾಗುತ್ತದೆ ಎಂದು ವಿಷಾದಿಸಿದರು.

ನಮ್ಮ ಸರ್ಕಾರದಿಂದ ಉಗ್ರಾಣ ನಿಗಮ ಉದ್ಘಾಟನೆಗೆ ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ ಬಂದಿದ್ದರು. 32 ಪ್ರಾಥಮಿಕ ಆರೋಗ್ಯ ಕೇಂದ್ರ ಒಂದೇ ದಿನ ಉದ್ಘಾಟಿಸಲಾಗಿತ್ತು, ಎಂದು ಮೆಲುಕು ಹಾಕಿದರು.

ಮಾಯಕೊಂಡ ಕ್ಷೇತ್ರ ಬಿಜೆಪಿ ಅಧ್ಯಕ್ಷ ಸಚಿನ್, ಕಳೆದ ಬಾರಿ ಪತ್ರಿಕಾಗೋಷ್ಠಿಯಲ್ಲಿ ಅಭಿವೃದ್ಧಿ ಕೈಗೊಳ್ಳಲು ಒತ್ತಾಯಿಸಿದ್ದರೂ ಕಾಮಗಾರಿ ಕುರಿತು ನೀಡಿದ ಹೇಳಿಕೆಗೆ ಶಾಸಕರು ನಮ್ಮ ಆರೋಪಕ್ಕೆ ಉತ್ತರ ನೀಡಲಿಲ್ಲ. ಉಡಾಫೆ ಮಾತನಾಡಿದರು. ಈಗಿನ ಸಂಸದರು ಸಿಟಿಯಲ್ಲಿ ಮಾತ್ರ ಓಡಾಡಿಕೊಂಡಿದ್ದಾರೆ. ಹಳ್ಳಿಗಳಿಗೇ ಭೇಟಿ ನೀಡುತ್ತಿಲ್ಲ. ಜನರಿಗೆ ಸ್ಪಂದಿಸಲಿಲ್ಲ. ಬಿಜೆಪಿ ಸರ್ಕಾರದಲ್ಲಿ ಮಂಜೂರಾದ ಬಸ್ ನಿಲ್ದಾಣ ಇನ್ನೂ ನಿರ್ಮಾಣವಾಗಲಿಲ್ಲ. ಕ್ಷೇತ್ರದಲ್ಲಿ ಒಟ್ಟಾರೆ ಅಭಿವೃದ್ಧಿ ಶೂನ್ಯವಾಗಿದೆ ಎಂದು ಆರೋಪಿಸಿದರು.

ಬಿಜೆಪಿ ಮುಖಂಡ ಗುರುನಾಥ್ ವಠಾತನಾಗೆಲ್ಲಿ ಸಿದ್ದಗುಡ್ಡಲ್ಲಿರುವ ಕೆಂಚಮಾರನಹಳ್ಳಿ ಕೆರೆ ಅಭಿವೃದ್ಧಿಯಾಗಬೇಕು. ಸಮುದಾಯ ಆರೋಗ್ಯ ಕೇಂದ್ರ ನಿರ್ಮಾಣವಾಗಬೇಕು ಎಂಬ ಬೇಡಿಕೆ ಈಡೇರಿಲ್ಲ.ಶಾಸಕರು ಕೂಡಲೇ ಕಾರ್ಯಪ್ರವೃತ್ತರಾಗಬೇಕು ಎಂದರು.

ಮುಖಂಡರಾದ ಪೂಜಾರ್ ಅಶೋಕ್, ರಾಜಶೇಖರ ಸಂಡೂರು, ಮಾದಪ್ಪರ ಮಾದಪ್ಪ, ರಂಗನಾಥ್, ಶಿಕುಮಾರ್ ಮತ್ತಿತರರು ಇದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ನೀವು ಆರೋಗ್ಯ ಸಮಸ್ಯೆಯಿಂದಾಗಿ ಒಂದು ಪ್ರಮುಖ ಕೆಲಸಕ್ಕೆ ಹೋಗಲು ಸಾಧ್ಯವಾಗದಿರುವುದರಿಂದ ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಆದರೆ ನಿಮ್ಮನ್ನು ಮೇಲೆತ್ತಲು ನಿಮ್ಮ ತಾರ್ಕಿಕತೆಯನ್ನು ಬಳಸಿ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು ಮತ್ತು ನಿಮ್ಮ ಹತ್ತಿರ ಸಾಲ ಕೇಳಬಹುದು. ಅವರಿಗೆ ಹಣವನ್ನು ಹಿಂದಿರುಗಿಸಿ ನೀವು ಆರ್ಥಿಕ ಬಿಕ್ಕಟ್ಟಿಗೆ ಸಿಲುಕಬಹುದು.

### ವೃಷಭ ರಾಶಿ

ನಿಮ್ಮ ಒತ್ತಡ ನಿವಾರಿಸಲು ಕುಟುಂಬದ ಸದಸ್ಯರ ಬೆಂಬಲ ಪಡೆಯಿರಿ. ಅವರ ಸಹಾಯವನ್ನು ಗೌರವದಿಂದ ಸ್ವೀಕರಿಸಿ. ನೀವು ಭಾವನೆಗಳು ಮತ್ತು ಒತ್ತಡಗಳನ್ನು ಒಳಗೆ ಅದುಮಿಡಬಾರದು. ಆಗಾಗ ನಿಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳುವುದು ಸಹಾಯ ಮಾಡುತ್ತದೆ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ.

### ಮಿಥುನ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ. ಹೊಸ ವಿಷಯಗಳ ಬಗ್ಗೆ ಗಮನ ಹರಿಸಿ ಮತ್ತು ನಿಮ್ಮ ಅತ್ಯುತ್ತಮ ಸ್ನೇಹಿತರ ಬಳಿ ಸಹಾಯ ಕೇಳಿ. ನಿಮ್ಮ ಸಂಪೂರ್ಣ ಹಾಗೂ ಪ್ರಶ್ನಾತೀತ ಪ್ರೀತಿ ಒಂದು ಜಾದುವಿನಂಥ ಸೃಜನಶೀಲ ಶಕ್ತಿಯನ್ನು ಹೊಂದಿದೆ.

### ಕರ್ಕ ರಾಶಿ

ಮನರಂಜನೆ ಮತ್ತು ಮೋಜಿನ ಒಂದು ದಿನ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಪ್ರೀತಿಯಲ್ಲಿ ನಿರಾಶೆಯಾಗಬಹುದಾದರೂ ಪ್ರೇಮಿಗಳು ಯಾವತ್ತೂ ಮುಖಸ್ತುತಿ ಮಾಡುವವರಾದ್ದರಿಂದ ನೀವು ಧೃತಿಗೆಡಬೇಡಿ. ನೀವು ನಿಮ್ಮ ಕೌಶಲ್ಯ ಮತ್ತು ಪ್ರತಿಭೆಗಳನ್ನು ಸರಿಯಾದ ಜನರಿಗೆ ತೋರಿಸಿದಲ್ಲಿ ನೀವು ಶೀಘ್ರದಲ್ಲೆ ಹೊಸ ಮತ್ತು ಒಳ್ಳೆಯ ಸಾರ್ವಜನಿಕ ವ್ಯಕ್ತಿತ್ವವನ್ನು ಹೊಂದಲು ಸಾಧ್ಯವಿದೆ.

### ಸಿಂಹ ರಾಶಿ

ಇಂದು, ನಿಮ್ಮ ಆರೋಗ್ಯವು ಆರೋಗ್ಯಕರವಾಗಿರುತ್ತದೆ ಎಂದು ನಿರೀಕ್ಷಿಸಲಾಗಿದೆ. ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಪ್ರತಿಯೊಂದು ವಿಷಯದಲ್ಲಿ ಪ್ರೀತಿಯನ್ನು ತೋರಿಸುವುದು ಸರಿಯಿಲ್ಲ. ಇದು ನಿಮ್ಮ ಸಂಬಂಧವನ್ನು ಸುಧಾರಿಸುವ ಬದಲು ಹಾಳುಮಾಡುತ್ತದೆ.

### ಕನ್ಯಾ ರಾಶಿ

ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ಸಂಬಂಧಿಕರ ಜೊತೆ ಕಳೆದ ಸಮಯ ನಿಮಗೆ ಅನುಕೂಲಕರವಾಗಿರುತ್ತದೆ. ಪ್ರೀತಿಗಾಗಿ ವಿಶೇಷ ದಿನ-ರಾತ್ರಿಗಾಗಿ ಯಾವುದಾದರೂ ಯೋಜನೆ ಹಾಕಿ ಮತ್ತು ಇದನ್ನು ಸಾಧ್ಯವಾದಷ್ಟು ಪ್ರಣಯಮಯವಾಗಿಸಲು ಪ್ರಯತ್ನಿಸಿ. ಕೆಲಸದಲ್ಲಿ ಎಲ್ಲವೂ ನಿಮ್ಮ ಪರವಾಗಿ ಇದ್ದಂತೆ ತೋರುತ್ತದೆ.

### ತುಲಾ ರಾಶಿ

ಆರೋಗ್ಯಕ್ಕೆ ಸಂಬಂಧಿಸಿದಂತೆ ಈ ಅವಧಿ ಮಂದವಾಗಿರುವುದರಿಂದ ನೀವು ತಿನ್ನುವುದರ ಬಗೆಗೆ ಜಾಗರೂಕರಾಗಿರಿ. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು ಮತ್ತು ಅವರಿಗೆ ಸಹಾಯ ಮಾಡಿ ನೀವು ಸ್ವತಃ ಆರ್ಥಿಕ ಒತ್ತಡಕ್ಕೆ ಬರಬಹುದು. ಆದಾಗ್ಯೂ ಪರಿಸ್ಥಿತಿ ಬೇಗ ಸುಧಾರಿಸುತ್ತದೆ. ನಿಮ್ಮ ಹೆತ್ತವರ ಆರೋಗ್ಯದ ಬಗೆಗೆ ಹೆಚ್ಚುವರಿ ಗಮನ ಮತ್ತು ಎಚ್ಚರಿಕೆ ಅಗತ್ಯವಿದೆ.

### ವೃಶ್ಚಿಕ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ಸಾಮಾಜಿಕ ಸಮಾರಂಭಗಳು ಪ್ರಭಾವಿ ಮತ್ತು ಪ್ರಮುಖ ಜನರೊಡನೆ ನಿಮ್ಮ ಬಾಂಧವ್ಯವನ್ನು ಸುಧಾರಿಸಲು ಒಂದು ಪರಿಪೂರ್ಣ ಅವಕಾಶವಾಗಿರುತ್ತದೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ.

### ಧನು ರಾಶಿ

ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವದನ್ನು ಮಾಡಲು ಪ್ರಯತ್ನಿಸಿ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

### ಮಕರ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು  ಆದರೆ ಅದು ನಿಜವಲ್ಲ - ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೊಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ.

### ಕುಂಭ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸ ಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಕಲ್ಪನೆಗಳ ಹಿಂದೆ ಓಡಬೇಡಿ ಹಾಗೂ ಸಾಧ್ಯವಾದಷ್ಟೂ ವಾಸ್ತವವಾದಿಗಳಾಗಿರಿ.

### ಮೀನ ರಾಶಿ

ಸ್ನೇಹಿತನ ಜೊತೆಗಿನ ನಿಮ್ಮ ಅಪಾರ್ಥ ಕೆಲವು ಅಹಿತಕರ ಪ್ರತಿಕ್ರಿಯೆಗಳನ್ನು ಉಂಟುಮಾಡಬಹುದು - ಯಾವುದೇನಿರ್ಧಾರ ಕೈಗೊಳ್ಳುವ ಮೊದಲು ಸಮತೋಲಿತ ನೋಟ ಹೊಂದಿ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ ಆದರೆ ರಾತ್ರಿಯ ಸಮಯದಲ್ಲಿ ಯಾವುದೊ ಹಳೆಯ ವಿಷ್ಯದ ಬಗ್ಗೆ ನೀವು ಜಗಳವಾಡಬಹುದು.

## ವಿದೇಶಿ ಪ್ರವಾಸದಲ್ಲಿ ಕಿರಿಕಿರಿ ಪೊಲೀಸ್‌ಗೆ ದೂರು



**ಶಿವಮೊಗ್ಗ:** ನಮ್ಮ ವಿದೇಶಿ ಪ್ರವಾಸದಲ್ಲಿ ನಿಬಂಧನೆಯಂತೆ ನಡೆದುಕೊಳ್ಳದೆ, ನಮಗೆ ಸಾಕಷ್ಟು ಕಿರಿಕಿರಿಯನ್ನು ಉಂಟು ಮಾಡಿದ ಹಾಗೂ ತೊಂದರೆ ನೀಡಿದ ಶಿವಮೊಗ್ಗ ವಿನೋಬನಗರ ಸವಿ ಬೇಕರಿ ಬಳಿಯ ಟ್ರಾವೆಲ್ ಜೋನ್ ವಿರುದ್ಧ ಕ್ರಮ ಕೈಗೊಂಡು, ನಮಗೆ ನಾವು ಕಟ್ಟಿರುವ ಅರ್ಧದಷ್ಟು ಹಣವನ್ನು ವಾಪಸ್ ಕೊಡಿಸಬೇಕೆಂದು ವಿನಂತಿಸಿ ವಿನೋಬನಗರ ಪೊಲೀಸ್ ಪಿಐ ಸಂತೋಷ್ ಕುಮಾರ್ ಅವರಿಗೆ ಕಾಶಿಪುರದ ಎಸ್ ಮಂಜುನಾಥ್ ಹಾಗೂ ಪ್ರವಾಸ ಹೋಗಿದ್ದ 43 ಸ್ನೇಹಿತರು ಇಂದು ಮಧ್ಯಾಹ್ನ ದೂರು ನೀಡಿದರು.

ನಾವು 43 ಜನ ಸ್ನೇಹಿತರು ಥೈಲ್ಯಾಂಡ್ ದೇಶದ ಟ್ರಾಬಿ, ಪಟ್ಟಾಯ ಹಾಗೂ ಪುಕೆಟ್ ಗೆ ಕಳೆದ ಅಕ್ಟೋಬರ್ ಮೂರರಂದು ಶಿವಮೊಗ್ಗದಿಂದ ಪ್ರವಾಸ ಹೋಗಿದ್ದು, ನಮ್ಮ ಪ್ರವಾಸ ವ್ಯವಸ್ಥೆಯನ್ನು ಈ ಟ್ರಾವೆಲ್ ಜೋನ್ ಗೆ ನೀಡಿದ್ದೆವು. 70000 ನಿರ್ಧಾರವಾಗಿದ್ದು, ಅದನ್ನು ನೀಡಿದ್ದೆವು. ಅದಕ್ಕೆ ಪೂರಕವಾಗುವಂತೆ ಪ್ರವಾಸ, ವಸತಿ, ತಿಂಡಿ, ಊಟ, ಕ್ರೂಸ್ ಸೇರದಂತೆ ಎಲ್ಲಾ ಜವಾಬ್ದಾರಿಗಳನ್ನು ಒಪ್ಪಿಕೊಂಡಿದ್ದರು. ಆದರೆ ನಾವು ಪ್ರವಾಸಕ್ಕೆ ಹೋಗಿದ್ದಾಗ ಯಾವುದೇ ವ್ಯವಸ್ಥೆಯನ್ನು ಮಾಡದೆ ನಮಗೆ ವಸತಿಯನ್ನು ಸಹ ಸಿಗದಂತೆ ಮಾಡಿ ಊಟ ಹಾಗೂ ತಿಂಡಿ ವ್ಯವಸ್ಥೆಯನ್ನು ಸರಿಯಾಗಿ ಮಾಡಿಲ್ಲ ಎಂದು ಆರೋಪಿಸಿದರು.

ನಾವು ಕೇಳಿದರೆ ಶಿವಮೊಗ್ಗದಿಂದಲೇ ಹಾರಿಕೆ ಉತ್ತರ ನೀಡುತ್ತಾ ನಮ್ಮ ಇಡೀ ಪ್ರವಾಸವನ್ನು ನಿಜಕ್ಕೂ ಅತ್ಯಂತ ಕೆಟ್ಟದನಿಸುವಂತೆ ಮಾಡಿದರು. ಬಸ್ ನಲ್ಲಿಯೇ ಉಪವಾಸ ಕೂರಬೇಕಾದಂತ ಪರಿಸ್ಥಿತಿ ನಮಗೆ ನಿರ್ಮಾಣವಾಗಿತ್ತು ಎಂದರು.

ಈ ಸಂಬಂಧ ನಾವು ಪೊಲೀಸರಿಗೆ ದೂರು ನೀಡುವುದಾಗಿ ತಿಳಿಸಿದಾಕ್ಷಣ ನಮ್ಮಿಂದ ವಂಚನೆಯಾಗಿದೆ ಎಂದು ಅನಗತ್ಯ ದೂರು ನೀಡುವ ಪ್ರಯತ್ನ ಅವರಿಂದ ನಡೆಯಿತು. ಕೂಡಲೇ ತಾವುಗಳು ಈ ಟ್ರಾವೆಲ್ ಜೋನ್ ಅವರನ್ನು ಕರೆಸಿ ನಾವು ಪ್ರವಾಸಕ್ಕೆ ಹೋಗಿರುವ ಪ್ರಯಾಣದ ವೆಚ್ಚ ಹೊರತುಪಡಿಸಿ ಉಳಿದ ಅರ್ಧದಷ್ಟು ಹಣವನ್ನು ನಮಗೆ ವಾಪಸ್ ಕೊಡಿಸಬೇಕು ಹಾಗೂ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಂಜುನಾಥ್, ನರಸಿಂಹ, ಆರ್ಮುಗಂ, ಸಂದೀಪ್, ಕೆ., ನಾಗರಾಜ್, ಅರುಣ್, ಲೋಹಿತ್, ರಮೇಶ್, ಲೋಕೇಶ್, ಶಂಕರ್, ರಾಜು, ಆದರ್ಶ್, ರಾಜು, ಶರತ್, ಮೋಹನ್ ರಾಜ್, ಬಂಡೆ ಶೀನಣ್ಣ ಹಾಗೂ ಇತರರಿದ್ದರು.

## ಅ.24 ರಿಂದ 26ರ ವರೆಗೆ ದಕ್ಷಿಣ ಭಾರತ ಹಿರಿಯರ ಖೋ-ಖೋ ಚಾಂಪಿಯನ್‌ಷಿಪ್

**ದಾವಣಗೆರೆ:** ದಾವಣಗೆರೆಯಲ್ಲಿ ಮೊಟ್ಟ ಮೊದಲ ಬಾರಿಗೆ ಇದೇ ಅ.24 ರಿಂದ 26ರ ವರೆಗೆ ದಾವಣಗೆರೆ ಜಿಲ್ಲಾ ಕ್ರೀಡಾಂಗಣದಲ್ಲಿ 31ನೇ ದಕ್ಷಿಣ ಭಾರತ ಹಿರಿಯರ (ಪುರುಷ/ಮಹಿಳೆಯರ) ಖೋ-ಖೋ ಚಾಂಪಿಯನ್‌ಷಿಪ್‌ನ್ನು ಹಮ್ಮಿಕೊಳ್ಳಲಾಗಿದೆ ಎಂದು ದೂಡ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ ಹೇಳಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಕ್ಷಿಣ ಭಾರತ ಖೋ-ಖೋ ಕಮಿಟಿ, ಕರ್ನಾಟಕ ರಾಜ್ಯ ಖೋ-ಖೋ ಸಂಸ್ಥೆ, ದಾವಣಗೆರೆ ಜಿಲ್ಲಾ ಖೋ-ಖೋ ಸಂಸ್ಥೆ ಹಾಗೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ ಇವರುಗಳ ಸಹಕಾರದೊಂದಿಗೆ ಈ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಅವರು ತಿಳಿಸಿದರು.

ದಕ್ಷಿಣ ಭಾರತದ ರಾಜ್ಯಗಳಾದ ಕರ್ನಾಟಕ, ಕೇರಳ, ತಮಿಳುನಾಡು, ಆಂಧ್ರ ಪ್ರದೇಶ, ಪುದುಚೇರಿ ಹಾಗೂ ತೆಲಂಗಾಣ ರಾಜ್ಯಗಳಿಂದ 6 ಪುರುಷ ಹಾಗೂ 6 ಮಹಿಳಾ ತಂಡಗಳು, ರಾಜ್ಯ ತಂಡಗಳ ತರಬೇತುದಾರರು, ಸಹಾಯಕ ತರಬೇತುದಾರರು ಹಾಗೂ ತಂಡಗಳ ವ್ಯವಸ್ಥಾಪಕರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಪಂದ್ಯಾವಳಿಯನ್ನು ಅ.24 ಮತ್ತು 25ರಂದು ಬೆಳಿಗ್ಗೆ 8.00 ಗಂಟೆಯಿಂದ 11 ಗಂಟೆವರೆಗೆ, ಸಾಯಂಕಾಲ 4 ಗಂಟೆಯಿಂದ ರಾತ್ರಿ 10 ಗಂಟೆಯ ವರೆಗೆ ಹಾಗೂ ಅ.26ರಂದು ಬೆಳಿಗ್ಗೆ 11.00 ಗಂಟೆಗೆ ಅಂತಿಮ ಪಂದ್ಯ ನಡೆಯಲಿದೆ. ಪಂದ್ಯಾವಳಿಯನ್ನು ರೌಂಡ್ ರಾಬಿನ್ ಮಾದರಿಯಲ್ಲಿ ಹಾಗೂ ಖೋ-ಖೋ ಫೆಡರೇಷನ್ ಆಫ್ ಇಂಡಿಯಾದ ಹೊಸ ನಿಯಮದಂತೆ ಸಂಘಟಿಸಲಾಗುವುದು. ಎಂದು ತಿಳಿಸಿದರು.ಪಂದ್ಯಾವಳಿಯ ಉದ್ಘಾಟನೆಯನ್ನು ಅ.24ರ ಸಂಜೆ 6.30ಕ್ಕೆ ತಮ್ಮ ಅಧ್ಯಕ್ಷತೆಯಲ್ಲಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ನೆರವೇರಿಸಲಿದ್ದಾರೆ. ಗಣ್ಯರಾದ ಎಂ.ಎಸ್.ತ್ಯಾಗಿ, ಲೋಕೇಶ್ವರ, ಸೀತರಾಮ ರೆಡ್ಡಿ, ಜಸ್ಟಿನ್ ಡಿಸೋಜಾ, ಗಂಗಾಧರಸ್ವಾಮಿ, ಗಿತ್ತೇ ಮಾಧವ ವಿಠಲ್

, ದಾವಣಗೆರೆ, ಉಮಾ ಪ್ರಶಾಂತ್ ಸೇರಿದಂತೆ ಇತರೆ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದರು.ಅ.26 ರಂದು ಮಧ್ಯಾಹ್ನ 12.30ಕ್ಕೆ ವಿಜೇತರಿಗೆ ಬಹುಮಾನ ವಿತರಣೆ ಕಾರ್ಯಕ್ರಮ ನಡೆಯಲಿದ್ದು, ಜಿಲ್ಲಾ ಮಂತ್ರಿ ಎಸ್.ಎಸ್. ಮಲ್ಲಿಕಾರ್ಜುನ್ ವಿಜೇತರಿಗೆ ಬಹುಮಾನ ವಿತರಣೆ ಮಾಡುವರು ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ರಾಮಲಿಂಗಪ್ಪ, ಲೋಕೇಶ್, ಶಿವಮೂರ್ತಿ, ಕಬಡ್ಡಿ ಮಲ್ಲಿಕಾರ್ಜುನ್, ಎನ್. ಕೆ.ಕೊಟ್ರೇಶ್, ಚಂದ್ರಶೇಖರ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆ

**ಬಳ್ಳಾರಿ:** ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲೆಯ ಎಲ್ಲಾ ಸಾರ್ವಜನಿಕ ಪ್ರದೇಶಗಳಲ್ಲಿ 'ಸಿಗರೇಟ್ ಮತ್ತು ಇತರೆ ತಂಬಾಕು ಉತ್ಪನ್ನಗಳ ಅಧಿನಿಯಮ(ಕೋಟ್ಪಾ)-2003'ರ ಕಾನೂನನ್ನು ಪರಿಣಾಮಕಾರಿಯಾಗಿ ಜಾರಿಗೆ ಕುರಿತಂತೆ ಚರ್ಚಿಸಲು ಅ.24 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ "ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆ" ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಧ್ಯಕ್ಷರೂ ಆಗಿರುವ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ತಿಳಿಸಿದ್ದಾರೆ.

## ರೈತರಿಗೆ ಕೆರೆ ಹೂಳು ಮಣ್ಣು ಬಳಸಿಕೊಳ್ಳಲು ಮುಕ್ತ ಅವಕಾಶ, ಅಕ್ರಮ ಮರಳು ಗಣಿಗಾರಿಕೆ ತಡೆಗೆ ಕಠಿಣ ಕ್ರಮಕ್ಕೆ ಸೂಚನೆ

**ದಾವಣಗೆರೆ:** ಕೆರೆ ಹೂಳೆತ್ತುವ ವೇಳೆ ತೆಗೆಯುವ ಮಣ್ಣನ್ನು ರೈತರು ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳಬಹುದು ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಿಲ್ಲೆಯಲ್ಲಿರುವ ಯಾವುದೇ ಕೆರೆಗಳಲ್ಲಿ ರೈತರು ತಮೊಮ ತೋಟ, ಹೊಲಗಳಿಗೆ ಮಣ್ಣು ಬಳಸಿಕೊಳ್ಳಬಹುದು. ಇದರಿಂದ ಕೆರೆಯ ನೀರಿನ ಸಂಗ್ರಹಣಾ ಸಾಮರ್ಥ್ಯ ಹೆಚ್ಚುವ ಜೊತೆಗೆ ರೈತರ ಜಮೀನಿನ ಫಲವತ್ತತೆ ಹೆಚ್ಚಿ ರಸಗೊಬ್ಬರಗಳ ಬಳಕೆ ಪ್ರಮಾಣ ಕಡಿಮೆ ಮಾಡುವರು. ಆದರೆ ಆಳವಾಗಿ ತೆಗೆಯಲು ಮತ್ತು ವಾಣಿಜ್ಯ ಉದ್ದೇಶಕ್ಕೆ ಬಳಕೆ ಮಾಡುವಂತಿಲ್ಲ, ಮಾಡಿದಲ್ಲಿ ರಾಜಧಾನ ಪಾವತಿ ಮತ್ತು ಅನುಮತಿ ಪಡೆದುಕೊಳ್ಳಬೇಕಾಗುತ್ತದೆ. ಆದರೆ ಕೃಷಿ ಚಟುವಟಿಕೆಗಳಿಗೆ ಅನುಮತಿ ಬೇಕಿಲ್ಲ ಎಂದು ಸಷ್ಟಪಡಿಸಿದರು.

ಆದ್ದರಿಂದ ಅಧಿಕಾರಿಗಳು ತಾಲ್ಲೂಕುವಾರು ಊಳೆತ್ತಲು ಅರ್ಹವಿರುವ ಕೆರೆಗಳ ಸಮಗ್ರ ವರದಿ ಒಂದು ವಾರದೊಳಗೆ ನೀಡಬೇಕೆಂದು ಅಧಿಕಾರಿಗಳಿಗೆ ತಿಳಿಸಿದರು.

ಡಿಸೆಂಬರ್ ಅಂತ್ಯಕ್ಕೆ ಮರಳು ಲಭ್ಯ: ಜಿಲ್ಲೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಕುರಿತು ಹಲವು ದೂರುಗಳು ಕೇಳಿ ಬರುತ್ತಿವೆ. ಹಾಗಾಗಿ ಅಂತವರ ಮೇಲೆ ಕಾನೂನಾತ್ಮಕ ಕಠಿಣ ಕ್ರಮ ಕೈಗೊಳ್ಳಬೇಕು. ಹಾಗೆಯೇ ನಿಯಮಾನುಸಾರ ವೇ-ಬ್ರಿಡ್ಜಳಲ್ಲಿ ತೂಕ ನಿರ್ದಿಷ್ಟವಾಗಿದ್ದರೂ, ತದನಂತರ ನಿಗದಿತ ತೂಕಕ್ಕಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಅಕ್ರಮವಾಗಿ ಸಾಗಾಣೆ ಮಾಡಲಾಗುತ್ತಿದೆ. ಅಷ ಅಲ್ಲದೇ ವಾಹನಗಳ ಮೇಲ್ಪದರಗಳಲ್ಲಿ ಎಂಸ್ಯಾಂಡ್ ಮತ್ತು ಮಧ್ಯ ಭಾಗದಲ್ಲಿ ಮರಳು ತುಂಬಿ, ಎಂಸ್ಯಾಂಡ್ ರೂಪದಲ್ಲಿ ಮರಳು ಸಾಗಾಣೆ ಮಾಡುತ್ತಿರುವ ಬಗ್ಗೆ ದೂರುಗಳಿವೆ. ಈ ಕುರಿತು ಸೂಕ್ಷ್ಮವಾಗಿ ಗಮನಿಸಿ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರ ಪ್ರತಿ 1 ಟನ್ ಮರಳಿಗೆ ರೂ.850 ನಂತೆ ದರ ನಿಗದಿ ಮಾಡಿದೆ. ಜಿಲ್ಲೆಯಲ್ಲಿ 24 ಮರಳು ಬ್ಲಾಕ್ ಗಳನ್ನು ಗುರುತಿಸಿ ಟೆಂಡರ್ ಅಂತಿಮಗೊಳಿಸಲಾಗಿದೆ. ಡಿಸೆಂಬರ್ ಅಂತ್ಯದ ವೇಳೆಗೆ ಮನೆ ನಿರ್ಮಾಣ ಹಾಗೂ ಇನ್ನಿತರೆ ಕಾಮಗಾರಿಗಳಿಗೆ ಮರಳು ಲಭ್ಯವಾಗಲಿದೆ ಎಂದು ಮಾಹಿತಿ ನೀಡಿದರು.

19 ಮರಳು ಬ್ಲಾಕ್ ಗಳಿಗೆ ಟೆಂಡರ್:

ಜಿಲ್ಲಾದ್ಯಾಂತ ಒಟ್ಟು 24 ಮರಳು ಬಾಕ್ ಗಳನ್ನು ಗುರುತಿಸಲಾಗಿದೆ. ಈ ಪೈಕಿ 4 ಬ್ಲಾಕ್ ಸರ್ಕಾರಿ ಕಾಮಗಾರಿಗಳಿಗೆ, 19 ಬಾಕ್ ಗಳು ಸಾರ್ವಜನಿಕ ಉಪಯೋಗಕ್ಕೆ ನಿಗದಿಪಡಿಸಿದ್ದು, ಟೆಂಡರ್ ಅಂತಿಮವಾಗಿದೆ. ಇನ್ನೂ ಒಂದು ಬ್ಲಾಕ್ ಮಾತ್ರ ಬಾಕಿ ಇದೆ. ಟೆಂಡರ್ ದಾರರು ಷರತ್ತುಗಳನ್ವಯ ಮರಳು ಪೂರೈಕೆ ಮಾಡಲಾಗುತ್ತದೆ.ಬ್ಲಾಕ್ ವಿವರ: ಹರಿಹರ ತಾಲ್ಲೂಕಿನ ಗೋವಿನಾಳು, ಎಲೆಹೊಳೆ, ಚಿಕ್ಕಬಿದರೆ, ಗುತ್ತೂರು, ಮಳಲಹಳ್ಳಿ ಹಾಗೂ ಬಿಲಾಸನೂರು, ಹೊನ್ನಾಳಿ ತಾಲ್ಲೂಕಿನ ಬುಳ್ಳಾಪುರ, ಚಿಕ್ಕಬಸಾಪುರ, ರಾಂಪುರ, ಬಿಳೆಮಲ್ಲೂರು, ಹಿರೇಬಸೂರು, ಬುಳ್ಳಾಪುರ, ಬೀರಗೊಂಡನಹಳ್ಳಿ ಮತ್ತು ಬಾಗೇವಾಡಿ ವ್ಯಾಪ್ತಿಯಲ್ಲಿ ಹಾಗೂ ನ್ಯಾಮತಿ ತಾಲ್ಲೂಕಿನಲ್ಲಿ ಗೋವಿನಕೋವಿ, ಮಾರಿಗೊಂಡನಹಳ್ಳಿ, ತಗ್ಗಿಹಳ್ಳಿ ಮತ್ತು ಕೋಟೆಹಾಲ್ ನಲ್ಲಿ ಮರಳು ಬ್ಲಾಕ್ ಗುರುತಿಸಲಾಗಿದೆ ಎಂದರು.ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್ ಹಾಗೂ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಪಟಾಕಿ ಸ್ಟಾಲ್‌ಗಳಲ್ಲಿ ಮಕ್ಕಳನ್ನು ಬಳಸದಂತೆ ಸೂಚನೆ

**ಚಿಕ್ಕಮಗಳೂರು:** ದೀಪಾವಳಿ ಪಟಾಕಿ ತಯಾರಿಕೆ ಮಾರಾಟ ಹಾಗೂ ಇತರೆ ಅಪಾಯಕಾರಿ ಉದ್ದಿಮೆಗಳಲ್ಲಿ ಹಾಗೂ ಅಂಗಡಿಗಳಲ್ಲಿ 18 ವರ್ಷದ ಒಳಗಿನ ಮಕ್ಕಳನ್ನು ಕೆಲಸಕ್ಕೆ ಬಳಸಿಕೊಳ್ಳದಂತೆ ಕಾರ್ಮಿಕ ಇಲಾಖೆ ಸೂಚಿಸಿದೆ.

ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಷೇಧಿಸಲು ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕ ಕಾಯ್ದೆ 1986 ತಿದ್ದುಪಡಿ 2016 ಅನ್ನು ಸರ್ಕಾರ ಜಾರಿಗೊಳಿಸಿದೆ. ಕಾಯ್ದೆಯನ್ವಯ ಎಲ್ಲಾ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಎಲ್ಲಿಯಾದರೂ ಈ ವಯಸ್ಸಿನವರು ನೇಮಕ ಮಾಡಿರುವುದು ಕಂಡು ಬಂದರೆ ಪಟಾಕಿ ಅಂಗಡಿ, ಉದ್ದಿಮೆಗಳ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಸಹಾಯಕ ಕಾರ್ಮಿಕ ಆಯುಕ್ತರು ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಸದಸ್ಯ ಕಾರ್ಯದರ್ಶಿ ಸುಭಾಷ್ ಎಂ.ಆಲದಕಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಬಳ್ಳಾರಿ:** ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲ್ಲೂಕಿನ ಚಿಕ್ಕಜೋಗಿಹಳ್ಳಿಯಲ್ಲಿರುವ ಜವಾಹರ ನವೋದಯ ವಿದ್ಯಾಲಯದ 9ನೇ ಮತ್ತು 11ನೇ ತರಗತಿಯ (2026-27ನೇ ಸಾಲಿಗಾಗಿ) ಪ್ರವೇಶ ಪರೀಕ್ಷೆಗೆ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಅಕ್ಟೋಬರ್ 23 ರ ವರೆಗೆ ವಿಸ್ತರಿಸಲಾಗಿದೆ.ಆಸಕ್ತರು ಆನ್ ಲೈನ್ ವೆಬ್‌ಸೈಟ್: 9ನೇ ತರಗತಿಗಾಗಿ-https://cbseitms.nic.in/2025/nvsix9/registrationclassIX/registrationclassIX ಮತ್ತು 11ನೇ ತರಗತಿಗಾಗಿ- https://cbseitms.nic.in/2025/nvsxi_11/registrationclassXl/registrationclassXI ಗೆ ಭೇಟಿ ನೀಡಬಹುದು ಎಂದು ವಿದ್ಯಾಲಯದ ಪ್ರಾಚಾರ್ಯ ಸುದೇಶ ಗೋಪಾಲ ಮಲಾಜುರೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆಗಳಿಗೆ ರೋಗ ಭಾದೆ, ರೈತರು ನಿರ್ವಹಣಾ ಕ್ರಮವಹಿಸಿ

**ಶಿವಮೊಗ್ಗ:** ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಕೂರಿಗೆ ಮತ್ತು ನಾಟಿ ಮಾಡಿದ ಭತ್ತದ ಬೆಳೆಯು 45 ರಿಂದ 75 ದಿವಸಗಳವರೆಗಿನ ಅವಧಿಯ ಬೆಳೆ ಇದೆ. ಆದರ ಇತ್ತೀಚಿನ ದಿನಗಳಲ್ಲಿ ಬೀಳುತ್ತಿರುವ ತುಂತುರು ಮಳೆ ಹಾಗೂ ತಾಪಮಾನದಿಂದ ವಾತಾವರಣದಲ್ಲಿ ಹೆಚ್ಚಿನ ಆರ್ದ್ರತೆ ಉಂಟಾಗಿ ಅಲ್ಲಲ್ಲಿ ಕೀಟ ಮತ್ತು ರೋಗ ಭಾದೆಗಳನ್ನ ಕಂಡುಬರುತ್ತಿದ್ದು, ಸರಿಯಾಗಿ ನಿರ್ವಹಣಾ ಕ್ರಮಗಳನ್ನು ಅನುಸರಿಸುವ ಕ್ರಮದ ಮಾಹಿತಿಯನ್ನು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರು ರೈತರಿಗೆ ನೀಡಿದ್ದಾರೆ

ಎಲೆ ಸುರುಳಿ ಹುಳು /ಕೊಳವೆ ಹುಳು:  ಈ ಹುಳುಗಳು ಮಡಚಿ ಕೊಳವೆ ಕೋಶದಲ್ಲಿ ಎಲೆಯನ್ನು ತಿನ್ನುತ್ತವೆ. ಸಾರಜನಕದ ಉಪಯೋಗವನ್ನು ಕಡಿಮೆಗೊಳಿಸಿ ಹಾಗೂ ಬದುಗಳನ್ನು ಸ್ವಚ್ಛಗೊಳಿಸುವುದು. ಕ್ವಿನಾಲ್ ಫಾಸ್ 2 ಮಿಲೀ ಅಥವಾ ಇಂಡಾಕ್ಸಿ ಕಾರ್ಬ್ 14.5 ಎಸ್‌ಸಿ 0.5 ಮಿಲಿ ಪ್ರತಿ ಲೀ ನೀರಿಗೆ ಬೆರೆಸಿ ಸಿಂಪಡಣೆ ಕೈಗೊಳ್ಳುವ ಮೂಲಕ ಹುಳುಗಳನ್ನು ಹತೋಟಿಗೆ ತರಬಹುದು.

ಕಾಂಡಕೊರೆಯುವ ಹುಳು:- ಸುಳಿ ಒಣಗುವುದು ಮತ್ತು ಬಿಳಿ ತೆನೆಯಾಗಿ ಕಾಳು ಜೊಳ್ಳಾಗುವುದರಲ್ಲಿ ಈ ಹುಳುಗಳು ಕಂಡು ಬರಲಿದ್ದು, ಕ್ಲೋರೋಪೈರಿಪಾಸ್ 2 ಮಿಲಿ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಣೆ ಕೈಗೊಳ್ಳುವ ಮೂಲಕ ಹುಳುಗಳನ್ನು ಹತೋಟಿಗೆ ತರಬಹುದು.

ಕಂದುಜಿಗಿ ಹುಳು:- ಈ ಹುಳುಗಳು ಭತ್ತದ ಕಾಂಡದ ಬುಡದಲ್ಲಿ ಗುಂಪಾಗಿ ರಸಹೀರುವುದರಿಂದ ಅಲ್ಲಲ್ಲಿ ಸಸಿಗಳು ಮೊದಲು ಹಳದಿ ಬಣ್ಣಕ್ಕೆ ತಿರುಗಿ, ನಂತರ ಒಣಗಿ ಹೋಗಿ ವೃತ್ತಾಕಾರದಲ್ಲಿ ಬೆಳೆ ಸುಟ್ಟಂತೆ ಕಾಣಲಿದೆ. ಸಾರಜನಕದ ಉಪಯೋಗವನ್ನು ಕಡಿಮೆಗೊಳಿಸಿ ಗದ್ದೆಯಲ್ಲಿ ನೀರನ್ನು ಬಸಿದು ಪ್ರತಿ 10 ಅಡಿಗೆ ಪೂರ್ವ ಪಶ್ಚಿಮಾಭಿಮುಖವಾಗಿ ಗಾಳಿ ಆಡುವಂತೆ

ಪಾತಿ ಮಾಡುವುದು ಹಾಗೂ ಕ್ಲೋರೋಪೈರಿಪಾಸ್/ಪೋಸಲನ್ 2 ಮಿಲಿ ಅಥವಾ ಇಮಿಡಾ ಕ್ಲೋಪ್ರಿಡ್ 0.5 ಮಿಲಿ ಪ್ರತಿ ಲೀಟರ್‌ಗೆ ಬೆರೆಸಿ ಬುಡಕ್ಕೆ ಸಿಂಪಡಣೆ ಕೈಗೊಳ್ಳುವ ಮೂಲಕ ಹುಳುಗಳನ್ನು ಹತೋಟಿಗೆ ತರಬಹುದು.ಬೆಂಕಿರೋಗ:- ಈ ರೋಗದಲ್ಲಿ ಎಲೆ ಮತ್ತು ಕಾಂಡದ ಮೇಲೆ ಕದಿರಿನ ಆಕಾರದ ಚುಕ್ಕೆ ಕಂಡು ಬರುತ್ತದೆ. ಈ ಚುಕ್ಕೆಗಳ ಅಂಚು ಕಂದು ಹಾಗೂ ಮಧ್ಯ ಭಾಗವು ಬೂದಿಬಣ್ಣದಿಂದ ಕೂಡಿರಲಿದ್ದು, ಕೊನೆಗೆ ಬೆಳೆ ಬೆಂಕಿಯಿಂದ ಸುಟ್ಟಂತೆ ಕಾಣುತ್ತದೆ. ಟ್ರೈಸೈಕ್ಲೋಕೋಲ್ 0.6 ಗ್ರಾಂ, ಕಿಟಾಜಿನ್ 1 ಮಿಲೀ ಅಥವಾ ಕಾರ್ಬನ್ ಡೈಜಿಮ್ 1 ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರೆಸಿ ಬೆಳೆಗೆ ಸಿಂಪಡಿಸುವ ಮೂಲಕ ರೋಗವನ್ನು ಹತೋಟಿಗೆ ತರಬಹುದು.ಎಲೆ ಕವಚದ ಮಚ್ಚೆ ರೋಗ:- ಈ ರೋಗದಲ್ಲಿ ಎಲೆ ಹೊದಿಕೆ ಮೇಲೆ ಅಂಡಾಕಾರದ ಚುಕ್ಕೆಗಳು ಕಂಡಬಂದು ಬೂದಿ ಮಿಶ್ರಿತ ಬಿಳಿ ಬಣ್ಣದಿಂದ ಕೂಡಿರುತ್ತದೆ ಹಾಗೂ ಕಂದು ಬಣ್ಣದ ಗುಂಗುರದಿಂದ ಅವೃತವಾಗಿರುತ್ತದೆ. ಶಿಲೀಂಧ್ರವು ನೀರಿನ ಮೇಲ್ಭಾಗದ ಗಿಡದ ಎಲ್ಲಾ ಭಾಗಗಳಿಗೆ ಹಾನಿಯುಂಟು ಮಾಡುತ್ತದೆ. ಸಾರಜನಕದ ಉಪಯೋಗವನ್ನು ಕಡಿಮೆಗೊಳಿಸಿ, ಕಾರ್ಬನ್ ಡೈಜಿಮ್ 50 ಡಬ್ಲ್ಯೂ.ಪಿ 1 ಗ್ರಾಂ, ಮ್ಯಾಂಕೋಜಿಬ್ 75 ಡಬ್ಲ್ಯೂ.ಪಿ 2 ಗ್ರಾಂ ಅಥವಾ ಹೆಕ್ಸಾಕೋನಾಜೋಲ್ ಶೇ.5 ಎಸ್‌ಸಿ 2 ಮಿಲೀ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸುವ ಮೂಲಕ ರೋಗವನ್ನು ಹತೋಟಿಗೆ ತರಬಹುದು.ದುಂಡಾಣು ಎಲೆ ಅಂಗಮಾರಿ ರೋಗ:- ಈ ರೋಗದಲ್ಲಿ ಎಲೆಗಳ ನರಗಳ ಮಧ್ಯದಲ್ಲಿ ಹಳದಿ ಅಥವಾ ಕಿತ್ತಳೆ ಬಣ್ಣದ ಉದ್ದನೆಯ ಮಚ್ಚೆಗಳು ಕಾಣುತ್ತವೆ. ಸ್ಟ್ರೆಪ್ಟೋಸೈಕ್ಲಿನ್ 0.6 ಗ್ರಾಂ ಪ್ರತಿ 16 ಲೀ ನೀರಿಗೆ ಜೊತೆಗೆ ತಾಮ್ರದ ಆಕ್ಸಿಕ್ಲೋರೈಡ್ 1 ಗ್ರಾಂ ಪ್ರತಿ ಲೀಟರ್ ನೀರಿಗೆ ಮಿಶ್ರಣ ಮಾಡಿ ಸಿಂಪಡಿಸುವ ಮೂಲಕ ರೋಗವನ್ನು ಹತೋಟಿ ತರಬಹುದು.

## ಹರಿಹರ ಶ್ರೀ' ಪ್ರಶಸ್ತಿಗೆ 'ಮಣ್ಣೇ ಮೊದಲು' ಕವನ ಸಂಕಲನ ಆಯ್ಕೆ



**ಹರಿಹರ:** ಸಾಹಿತ್ಯ ಸಂಗಮ ವೇದಿಕೆ 2023ನೇ ಸಾಲಿನಲ್ಲಿ ಪ್ರಕಟವಾದ ಕವನ ಸಂಕಲನಗಳನ್ನು ಪ್ರಶಸ್ತಿಗಾಗಿ ಆಹ್ವಾನಿಸಲಾಗಿತ್ತು. 2023ನೇ ಸಾಲಿಗೆ ಪಾಪುಗುರು ಅವರ 'ಮಣ್ಣೇ ಮೊದಲು' ಕವನ ಸಂಕಲನ ಆಯ್ಕೆಯಾಗಿದೆ.

ರಾಜ್ಯದ ವಿವಿಧೆಡೆಯಿಂದ ಹಲವು ಸಂಕಲನಗಳು ಬಂದಿದ್ದವು. ಆ ಪೈಕಿ ವೀರಲೋಕ ಪ್ರಕಾಶನ ಪ್ರಕಟಿಸಿದ್ದ ಪಾಪುಗುರು ಅವರ ಕವನ ಸಂಕಲನ ಆಯ್ಕೆಯಾಗಿದೆ. ಶೀಘ್ರದಲ್ಲೇ ಆಯೋಜಿಸುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಾಹಿತ್ಯ ಸಂಗಮದ ಅಧ್ಯಕ್ಷ ವಿ.ಬಿ.ಕೊಟ್ರೇಶಪ್ಪ ತಿಳಿಸಿದ್ದಾರೆ.

## ಯುವ ಪೀಳಿಗೆಯು ಉದ್ಯಮಶೀಲತೆಯನ್ನು ಬೆಳೆಸಿಕೊಳ್ಳಿ

**ಬಳ್ಳಾರಿ:** ಲೀನ್ ಯೋಜನೆ ಮತ್ತು ಝಡ್.ಇ.ಡಿ ಹಾಗೂ ರಫ್ತು ಯೋಜನೆಗಳಿಂದ ವಿವಿಧ ಸೌಲಭ್ಯಗಳನ್ನು ಪಡೆದು ವ್ಯಾಪಾರ ಮತ್ತು ಸಂಘ ಸಂಸ್ಥೆ ಜೊತೆ ಸೇರಿ ಯುವಕರು ನವ ಉದ್ಯಮವನ್ನು ಆರಂಭಿಸಿ ಉದ್ಯಮಶೀಲತೆ ಬೆಳೆಸಿಕೊಳ್ಳಬೇಕು ಎಂದು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ ಅವರು ಹೇಳಿದರು.

ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿಟಿಪಿಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಇವರ ಸಹಯೋಗದಲ್ಲಿ "ಎಂ.ಎಸ್.ಎಂ.ಇ ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವುದು" ಯೋಜನೆಯಡಿ ನಗರದ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಲೀನ್ ಯೋಜನೆ ಮತ್ತು ಝಡ್.ಇ.ಡಿ ಹಾಗೂ ರಫ್ತು ಕುರಿತು ಒಂದು ದಿನದ ಅರಿವು ಮೂಡಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ಸರ್ಕಾರ ಕೈಗಾರಿಕಾ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳನ್ನು ಮಾಡುವುದರ ಮೂಲಕ ಯುವಕರು ಉದ್ಯಮವನ್ನು ಸ್ಥಾಪಿಸಲು ಒಂದು ಉತ್ತಮ ಅವಕಾಶ ದೊರೆಯುತ್ತದೆ. ರೈತರು, ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಉದ್ಯಮಶೀಲತೆಯನ್ನು ಬೆಳೆಸಿಕೊಳ್ಳಬೇಕು. .

ಈ ಸಂದರ್ಭದಲ್ಲಿ ಜಿಲ್ಲಾ ಹತ್ತಿ ಗಿರಣಿಗಳ ಸಂಘದ ಅಧ್ಯಕ್ಷ ಡಿ.ತಿಪ್ಪಯ್ಯ, ಕಾಸಿಯಾ ಉಪಾಧ್ಯಕ್ಷ ನಿಂಗಣ್ಣ ಎಸ್ ಬಿರಾದರ, ಜಿಲ್ಲಾ ಕೈಗಾರಿಕಾ ಜಂಟಿ ಕಾರ್ಯದರ್ಶಿ ಕೆ.ಸಿ ಸುರೇಶ್‌ಬಾಬು, ಕಾಸಿಯಾ ಜಂಟಿ ಕಾರ್ಯದರ್ಶಿ ಕೇಶವ ಮೂರ್ತಿ ಆರ್, ಜಿಲ್ಲಾ ಅಭಿವೃದ್ಧಿ ಸಮಿತಿಯ ಪ್ಯಾನಾಲ್ ಅಧ್ಯಕ್ಷ ನಾಗರಾಜ ಸಿ ಯಲಿಗಾರ ಸೇರಿದಂತೆ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಅ.28 ರಂದು ರಾಷ್ಟ್ರೀಯ ಅಪ್ರೆಂಟಿಸ್ ಶಿಪ್ ಮೇಳ

**ಚಿಕ್ಕಮಗಳೂರು:** ನಗರದ ಜಿಲ್ಲಾ ಪಂಚಾಯಿತಿ ಸಮೀಪದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಅಕ್ಟೋಬರ್ 28 ರಂದು ಬೆಳಿಗ್ಗೆ 11 ಗಂಟೆಗೆ ಪ್ರಧಾನ ಮಂತ್ರಿ ರಾಷ್ಟ್ರೀಯ ಅಪ್ರೆಂಟಿಸ್ ಶಿಪ್ ಮೇಳವನ್ನು ಆಯೋಜಿಸಲಾಗಿದೆ. ಈ ಮೇಳದಲ್ಲಿ ಬಿ.ಇ., ಡಿಪ್ಲೊಮಾ, ಪದವಿ, ಪಿ.ಯು.ಸಿ., ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿರುವ ಆಸಕ್ತ ಅರ್ಹ ಅಭ್ಯರ್ಥಿಗಳು ಹಾಗೂ ಐ.ಟಿ.ಐ.ನ ವಿವಿಧ ವೃತ್ತಿಗಳಲ್ಲಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು ಈ ಅಪ್ರೆಂಟಿಶಿಪ್ ಮೇಳದಲ್ಲಿ ತಮ್ಮ ಎಲ್ಲಾ ಮೂಲ ದಾಖಲಾತಿಗಳನ್ನು ಅಧಾರ್ ಸಂಖ್ಯೆ ಮತ್ತು ಇ–ಮೇಲ್ ಐಡಿಯೊಂದಿಗೆ ಹಾಜರಾಗಬಹುದು.

ಈ ಮೇಳದಲ್ಲಿ ವಿವಿಧ ಉದ್ದಿಮೆಗಳು ಪಾಲ್ಗೊಳ್ಳುತ್ತಿದ್ದು, ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳನ್ನು ಅಪ್ರೆಂಟಿಶಿಪ್ ತರಬೇತಿಗೆ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಜಿಲ್ಲೆಯ ಎಲ್ಲ ಉದ್ದಿಮೆಗಳು ಈ ಮೇಳದಲ್ಲಿ ಭಾಗವಹಿಸಿ ತಮ್ಮ ಉದ್ದಿಮೆಯನ್ನು ಅಪ್ರೆಂಟಿಶಿಪ್ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಲು ಮತ್ತು ಅಪ್ರೆಂಟಿಶಿಪ್ ತರಬೇತಿಗೆ ನೋಂದಣಿ ಮಾಡಿಸಿರುವ ಅಭ್ಯರ್ಥಿಗಳನ್ನು ತಮಗೆ ಅವಶ್ಯಕವಿರುವ ಖಾಲಿ ಸ್ಥಾನಗಳಿಗೆ ಭರ್ತಿಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಅಪ್ರೆಂಟಿಶಿಪ್ ಮೇಳದಲ್ಲಿ ಅರ್ಹ ವಿದ್ಯಾರ್ಹತೆ ಹೊಂದಿರುವ ಎಲ್ಲ ಅಭ್ಯರ್ಥಿಗಳು ಹಾಗೂ ಉದ್ದಿಮೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮೇಳದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ 9611596629, 9964070245, 9480489306, 9886028437, 7411869736, 9972594567, 8553651973, 7019174607 ಹಾಗೂ 8792139703 ಸಂಖ್ಯೆಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕರಿಗೆ ಹೃದಯಘಾತ ಬಗ್ಗೆ ಅರಿವು ಮೂಡಿಸುವುದು ಅಗತ್ಯ: ಎಂ.ಎ.ಷಕೀಬ್



**ಬಳ್ಳಾರಿ:** ಇತ್ತೀಚಿನ ದಿನಗಳಲ್ಲಿ ಹೃದಯಘಾತದಿಂದ ಹೆಚ್ಚಾಗಿ ಯುವಕರು ಮತ್ತು ಸಾರ್ವಜನಿಕರು ಮರಣ ಹೊಂದುತ್ತಿದ್ದಾರೆ. ಸಾರ್ವಜನಿಕರಿಗೆ ಹೃದಯಘಾತ ಬಗ್ಗೆ ಅರಿವು ಮೂಡಿಸುವುದರಿಂದ ಜೀವವನ್ನು ಉಳಿಸಿಕೊಳ್ಳಬಹುದು ಎಂದು ಬಳ್ಳಾರಿ ಜಿಲ್ಲಾ ಶಾಖೆಯ ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಜಿಲ್ಲಾ ಕಾರ್ಯದರ್ಶಿ.ಎಂ.ಎ.ಷಕೀಬ್ ಅವರು ಹೇಳಿದರು.

ಭಾರತೀಯ ರೆಡ್‌ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಹಾಗೂ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಷ್ಟ್ರೀಯ ಸಿ.ಪಿ.ಆರ್ ಸಪ್ತಾಹ ನಿಮಿತ್ತ ಶುಕ್ರವಾರ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಸಾರ್ವಜನಿಕರಿಗೆ ಮತ್ತು ಡಿಪೋ ಕಾರ್ಮಿಕರಿಗೆ ಹಾಗೂ ವಾಹನ ಚಾಲಕರಿಗೆ ಸಿಪಿಆರ್ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಹೃದಯಘಾತ ಅಥವಾ ಎದೆ ನೋವು ನಮಗೆ ಅನೇಕ ರೀತಿಯಿಂದ

ತೊಂದರೆ ಉಂಟುಮಾಡುತ್ತದೆ. ಇಂಥಹ ಸಂದರ್ಭದಲ್ಲಿ ಹೃದಯ ನೋವಿನಿಂದ ಬಳಲುತ್ತಿರುವ ವ್ಯಕ್ತಿಗೆ ಆಸ್ಪತ್ರೆಗೆ ಸೇರಿಸುವ ಮುನ್ನ ಅವರ ಉಸಿರಾಟದ ತೊಂದರೆ ಆದಾಗ ಇವರಿಗೆ ಸಿಪಿಆರ್ ಮಾಡುವುದರ ಮೂಲಕ ಆಸ್ಪತ್ರೆಗೆ ಸೇರಿಸಿ ಅಮೂಲ್ಯವಾದ ಜೀವವನ್ನು ಉಳಿಸಲು ಪ್ರಯತ್ನಿಸಬಹುದು ಎಂದು ಅಣಕು ಪ್ರದರ್ಶನ ಮೂಲಕ ಸಾರ್ವಜನಿಕರಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಕೆಎಸ್‌ಆರ್‌ಟಿಸಿ ಯ ವಿಭಾಗೀಯ ನಿಯಂತ್ರಣಾಧಿಕಾರಿ ಅಹಮಿದಿನ್ ಬಗಾನ್, ಡಿಪೋ ಹಿರಿಯ ಮ್ಯಾನೇಜರ್, ಕೆಎಸ್‌ಆರ್‌ಟಿಸಿ ಸಂಸ್ಥೆಯ ಕಾರ್ಮಿಕರು ಮತ್ತು ವಾಹನ ಚಾಲಕರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಹೆಣ್ಣು ಮಗುವಿನ ದಿನಾಚರಣೆ ಪ್ರಯುಕ್ತ ಜಾಗೃತಿ ಕಾರ್ಯಕ್ರಮ



**ಗದಗ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಗದಗ ಇವರ ವತಿಯಿಂದ ಶನಿವಾರ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯಡಿಯಲ್ಲಿ ಅಂತರಾಷ್ಟ್ರೀಯ ಹೆಣ್ಣುಮಗುವಿನ ದಿನಾಚರಣೆ ಪ್ರಯುಕ್ತ ಜಾಗೃತಿ ಕಾರ್ಯಕ್ರಮವನ್ನು ಮಹಾವೀರ್ ಜೈನ್ ಹಿರಿಯ ಹಾಗೂ ಪ್ರೌಢ ಶಾಲೆ, ಗದಗ ಇಲ್ಲಿ ಹಮ್ಮಿಕೊಳ್ಳಲಾಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ

ಶ್ರೀಮತಿ ಪದ್ಮಾವತಿ ಜಿ ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆ ಕುರಿತಂತೆ ಅಂತರಾಷ್ಟ್ರೀಯ ಹೆಣ್ಣುಮಗುವಿನ ದಿನಾಚರಣೆಯ ಮಹತ್ವ ಹಾಗೂ ಲಿಂಗಾನುಪಾತ ಮತ್ತು ಲಿಂಗ ಸಮಾನತೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಅಡ್ವಕೇಟ್ ಕುಮಾರಿ ಮಧುಶ್ರೀ ಜಿ ಪೂಜಾರಿ ಇವರು ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಹಾಗೂ ಇತರೆ ಕಾನೂನು ಸೌಲಭ್ಯಗಳ ಕುರಿತು ಮಾಹಿತಿಯನ್ನು ನೀಡಿದರು. ಶ್ರೀಮತಿ ಸುಜಾತಾ ಮಠಪತಿ, ಆಡಳಿತಾಧಿಕಾರಿಗಳು ಸಖಿ ಒನ್ ಸ್ಟಾಪ್ ಸೆಂಟರ್ ಇವರು ಸಮಾಜದಲ್ಲಿ ಹೆಣ್ಣುಮಕ್ಕಳು ಹೆಚ್ಚು ಸೂಕ್ಷ್ಮದಿಂದಿರಬೇಕು ಹಾಗೂ ಯಾವುದೇ ಆಮಿಷಗಳಿಗೆ ಬಲಿಯಾಗಬಾರದೆಂದು ತಿಳಿಸಿದರು. ಶ್ರೀಮತಿ ಮಧುಶ್ರೀ ಪಿ ಉಪ್ಪಾರ ಜಂಡರ್ ಸ್ಪೆಷಲಿಸ್ಟ್ ಮಿಷನ್ ಶಕ್ತಿ ಯೋಜನೆ ಇವರು ಮಕ್ಕಳ ಸಹಾಯವಾಣಿ ಹಾಗೂ ಮಹಿಳಾ ಸಹಾಯವಾಣಿ ಕುರಿತು ಮಾಹಿತಿಯನ್ನು ನೀಡಿದರು

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶ್ರೀಮತಿ ಅನುಪಮಾ ಅಂಗಡಿ,

ಅಧೀಕ್ಷಕಿ ಶ್ರೀಮತಿ ರೇಣುಕಾ ಮಾಗಡಿ, ಪೊಲೀಸ ಉಪಅಧೀಕ್ಷಕ ಶ್ರೀಯುತ ಮಹೇಶ ಹಾದಿಮನಿ,

ಶ್ರೀಮತಿ ಶೈಲಜಾ ಧರಮ್‌ಸಿ, ಎಮ್ ಎಸ್ ತಿಪ್ಪಾಪುರ, ಶ್ರೀಮತಿ ಸುಜಾತಾ ಮಠಪತಿ, ಆಡಳಿತಾಧಿಕಾರಿಗಳು ಸಖಿ ಒನ್ ಸ್ಟಾಪ್ ಸೆಂಟರ್, ಶ್ರೀಮತಿ ಮಧುಶ್ರೀ ಪಿ ಉಪ್ಪಾರ ಜಂಡರ್ ಸ್ಪೆಷಲಿಸ್ಟ್ ಮಿಷನ್ ಶಕ್ತಿ ಯೋಜನೆ ಹಾಗೂ ಶಾಲೆಯ ಶಿಕ್ಷಕ ವೃಂದದವರು ಹಾಜರಿದ್ದರು. ಪೂಜಾ ಭರಮಗೌಡರ ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಚಿತ್ತಾಪುರದಲ್ಲಿ ಪಥಸಂಚಲನಕ್ಕೆ ಹೈಕೋರ್ಟ್ ಅನುಮತಿ, ಹರ್ಷ ವ್ಯಕ್ತಪಡಿಸಿದ ಬಿ.ವೈ.ವಿಜಯೇಂದ್ರ

**ಬೆಂಗಳೂರು:** ಚಿತ್ತಾಪುರದಲ್ಲಿ ರಾಷ್ಟ್ರಿಯ ಸ್ವಯಂಸೇವಕ ಸಂಘದ ಪಥಸಂಚಲನಕ್ಕೆ ಅನುಮತಿ ನೀಡಿದ ಘನ ಉಚ್ಚ ನ್ಯಾಯಾಲಯದ ತೀರ್ಪು ಜನತಂತ್ರದ ವಿಜಯ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹರ್ಷ ವ್ಯಕ್ತಪಡಿಸಿದ್ದಾರೆ.

ಚಿತ್ತಾಪುರದಲ್ಲಿ ನ.2ರಂದು ಆರ್‌ಎಸ್‌ಎಸ್ ಪಥಸಂಚಲನಕ್ಕೆ ಕಲಬುರಗಿ ಸಂಚಾರಿ ಪೀಠ ಅನುಮತಿ ನೀಡಿರುವುದಕ್ಕೆ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರಜಾತಂತ್ರದ ಹಕ್ಕು ಕಸಿಯಲು ಹೊರಟ ಕಾಂಗ್ರೆಸ್ ಸರ್ಕಾರಕ್ಕೆ ಉಚ್ಚ ನ್ಯಾಯಾಲಯ ಚಾಟಿ ಬೀಸಿ ಸಂವಿಧಾನದ ಘನತೆಯನ್ನು ಎತ್ತಿ ಹಿಡಿದಿದೆ ಎಂದು ಹೇಳಿದರು.ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನ ನಿರ್ಬಂಧಿಸಲು ಹೊರಟವರಿಗೆ ಮುಖಭಂಗವಾಗಿದೆ.



ನ್ಯಾಯಾಲಯದ ತೀರ್ಪು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ವಾಧಿಕಾರಿ ಆಡಳಿತ ನಡೆಸಲು ಅವಕಾಶವಿಲ್ಲ ಎಂಬ ಸ್ಪಷ್ಟ ಸಂದೇಶ ಸಾರಿದೆಯಲ್ಲದೇ, ದಿನಬೆಳಗಾದರೆ ಸಂವಿಧಾನದ ಬಗ್ಗೆ ಬೊಗಳೆ ಮಾತನಾಡುವವರಿಗೆ ತಕ್ಕ ಪಾಠ ಹೇಳಿದೆ ಎಂದು ತಿರುಗೇಟು ನೀಡಿದ್ದಾರೆ.

ಸಾಂಸ್ಕೃತಿಕ ಹಾಗೂ ಸಾರ್ವಜನಿಕ ಜಾಗೃತಿ ಕಾರ್ಯಕ್ರಮಗಳಿಗೆ ಕಾನೂನು ಸುವ್ಯವಸ್ಥೆಯ ಷರತ್ತು ವಿಧಿಸಿ ಅನುಮತಿ ನೀಡಬೇಕಾಗಿರುವುದು ಸರ್ಕಾರದ ಕರ್ತವ್ಯ, ಆದರೆ ಕಾನೂನು ಸುವ್ಯವಸ್ಥೆಯ ಹೆಸರಿನಲ್ಲಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಉಸಿರುಗಟ್ಟಿಸಲು ಹೋದರೆ ದೇಶದ ಸಂವಿಧಾನ ಅದಕ್ಕೆ ಅವಕಾಶ ಕೊಡುವುದಿಲ್ಲ ಎಂಬ ಸಂದೇಶ ಇಂದಿನ ತೀರ್ಪಿನ ಮೂಲಕ ರವಾನೆಯಾಗಿದೆ, ರಾಷ್ಟ್ರಭಕ್ತ ಸಂಘಟನೆಗಳನ್ನು ಮೆಟ್ಟಿ ನಿಲ್ಲುವ ಕಾಂಗ್ರೆಸ್‌ನ ಕುಟಿಲ ನೀತಿಯು ನ್ಯಾಯಾಲಯದ ತೀರ್ಪಿನಿಂದ ನಿಷ್ಕ್ರಿಯಗೊಂಡಂತಾಗಿದೆ ಎಂದು ಹೇಳಿದ್ದಾರೆ.

# ರಸ್ತೆಯಲ್ಲಿ ನಮಾಜ್ ಮಾಡಲು ಅನುಮತಿ ನಿರಾಕರಣೆ ಕುರಿತು ಪರಿಶೀಲನೆ : ಗೃಹ ಸಚಿವ ಪರಮೇಶ್ವರ್

**ಬೆಂಗಳೂರು:** ರಸ್ತೆಯಲ್ಲಿ ನಮಾಜ್ ಮಾಡಲು ಅನುಮತಿ ನೀಡದಿರುವ ಬಗ್ಗೆ ಪರಿಶೀಲನೆ ನಡೆಸಲಾಗುತ್ತದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಖಾಸಗಿ ಸಂಘ ಸಂಸ್ಥೆಗಳು ಸರ್ಕಾರಿ ಜಾಗದಲ್ಲಿ ತಮ್ಮ ಚಟುವಟಿಕೆ ನಡೆಯಬಾರದು ಎಂದು ತೀರ್ಮಾನ ತೆಗೆದುಕೊಂಡಿದೆ. ಸಹಜವಾಗಿಯೇ ಮುಸ್ಲಿಮರಿಗೆ ರಸ್ತೆಯಲ್ಲಿ ನಮಾಜ್ ಮಾಡಲು ಅವಕಾಶ ನಿರಾಕರಿಸಲಾಗುತ್ತಿದೆಯೇ ಎಂದು ಕೇಳಲಾಗುತ್ತಿದೆ.

ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಸರ್ಕಾರ ಒಬ್ಬರಿಗೊಂದು ಮತ್ತೊಬ್ಬರಿಗೆ ಇನ್ನೊಂದು ನಿಯಮ ಮಾಡಲು ಸಾಧ್ಯವಿಲ್ಲ. ರಸ್ತೆಯಲ್ಲಿನ ಚಟುವಟಿಕೆಗಳನ್ನು ನಿಯಂತ್ರಿಸಲು ಪರಿಶೀಲನೆ ನಡೆಸಲಾಗುತ್ತದೆ ಎಂದರು. ಆರ್‌ಎಸ್‌ಎಸ್ ಹೊಸತೇನಲ್ಲ. 100 ವರ್ಷಗಳ ಇತಿಹಾಸ ಹೊಂದಿದೆ. ಅಂದಿನಿಂದಲೂ ದೇಶದಲ್ಲಿ ಗೊಂದಲಗಳಾಗುತ್ತಲೇ ಇದೆ. ಈ ಬಗ್ಗೆ ಪದೇ ಪದೇ ಚರ್ಚೆಗಳಾಗಿವೆ. ಕಾಲಕಾಲಕ್ಕೆ ಸರ್ಕಾರಗಳು ಕ್ರಮಗಳನ್ನು ತೆಗೆದುಕೊಂಡಿವೆ ಎಂದರು.

ಜಗದೀಶ್‌ಶೆಟ್ಟರ್ 2013ರಲ್ಲಿ ಮುಖ್ಯಮಂತ್ರಿಯಾಗಿದ್ದಾಗ ಅವರದೇ ಪಕ್ಷದ ಅಂಗ ಸಂಸ್ಥೆಯಾದ ಆರ್‌ಎಸ್‌ಎಸ್‌ನ ಚಟುವಟಿಕೆಗಳಿಗೆ ನಿಯಂತ್ರಣ ಹಾಕಿದ್ದರು. ಕಾಂಗ್ರೆಸ್ ಸರ್ಕಾರ ಆದೇಶ ಹೊರಡಿಸಿದ್ದರೆ, ಗಲಾಟೆ ಮಾಡುತ್ತಾರೆ. ಜಗದೀಶ್ ಶೆಟ್ಟರ್ ಆದೇಶವನ್ನು ಕಂಡೂ ಕಾಣದಂತಿರುತ್ತಾರೆ.



ಅನಗತ್ಯ ಪ್ರಚೋದನೆ ಬೇಡ ಎಂದು ನಾವು ಸುಮನಿದ್ದೇವೆ ಎಂದರು.

ಭಜರಂಗ ದಳವನ್ನು ನಿಷೇಧ ಮಾಡುವ ಬಗ್ಗೆ ಸದ್ಯಕ್ಕೆ ಯಾವುದೇ ಚರ್ಚೆಗಳು ನಡೆಯುತ್ತಿಲ್ಲ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಆರ್‌ಎಸ್‌ಎಸ್ ಪಥ ಸಂಚಲನದಲ್ಲಿ ಭಾಗವಹಿಸಿದ್ದ ಪಿಡಿಓ ಅವರನ್ನು ಅಮಾನತುಗೊಳಿಸಿರುವ ಕ್ರಮ ಸಮರ್ಥನೀಯ. ಸರ್ಕಾರಿ ನೌಕರರು ಖಾಸಗಿ ಸಂಸ್ಥೆಗಳ ಚಟುವಟಿಕೆಗಳಲ್ಲಿ ಭಾಗವಹಿಸುವಂತಿಲ್ಲ, ಸದಸ್ಯತ್ವ ಪಡೆಯುವಂತಿಲ್ಲ, ಗೊಂದಲಗಳ ನಡುವೆಯೂ ಪಥ ಸಂಚಲನದಲ್ಲಿ ಭಾಗಿಯಾಗಿರುವುದು ಸೂಕ್ತವಲ್ಲ ಎಂದು ಹೇಳಿದರು.

ಖಾಸಗಿ ಸಂಘ ಸಂಸ್ಥೆಗಳ ಚಟುವಟಿಕೆಗಳಿಗೆ ಸರ್ಕಾರಿ ಸ್ವತ್ತುಗಳಲ್ಲಿ ಅವಕಾಶ ಇಲ್ಲ ಎಂದು ಕಳೆದ ಸಂಪುಟದಲ್ಲೆತೀರ್ಮಾನ ತೆಗೆದುಕೊಂಡಿದ್ದೇವೆ.

ಈ ಬಗ್ಗೆ ನಿನ್ನೆ ಸಂಜೆ ಅಧಿಕೃತ ಆದೇಶ ಪ್ರಕಟಿಸಲಾಗಿದೆ. ಅದರ ಹಿನ್ನೆಲೆಯಲ್ಲಿ ಕಲಬುರರ್ಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನಲ್ಲಿ ಆರ್‌ಎಸ್‌ಎಸ್ ಪಥ ಸಂಚಲನಕ್ಕೆ ಅನುಮತಿ ನೀಡಲಾಗಿಲ್ಲ.

ಎಲ್ಲಾ ಸಂಘಟನೆಗಳಿಗೂ ಈ ನಿಯಮ ಅನ್ವಯವಾಗಲಿದ್ದು, ಭೀಮ್ ಅರ್ಮಿ ಅಥವಾ ಯಾವುದೇ ಸಂಘಟನೆ ಇರಲಿ, ನಿಬಂಧನೆಗಳನ್ನು ಅನುಸರಿಸಿ ಅನುಮತಿ ನೀಡಲಾಗುವುದು ಎಂದು ಹೇಳಿದರು.

ಬೆಂಗಳೂರಿನಲ್ಲಿ ರಸ್ತೆ ಗುಂಡಿಗಳನ್ನು ನಾವೇ ಮುಚ್ಚಿದ್ದೇವೆ ಎಂದು ಉದ್ಯಮಿ ಕಿರಣ್ ಮಜುಂದಾರ್ ಷಾ ನೀಡಿರುವ ಹೇಳಿಕೆ ಆಕ್ಷೇಪಾರ್ಹವಾದದ್ದು, ಅವರು ಸಾಕಷ್ಟು ಪ್ರಭಾವಿಯಾಗಿದ್ದಾರೆ.

ಅಂತಾರಾಷ್ಟ್ರಿಯ ಮಟ್ಟದಲ್ಲೂ ಗುರುತಿಸಿಕೊಂಡಿದ್ದಾರೆ. ತಮ ಹೇಳಿಕೆ ಪರಿಣಾಮ ಏನಾಗುತದೆ ಎಂಬುದರ ಬಗ್ಗೆ ಅವರು ಗಮನ ಕೊಡಬೇಕು. ಸಮಸ್ಯೆಗಳಿದ್ದರೆ, ಮುಖ್ಯಮಂತ್ರಿ ಜೊತೆ ಮಾತನಾಡಿ ಬಗೆ ಹರಿಸಿಕೊಳ್ಳಬೇಕು. ಅದನ್ನು ಬಿಟ್ಟು ಮಾಧ್ಯಮಗಳಲ್ಲಿ ಮಾತನಾಡುವುದು ಸೂಕ್ತವಲ್ಲ ಎಂದರು.


# ವಿವಿಧ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯದ ಕ್ರೀಡಾ ಇಲಾಖೆಯ ಕ್ರೀಡಾ ಸಾಧನೆಗೆ ಸಂಬಂಧಪಟ್ಟಂತೆ ವಿವಿಧ ಕ್ರೀಡಾ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ಸಾಧಕರಿಗೆ ವಿವಿಧ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜುನ ಪ್ರಶಸ್ತಿ, ರಾಷ್ಟ್ರೀಯ ಕ್ರೀಡಾ ಪೋಷಕ ಪ್ರಶಸ್ತಿ, ದ್ರೋಣಚಾರ್ಯ ಪ್ರಶಸ್ತಿ, ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿಗೆ ಆನ್ ಲೈನ್ ಮೂಲಕ ಅಕ್ಟೋಬರ್ 28 ರೊಳಗಾಗಿ ಸಲ್ಲಿಸಬೇಕು. ಅರ್ಜಿದಾರರು ವೆಬ್ ಸೈಟ್ www.dbtyas.sports.gov ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 011–23387432, 1800–202–5155, 1800–258–5155 ಸಂಪರ್ಕಿಸಬೇಕೆಂದು ಇಲಾಖೆಯ ಸಹಾಯಕ ನಿರ್ದೇಶಕರಾದ ಹರ್ಷ ತಿಳಿಸಿದ್ದಾರೆ.

# ಮೈ ಭಾರತ ರಾಷ್ಟ್ರೀಯ ಸೇವಾ ಯೋಜನೆ ಪ್ರಶಸ್ತಿ ಪಡೆದ ಲೋಕೇಶ್ ನಾಯಕ್ ಅವರಿಗೆ ಅಭಿನಂದನೆಗಳು.

**ದಾವಣಗೆರೆ :** ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಸಹಾಯಕ ಪ್ರಾಧ್ಯಾಪಕರಾದ ಲೋಕೇಶ್ ನಾಯಕ್ ಇವರಿಗೆ ಪ್ರತಿ ವರ್ಷ ನೀಡುವ ರಾಷ್ಟ್ರಮಟ್ಟದ ರಾಷ್ಟ್ರೀಯ ಸೇವಾ ಯೋಜನೆ ಪ್ರಶಸ್ತಿಯಾದ ಮೈ ಭಾರತ ರಾಷ್ಟ್ರೀಯ ಸೇವಾ ಯೋಜನೆಯ ಅತ್ಯುತ್ತಮ ಕಾರ್ಯಕ್ರಮ ಅಧಿಕಾರಿ ಪ್ರಶಸ್ತಿ ಪಡೆದಿರುತ್ತಾರೆ. ಅವರ ನಿರಂತರ ಸೇವಾ ಯೋಜನೆಯ ಕಾರ್ಯಕ್ರಮಗಳು ಸಮುದಾಯ ಮತ್ತು ಯುವ ಸಬಲೀಕರಣದ ಕಾರ್ಯಕ್ರಮಗಳು ಅವರನ್ನು ರಾಷ್ಟ್ರೀಯ ಪ್ರಶಸ್ತಿ ಪಡೆಯುವ ಹಾಗೆ ಮಾಡಿದೆ. ಪ್ರಾಧ್ಯಾಪಕ ಮಿತ್ರರಾದ ಡಾ ವೆಂಕಟೇಶ್



ಬಾಬು ಪ್ರೊ ನಾಗೇಂದ್ರ ನಾಯಕ ಪ್ರೊ ವೀರ ನಾಯಕ್ ಮತ್ತು ಪ್ರೊ ಮಾದನಾಯ್ಕ ಪ್ರೊ ಪ್ರಭು ನಾಯಕ ಅವರು ಅಭಿನಂದಿಸಿದರು


## ಸಾರ್ವಜನಿಕ ಆಸ್ಪತ್ರೆ, ಹರಿಹರ. ದಾವಣಗೆರೆ (ಜಿಲ್ಲೆ)

ಕ್ರ.ಸಂ.ತಾ.ಸಾ.ಆ[ಹ]/ಟೆಂಡರ್/ಕ್ಷ–ಕಿರಣ/02/2025–26 ದಿನಾಂಕ:–18/10/2025

**ಟೆಂಡರ್ ಪ್ರಕಟಣೆ (ಇ–ಪೋರ್ಟಲ್ ಮೂಲಕ)**

2025–26ನೇ ಸಾಲಿಗೆ ಕ್ಷ–ಕಿರಣ ವಿಭಾಗಕ್ಕೆ ಡಿಜಿಟಲ್ ಕ್ಷ–ಕಿರಣ ಫಿಲಂಗಳ ಸರಬರಾಜಿಗಾಗಿ ಅಲ್ಪಾವಧಿ ಮ್ಯಾನ್ಯುಯಲ್ ಟೆಂಡರ್‌ಗೆ ದ್ವಿ–ಲಕೋಟೆ ಪದ್ಧತಿಯಲ್ಲಿ ಟೆಂಡರ್ ಆಹ್ವಾನಿಸಿರುವ ಬಗ್ಗೆ :– **ವಿವರ:– (1) ಡಿಜಿಟಲ್‌ಎಕ್ಸ್–ರೇ ಫಿಲಂ 8 X 10 1X 150'S ಬಾಕ್ಸ್**
**(2) ಡಿಜಿಟಲ್‌ಎಕ್ಸ್–ರೇ ಫಿಲಂ 10 X 12 1X 150'S ಬಾಕ್ಸ್**
ಟೆಂಡರ್ ಮೊತ್ತ 05.00 ಲಕ್ಷ. ಟೆಂಡರ್ ಅರ್ಜಿ ಫಾರಂಗಳನ್ನು ವಿತರಿಸುವ ಪ್ರಾರಂಭ ದಿನಾಂಕ: 18/10/2025. ಟೆಂಡರ್ ಅರ್ಜಿ ಫಾರಂಗಳನ್ನು ವಿತರಿಸುವ ಕೊನೆಯ ದಿನಾಂಕ: 24/10/2025 ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 27/10/2025. ಭರ್ತಿ ಮಾಡಿದ ಟೆಂಡರ್ ಫಾರಂ ಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ: 27/10/2025 ಸಂಜೆ 4:30 ರವರೆಗೆ. ಇ.ಎಮ್.ಡಿ ಮೊತ್ತ ರೂ. 12,500/–. ಆರ್ಥಿಕ ಬಿಡ್ ತೆರೆಯುವ ದಿನಾಂಕ ತಿಳಿಸಲಾಗುವುದು. * ವ್ಯವಹರಿಸಬೇಕಾದ ಅಧಿಕಾರಿ, ಡಾ॥ ಹನುಮನಾಯ್ಕ. ಎಲ್, ಮುಖ್ಯ ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ಹರಿಹರ, ದೂರವಾಣಿ ಸಂಖ್ಯೆ:–08192242556, ಮೊಬೈಲ್ ಸಂಖ್ಯೆ:–9066113324,8277512193, ಮಲ್ಲೇಶಿ .ಡಿ ಪ್ರಥಮ ದರ್ಜೆ ಸಹಾಯಕರು. ಮೊ:9113670106. * ಮೇಲ್ಕಂಡ ಟೆಂಡರ್ ತೆರೆಯುವ ದಿನಾಂಕಗಳು ಆಡಳಿತಾತ್ಮಕ ಹಿತದೃಷ್ಠಿಯಿಂದ ಬದಲಾವಣೆಗೆ ಒಳಗೊಂಡಿರುತ್ತದೆ.

ವಾಸಾಇ/ಡಿವಿಜಿ/426/ಕೆಎಸ್‌ಎಂಸಿಎ/2025–26 **ಸಹಿ/– ಮುಖ್ಯ ವೈದ್ಯಾಧಿಕಾರಿಗಳು**


# ಅಪಾಯಕಾರಿ ಉದ್ದಿಮೆಗಳಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ನಿಷೇಧ

**ದಾವಣಗೆರೆ :** ದಾವಣಗೆರೆ ಜಿಲ್ಲಾದ್ಯಂತ ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಮಕ್ಕಳ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಷೇಧಿಸಲು ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಕಾಯ್ದೆಯನ್ನು ಜಾರಿಗೆ ತಂದಿರುತ್ತದೆ.

ದಾವಣಗೆರೆ ಜಿಲ್ಲೆ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿ ಮಾರಾಟ ಮಳಿಗೆಗಳನ್ನು ಸ್ಥಾಪಿಸಲಾಗುತ್ತಿದೆ. ಪಟಾಕಿ ತಯಾರಿಕೆ, ಮಾರಾಟ ಹಾಗೂ ಇತರೆ ಪ್ರಕ್ರಿಯೆಗಳು ಅಪಾಯಕಾರಿ ಉದ್ದಿಮೆಗಳಲ್ಲಿ ಬರುವುದರಿಂದ ಈ ಅಂಗಡಿಗಳಲ್ಲಿ ಯಾವುದೇ ಕಾರಣಕ್ಕೂ 18 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ, ಬಳಸಿಕೊಳ್ಳದಂತೆ ತಿಳಿಸಲಾಗಿದೆ.

# ಶ್ರೀಬೀರಲಿಂಗೇಶ್ವರ ದೇವಸ್ಥಾನದ ಮೈದಾನದಲ್ಲಿ ವ್ಯಾಪಾರಕ್ಕೆ ಅವಕಾಶ

**ದಾವಣಗೆರೆ :** ಅ.19 ರಿಂದ 22 ರವರೆಗೆ ಶ್ರೀ ಬೀರಲಿಂಗೇಶ್ವರ ದೇವಸ್ಥಾನದ ಮೈದಾನದಲ್ಲಿ ಬಾಳೆಕಂಬ, ಹೂ, ಹಣ್ಣು ಮಾವಿನ ತೋರಣ, ಬೂದೂ ಗುಂಬಳ ಕಾಯಿ, ಕಾಂಚಿಕಡ್ಡಿ ಹಾಗೂ ಸಗಣಿ ಗುರ್ಜಿಗಳ ವ್ಯಾಪಾರಕ್ಕೆ ಅವಕಾಶ ಕಲ್ಪಿಸಲಾಗಿದೆ. ನಗರದ ಪಿ.ಬಿ. ರಸ್ತೆಯ ಅರಸು ಕ್ರಾಸ್ ಮತ್ತು ಐಬಿ ರಸ್ತೆ ಹಾಗೂ ಇತರೆ ಯಾವುದೇ ಭಾಗಗಳಲ್ಲಿ ರಸ್ತೆ ಸಂಚಾರಕ್ಕೆ ಅಡ್ಡಿಯಾಗುವಂತೆ ಬಾಳೆಕಂಬ, ಹೂ, ಹಣ್ಣು ಮಾವಿನ ತೋರಣ, ಬೂದು ಗುಂಬಳ ಕಾಯಿ, ಕಾಚಿಕಡ್ಡಿ ತಪ್ಪಿದಲ್ಲಿ ಪ್ರತಿ ಮಾರಾಟಗಾರರಿಂದ ತ್ಯಾಜ್ಯ ಸಂಗ್ರಹಣಾ ಶುಲ್ಕವನ್ನು ವಸೂಲಿ ಮಾಡಲಾಗುವುದೆಂದು ಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ.


## ಪುರಸಭಾ ಕಾರ್ಯಾಲಯ, ಬೀರೂರು ಚಿಕ್ಕಮಗಳೂರು ಜಿಲ್ಲೆ.

E-Mail:ka.birur.tmc@gmail.com ದಿನಾಂಕ:08267–255888
Website address:www.birurtown.mrc.gov.in

ಸಂಖ್ಯೆ:ಟಿ.ಎಂ.ಸಿ/ಬೀಪು/ಟೆಂಡರ್/11/2025–26 ದಿನಾಂಕ: 14.10.2025

**ಟೆಂಡರ್ ಪ್ರಕಟಣೆ**

ಬೀರೂರು ಪುರಸಭಾ ವತಿಯಿಂದ ಈ ಕೆಳಕಂಡ ಕಾಮಗಾರಿಯನ್ನು 2023–24 ನೇ ಸಾಲಿನ 15ನೇ ಹಣಕಾಸು ಮತ್ತು ಎಸ್.ಬಿ.ಎಂ 2.0 ಯೋಜನೆಗಳಡಿ ಅಂದಾಜು ಪಟ್ಟಿಯನ್ವಯ ಕಾಮಗಾರಿಯನ್ನು ಕೈಗೊಳ್ಳಲು ಅರ್ಹ ನೊಂದಾಯಿತ ಗುತ್ತಿಗೆದಾರರಿಂದ ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯುಮೆಂಟ್ ನಿಬಂಧನೆಗಳಿಗೊಳಪಟ್ಟು ಕೆ.ಪಿ.ಪಿ ಪೋರ್ಟಲ್ ಮೂಲಕ ಟೆಂಡರನ್ನು ಆಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಕಛೇರಿಯ ವೇಳೆಯಲ್ಲಿ ತಾಂತ್ರಿಕ ಶಾಖೆಯೊಂದಿಗೆ ಸಂಪರ್ಕಿಸಬಹುದಾಗಿರುತ್ತದೆ. ಈ ಟೆಂಡರ್ ಪ್ರಕಟಣೆಯಲ್ಲಿ ಯಾವುದಾದರೂ ಬದಲಾವಣೆ ಇದ್ದಲ್ಲಿ ಕಛೇರಿಯ ವೆಬ್ ಸೈಟ್/ ಕೆ.ಪಿ.ಪಿ ಪೋರ್ಟಲ್‌ನಲ್ಲಿ ತಿಳಿದುಕೊಳ್ಳಬಹುದಾಗಿದೆ.

| ಕ್ರ.ಸಂ | ಕಾಮಗಾರಿಯ ವಿವರ | ಅಂದಾಜು ಮೊತ್ತ (ರೂ.ಲಕ್ಷಗಳಲ್ಲಿ) | ಇ.ಎಂ.ಡಿ ಶುಲ್ಕ (ರೂ.ಗಳಲ್ಲಿ) | ಟೆಂಡರ್ ಸಲ್ಲಿಸುವ ಕೊನೆಯ ದಿನಾಂಕ ಮತ್ತು ಸಮಯ | ಟೆಂಡರ್ ತೆರೆಯುವ ಕೊನೆಯ ದಿನಾಂಕ ಮತ್ತು ಸಮಯ |
|---|---|---|---|---|---|
| 1 | DMA/2025-26/ OW/WORK_ INDENT49804 | 23.78 | REFER KPP PORTAL | 29.10.2025 | 31.10.2025 |

ಸಹಿ/– ಅಧ್ಯಕ್ಷರು ಪುರಸಭೆ,ಬೀರೂರು

ಸಹಿ/– ಮುಖ್ಯಾಧಿಕಾರಿ ಪುರಸಭೆ,ಬೀರೂರು



## ಕರ್ನಾಟಕ ಸರ್ಕಾರ ಗ್ರಾಮ ಪಂಚಾಯಿತಿ ಕಾರ್ಯಾಲಯ ಅತ್ತಿಗೆರೆ

(gmail-attigere.dvg.dvg@gmail.com) ಮೊಬೈಲ್: 8951079840

ಸಂಖ್ಯೆ: ಗ್ರಾ.ಪಂ/ಇ–ಟೆಂಡರ್‌ಪ್ರಕಟಣೆ/01/2025–26 ದಿನಾಂಕ: 18–10–2025

**–:ಟೆಂಡರ್ ಪ್ರಕಟಣೆ:–**

**ಇ–ಪ್ರಕ್ಯೂರ್ ಮೆಂಟ್ ಮೂಲಕ**

ಕರ್ನಾಟಕ ರಾಜ್ಯಪಾಲರ ಪರವಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯತಿ ಅತ್ತಿಗೆರೆ ದಾವಣಗೆರೆ ತಾಲ್ಲೂಕು ಮತ್ತು ಜಿಲ್ಲೆ ಇವರು ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿನ 15ನೇ ಹಣಕಾಸು ಯೋಜನೆ 2025–26 ಸಾಲಿನ ನೊಂದಾಯಿತ ಅರ್ಹ ಹಾಗೂ ಇ–ಟೆಂಡರ್‌ಗಾಗಿ ಇ–ಪ್ರಕ್ಯೂರ್‌ಮೆಂಟ್ ಸೆಲ್‌ನಲ್ಲಿ ನೊಂದಾಯಿಸಲ್ಪಟ್ಟ ಸಾಮಾಗ್ರಿ ಸರಬರಾಜುದಾರರಿಂದ ಇಲಾಖಾ ನಿಯಮಾವಳಿಯ ಮೇರೆಗೆ ಇ– ಪ್ರಕ್ಯೂರ್‌ಮೆಂಟ್ ಮುಖಾಂತರ ಐಟಂವಾರು ಟೆಂಡರ್‌ಗಳನ್ನು Standard Tender Documents for E-Procurement For Goods ನಮೂನೆಯಲ್ಲಿ ಅಹ್ವಾನಿಸಲಾಗಿದೆ.

| ಕ್ರ.ಸಂ | ವಿವರ | ಟೆಂಡರ್ ವೇಳಾ ಪಟ್ಟಿ |
|---|---|---|
| 1 | ಅತ್ತಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿನ ಮೋಟರ್‌ಗಳ ನಿರ್ವಹಣೆ (ಎಸ್.ಸಿ/ಎಸ್.ಟಿ ಕಾಲೋನಿಗೆ ನೀರು ಸರಬರಾಜು ಸೇರಿದಂತೆ) 15ನೇ ಹಣಕಾಸು ಯೋಜನೆ 2025–26 RDPR/2025-26/ SE3092/ | 1. ಖಾಲಿ ಟೆಂಡರ್ ಅರ್ಜಿಗಳನ್ನು ಅನುಬಂಧ–1 ಮತ್ತು ಅನುಬಂಧ–2ನ್ನು) ಇ–ಪ್ರಕ್ಯೂರ್ ಮೆಂಟ್ ಮೂಲಕ ಡೌನ್ ಲೋಡ್ ಮಾಡಿಕೊಳ್ಳುವ ದಿನಾಂಕ ಮತ್ತು ಸಮಯ:17–10–2025 ಸಂಜೆ: 5.30 |
| 2 | ಅತ್ತಿಗೆರೆಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಬೀದಿದೀಪ ಸಾಮಗ್ರಿ ಖರೀದಿ ಮತ್ತು ನಿರ್ವಹಣೆ. 15ನೇ ಹಣಕಾಸು ಯೋಜನೆ 2025–26 RDPR/2025-26/SE3091/ | 2. ಇ–ಪೋರ್ಟಲ್‌ನಲ್ಲಿ ದಾಖಲಾತಿಗಳು / ತಾಂತ್ರಿಕ, ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ: 03–11–2025 ಸಂಜೆ: 5.30 |
| 3 | ಅತ್ತಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕುಡಿಯುವ ನೀರು ಸಾಮಗ್ರಿ ಖರೀದಿ ಮತ್ತು ನಿರ್ವಹಣೆ 15ನೇ ಹಣಕಾಸು ಯೋಜನೆ 2025–26 RDPR/2025-26/IND11892 | 3. ಇ–ಪೋರ್ಟಲ್‌ನಲ್ಲಿ ದಾಖಲಾತಿಗಳು / ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ: 04–11–2025 ಸಂಜೆ: 5.30 |

ಈ ಟೆಂಡರ್ ಪ್ರಕ್ರಿಯೆಯು ತಾಂತ್ರಿಕ ತೊಂದರೆ ಮತ್ತು ಇತರೆ ವಿಷಯಗಳಿಂದ ರದ್ದತಿಯಾದರೆ ಮತ್ತೊಮ್ಮೆ ಪತ್ರಿಕಾ ಪ್ರಕಟಣೆ ಮಾಡಲಾಗುವುದಿಲ್ಲ ಹೆಚ್ಚಿನ ಮಾಹಿತಿಗಾಗಿ ಅಧಿಕೃತ ಪೋರ್ಟಲ್ www. kppp.karnataka.gov.in ನಲ್ಲಿ ನೋಡಿಕೊಳ್ಳುವುದು ಕಛೇರಿ ವೇಳೆಯಲ್ಲಿ ಗ್ರಾಮಪಂಚಾಯತಿಯನ್ನು ಸಂಪರ್ಕಿಸುವುದು.

ಸಹಿ/– ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯಿತಿ ಅತ್ತಿಗೆರೆ

ಸಹಿ/– ಅಧ್ಯಕ್ಷರು ಗ್ರಾಮ ಪಂಚಾಯಿತಿ ಅತ್ತಿಗೆರೆ

# ಪರಿಸರದ ಮಾಲಿನ್ಯ ಉಂಟು ಮಾಡುವಂತಹ ಹಬ್ಬಗಳನ್ನ ಸ್ವಯಂ ನಿಯಂತ್ರಿಸಿಕೊಳ್ಳಬೇಕು.

**ಚಿತ್ರದುರ್ಗ:** ಬರುವ ದೀಪಾವಳಿ ಹಬ್ಬದ ಸಮಯದಲ್ಲಿ ಸಾರ್ವಜನಿಕರು ಹಸಿರು ಪಟಾಕಿಗಳನ್ನೇ ಸಿಡಿಸಿ, ಮಾಲಿನ್ಯವನ್ನು ತಡೆದು ಪರಿಸರದ ಬಗ್ಗೆ ಕಾಳಜಿ ವಹಿಸಬೇಕು ಪ್ರತಿಯೊಬ್ಬರಲ್ಲೂ ಸಹ ಪರಿಸರ ಸ್ನೇಹಿ ಚಿಂತನೆಗಳನ್ನು ಅಳವಡಿಸಿಕೊಂಡು, ಮುಂದಿನ ಜನಾಂಗಕ್ಕೆ ಉತ್ತಮ ವಾತಾವರಣವನ್ನು ಬಿಟ್ಟು ಹೋಗಬೇಕಾಗಿದ್ದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಉಪ ಪರಿಸರ ಅಧಿಕಾರಿಗಳಾದ ರಾಜೇಶ್ ರವರು ಮಾತನಾಡಿದರು.

ಅವರು ಚಿತ್ರದುರ್ಗ ನಗರದ ಐಯುಡಿಪಿ ಲೇಔಟ್ ನಲ್ಲಿರುವ ಪ್ರಶಾಂತಿ ವಿದ್ಯಾಲಯದಲ್ಲಿ ಆರ್ ಪ್ರವೀಣ್ ಚಂದ್ರ ರವರ ಜಾನ್ ಮೈನ್ಸ್ ಆಯೋಜಿಸಿದ್ದ ಸ್ವಚ್ಛತಾ ಪಕ್ವಾಡ ಯೋಜನೆಯಲ್ಲಿ, ಕಾರ್ಯಕ್ರಮದಲ್ಲಿ ಉದ್ಘಾಟಿಸುತ್ತಾ ಮಾತನಾಡುತ್ತಿದ್ದರು.

ಮಾಲಿನ್ಯ ಉಂಟು ಮಾಡುವಂತಹ ಹಬ್ಬಗಳ ಬಗ್ಗೆ ನಾವು ಗಮನ ಹರಿಸಬೇಕು, ಬರುವ ದೀಪಾವಳಿಯಂದು ಹೆಚ್ಚು ಪಟಾಕಿ ಸಿಡಿಸದೆ ಶಬ್ದ ಮಾಲಿನ್ಯ, ವಾಯು ಮಾಲಿನ್ಯ, ಜಲ ಮಾಲಿನ್ಯವನ್ನು ನಿಯಂತ್ರಿಸಲು, ಸ್ವಲ್ಪ ಮಟ್ಟಿಗೆ ಹಸಿರು ಪಟಾಕಿಗಳನ್ನೇ ಸಿಡಿಸಿ, ಸ್ವಯಂ ನಿಯಂತ್ರಣ ಸಾಧಿಸಿ ಕೊಳ್ಳಬೇಕೆಂದು ವಿನಂತಿಸಿಕೊಂಡರು.

ಜಾನ್ ಮೈನ್ಸ್‌ನ ಜಿಯಾಲಜಿ ಮ್ಯಾನೇಜರ್ ಶರತ್ ಕುಮಾರ್ ಅವರು ಮಾತನಾಡಿ ಮಕ್ಕಳು ಸಿಹಿ ತಿಂಡಿಗಳನ್ನು ತಿಂದಾಗ, ಅವುಗಳ ಕವರ್ ಗಳನ್ನು ಜೋಬಿನಲ್ಲಿಟ್ಟುಕೊಂಡು, ನಂತರ ಕಸದ ಬುಟ್ಟಿಗೆ ಹಾಕುವಂತಹ ಅಭ್ಯಾಸವನ್ನು ರೂಡಿಸಿಕೊಳ್ಳಬೇಕು, ಎಲ್ಲೆಂದರಲ್ಲಿ ಕಸ ಚೆಲ್ಲುವ ಹವ್ಯಾಸವನ್ನು ತೊರೆಯಬೇಕು ಎಂದರು.

ಜಾನ್ ಮೈನ್ಸ್ ನ ಮ್ಯಾನೇಜರ್ ಆದ ಗುರುರಾಜ್ ಹಿರೇಮಠ್ ರವರು ಮಾತನಾಡಿ ಸ್ವಚ್ಛತೆ ಬಗ್ಗೆ ಹೆಚ್ಚು ಆದ್ಯತೆ ನೀಡುವಂತಹ




ವಿಚಾರಗಳನ್ನು, ಸಣ್ಣವಯಸ್ಸಿನಲ್ಲಿ ಮಕ್ಕಳಿಗೆ ಬೋಧಿಸಬೇಕು, ಪ್ಲಾಸ್ಟಿಕ್ ಅನ್ನು ಮರುಬಳಕೆ ಮಾಡಿ ಪರಿಸರವನ್ನ ಉಳಿಸಿಕೊಳ್ಳಬೇಕು ಎಂದರು.

ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರ ಡಾ. ಎಚ್ .ಕೆ. ಎಸ್, ಸ್ವಾಮಿಯವರು ಮಾತನಾಡುತ್ತಾ ಮಕ್ಕಳಿಗೆ ಮಾದರಿಗಳ ಮುಖಾಂತರ ಕಸದಿಂದ ರಸ ಮಾಡುವ ವಿಚಾರಗಳನ್ನ ತಿಳಿಸಿಕೊಡಬೇಕು, ಪರಿಸರ ಮಾಲಿನ್ಯದಿಂದ ನಿಯಂತ್ರಣ ಮಾಡುವಂತಹ ವಿಚಾರಗಳನ್ನ ಜನಸಾಮಾನ್ಯರಲ್ಲಿ ಹೆಚ್ಚು ಪ್ರಚಾರ ಪಡಿಸಬೇಕು. ಗಾಂಧೀಜಿಯವರ ಚಿಂತನೆಗಳನ್ನ ಅಳವಡಿಸಿಕೊಂಡು ಸರಳ ಜೀವನವನ್ನು ಅಳವಡಿಸಿಕೊಂಡು, ಹತ್ತಿರದಲ್ಲಿ ತಯಾರಾಗುವ ವಸ್ತುಗಳನ್ನ ಬಳಕೆ ಮಾಡಿ ಪರಿಸರವನ್ನ ಕಾಪಾಡಿಕೊಳ್ಳಬೇಕು ಎಂದು ಪ್ರಾತ್ಯಕ್ಷಿಕೆ ಮುಖಾಂತರ ತೋರಿಸಿ ಕೊಟ್ಟರು.

ಕಾರ್ಯಕ್ರಮದಲ್ಲಿ ಅಧ್ಯಕ್ಷ ವಹಿಸಿದ್ದ ಪ್ರಶಾಂತಿ ವಿದ್ಯಾಲಯದ ಅಧ್ಯಕ್ಷರಾದ ಶ್ರೀ ರಮೇಶ್ ಇಟಗಿ ಅವರು ಮಾತನಾಡಿ ಮಕ್ಕಳಲ್ಲಿರುವ ಮುಗ್ಧತೆಯನ್ನು ಪರಿಸರ ರಕ್ಷಣೆ ಗೋಸ್ಕರ ಜಾಗೃತಿಗೊಳಿಸಬೇಕು, ದೊಡ್ಡವರು ಪರಿಸರದ ಚಿಂತನೆ ಅಳವಡಿಸಿಕೊಂಡಷ್ಟು ಮಕ್ಕಳು ಸಹ ಅವುಗಳನ್ನು ಅಳವಡಿಸಿಕೊಳ್ಳಲು ಅನುಕೂಲಕರವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಶಾಂತಿ ವಿದ್ಯಾಲಯದ ಮುಖ್ಯೋಪಾಧ್ಯಾಯರಾದ ಶ್ರೀಮತಿ ಮೌನ, ಶಿಕ್ಷಕರಾದ ಅಶ್ವಿನಿ, ಪವಿತ್ರ, ನಿವೇದಿತ, ಜ್ಯೋತಿ, ಲತಾ, ಜಾನ್ ಮೈನ್ಸ್ ನಾ ಮಹೇಶ್, ಪರಿಸರ ಅಧಿಕಾರಿಗಳಾದ ಅಜಿತ್ ಕುಮಾರ್, ಸರ್ವೆಯರ್ ಮ್ಯಾನೇಜರ್ ಆದ ಉಲ್ಲಾಸ್ ಕುಮಾರ್, ಜೆ ಟಿ ಎಂಜಿನಿಯರಾದ ಅಮರೇಶ್ ಜಿ, ಪರಿಸರ ಅಧಿಕಾರಿಗಳಾದ ಆಸಿಫ್ ಖಾನ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಚಿತ್ರ ಬರೆದಂತಹ ಯಶಸ್, ರಾಘವೇಂದ್ರ, ಶ್ರೇಯಸ್, ಚಂದು, ವಿಶ್ವಾಸ ರವರಿಗೆ ಬಹುಮಾನ ವಿತರಿಸಲಾಯಿತು.

ಶಾಲೆಗೆ ಸ್ವಚ್ಛತೆಗೆ ಅನುಕೂಲಕರವಾಗುವಂತಹ ಕಸದ ಬುಟ್ಟಿ, ಪೊರಕೆ, ಶೌಚಾಲಯ ಸ್ವಚ್ಛಗೊಳಿಸುವ ದ್ರಾವಣಗಳು, ಕೈಗವಚಗಳು, ಮಕ್ಕಳಿಗೆ ಸೋಪು, ಪೇಸ್ಟು, ಉಗುರು ಕತ್ತರಿಸುವ ಸಾಧನ ಮುಂತಾದವುಗಳನ್ನು ವಿತರಿಸಿ, ಸ್ವಚ್ಛತಾ ಪಕ್ವಾಡದ ಬಗ್ಗೆ ಜಾಗೃತಿ ಮೂಡಿಸಲಾಯಿತು.

# ಪಂಚಾಯತ್‌ಗಳ ಅಭಿವೃದ್ಧಿಯಿಂದ ದೇಶದ ಅಭಿವೃದ್ಧಿಯು ಸಾಧ್ಯ



**ಗದಗ:** ದೇಶದ ಅಭಿವೃದ್ಧಿಯಲ್ಲಿ ಪಂಚಾಯತ್‌ಗಳ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಗ್ರಾ.ಪಂ. ಅಧ್ಯಕ್ಷರು, ಉಪಾಧ್ಯಕ್ಷರು, ಪಿಡಿಓಗಳು ಕ್ರಿಯಾತ್ಮಕವಾಗಿ ಕೆಲಸ ನಿರ್ವಹಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಶನಿವಾರ ಮಾನವ ಅಭಿವೃದ್ಧಿ ಸೂಚ್ಯಂಕ ಹಾಗೂ ಸುಸ್ಥಿತ ಅಭಿವೃದ್ಧಿ ಗುರಿಗಳ ಕುರಿತು ಜರುಗಿದ ಉಪನ್ಯಾಸ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯು ಹಲವಾರು ಮಹತ್ವದ ಯೋಜನೆ ಹಾಗೂ ಯೋಚನೆಗಳಿಗೆ ಸರ್ಕಾರಕ್ಕೆ ಮಾರ್ಗದರ್ಶಿಯಾಗಿದೆ. ಗ್ರಾಮದ ಕಟ್ಟಕಡೆಯ ವ್ಯಕ್ತಿ ಶುದ್ಧ ಕುಡಿಯುವ ನೀರು ಸಿಗಬೇಕೆಂದು ಸರ್ಕಾರದ ಆಶಯವಾಗಿತ್ತು. ಈ ಯೋಜನೆಯನ್ನು ಪಂಚಾಯತಿ, ಗ್ರಾಮಗಳಲ್ಲಿ ಯಶಸ್ವಿಯಾಗಿ ಅನುಷ್ಠಾನ ಮಾಡಲಾಯಿತು. ಸದ್ಯ ಕರ್ನಾಟಕದಲ್ಲಿ 20,000 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಸಾಧ್ಯವಾಗಿದೆ. ಇದು ಗದಗ ಜಿಲ್ಲೆಯಿಂದ ಆರಂಭವಾದ ಯೋಜನೆ ಅಭೂತಪೂರ್ವ ಯಶಸ್ವಿಯಾಗಿದ್ದು ನಮ್ಮ ಹೆಮ್ಮೆ ಎಂದರು.

ಕರ್ಮಯೋಗಿ ಮಿಷನ್‌ದ ಡಾ. ಬಾಲಸುಬ್ರಮ್ಹಣ್ಯಂ ಅವರು ಮಾನವ ಅಭಿವೃದ್ಧಿ ಸೂಚ್ಯಂಕ ಹಾಗೂ ಸುಸ್ಥಿತ ಅಭಿವೃದ್ಧಿ ಗುರಿಗಳ ಕುರಿತು ಉಪನ್ಯಾಸ ನೀಡಿದರು.

ದೇಶದ ಪ್ರಜೆಗಳ ಆರೋಗ್ಯ ವ್ಯವಸ್ಥೆ, ಶಿಕ್ಷಣ ವ್ಯವಸ್ಥೆ ಅಭಿವೃದ್ಧಿ ಪಡಿಸುವುದು ಮಾನವ ಅಭಿವೃದ್ಧಿ ಸೂಚ್ಯಂಕದ ಪ್ರಮುಖ ಅಂಶಗಳಾಗಿವೆ. ಮಗು ಹುಟ್ಟಿದಾಗ ಆರೋಗ್ಯಕರವಾಗಿ, ಪ್ರಜ್ಞಾವಂತನಾಗಿ, ಕೌಶಲ್ಯತೆಯಿಂದ ವಿಕಸನ ಹೊಂದಿದರೆ ನಿಜವಾದ ಅಭಿವೃದ್ಧಿಯಾದಂತೆಯೇ. ವಿಕಸಿತ ಪಂಚಾಯತ್ ಕ್ರೋಢೀಕರಿಸಿದರೆ ವಿಕಸಿತ ಭಾರತವಾಗುತ್ತದೆ. ಮಹಾತ್ಮಾ ಗಾಂಧೀಜಿಯವರು ಕಂಡ ಗ್ರಾಮೀಣಾಭಿವೃದ್ಧಿಯ ಕನಸು ನನಸಾಗಬೇಕು. ಸಂಪನ್ಮೂಲಗಳ ಕ್ರೋಢೀಕರಣ ವ್ಯವಸ್ಥೆ, ಆಡಳಿತದ ವ್ಯವಸ್ಥೆಯಲ್ಲಿ ಎದುರಾಗುವ ತೊಂದರೆಗಳು, ಸಮಸ್ಯೆಗಳು ಹಾಗೂ ತೀರ್ಮಾನ ಕೈಗೊಳ್ಳುವುದರ ಕುರಿತು ವಿವರವಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾದಿಕಾರದ ಅಧ್ಯಕ್ಷ ಅಕ್ಬರಸಾಬ

ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ರಾಜೂರ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಶಕುಂತಲಾ ಅಕ್ಕಿ, ಜೆ.ಕೆ.ಜಮಾದಾರ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷರು, ಪಿಡಿಓಗಳು, ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು

# ಪಟಾಕಿ ಮಾರಾಟ ; 18 ವರ್ಷದೊಳಗಿನ ಮಕ್ಕಳ ಬಳಕೆ ನಿಷೇಧ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ದೀಪಾವಳಿ ಹಬ್ಬದ ಪ್ರಯುಕ್ತ ತೆರೆಯುವ ಪಟಾಕಿ ಮಾರಾಟ ಮಳಿಗೆಗಳು, ಪಟಾಕಿ ತಯಾರಿಕೆ ಸೇರಿದಂತೆ ಇತರೆ ಪ್ರಕ್ರಿಯೆಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ನಿಷೇಧಿಸಿ ಕಾರ್ಮಿಕ ಅಧಿಕಾರಿ ಹಾಗೂ ಜಿಲ್ಲಾ ಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿ ಆದೇಶ ಹೊರಡಿಸಿದ್ದಾರೆ.

ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ಹಾಗೂ ತಿದ್ದುಪಡಿ ಕಾಯ್ದೆ 2016 ರನ್ವಯ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಸಿಕೊಳ್ಳುವುದು ಹಾಗೂ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ದಿಮೆಯಲ್ಲಿ ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ತಪ್ಪಿದಲ್ಲಿ ಕಾಯ್ದೆಯಡಿ ಕಾನೂನು ಕ್ರಮವನ್ನು ಜರುಗಿಸಲಾಗುತ್ತದೆ.

# ಶಿವಮೊಗ್ಗ -ಭದ್ರಾವತಿ ರೈಲು ಮಾರ್ಗ ಪರೀಶೀಲನೆ: ವಾಹನಗಳ ಒಡಾಟಕ್ಕೆ ಬದಲಿ ಮಾರ್ಗ

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆ ಶಿವಮೊಗ್ಗ - ಭದ್ರಾವತಿ ನಡುವೆ ಬರುವ ಎಲ್‌ಸಿ.ನಂ: 35,38 ಮತ್ತು 38/ಎ ಗಳನ್ನು ಮುಚ್ಚಲು ಅದಕ್ಕಾಗಿ ಎಲ್‌ಸಿ ಓಪನ್ನಿಗೆ ಮತ್ತು ಪರೀಕ್ಷೆಗಾಗಿ ಅ.19 ರಿಂದ ಅ.25ರವರೆಗೆ ವಿವಿಧ ದಿನಗಳಂದು ತಾತ್ಕಾಲಿಕವಾಗಿ ವಾಹನಗಳು ಮತ್ತು ಸಾರ್ವಜನಿಕರು ಸಮೀಪದ ಬದಲಿ ಮಾರ್ಗಗಳಲ್ಲಿ ಸಂಚರಿಸುವಂತೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿ ಆದೇಶ ನೀಡಿರುತ್ತಾರೆ.

ಎಲ್‌ಸಿ 35- ಲಕ್ಕೀಪುರ ರಸ್ತೆ ಅ. 19ರ ಬೆ.8 ರಿಂದ ಅ.20 ರ ಸಂಜೆ 6ರವರೆಗೆ ಬಿ.ಹೆಚ್.ರಸ್ತೆ ಮುಖಾಂತರ ಕಡದಕಟ್ಟೆ-ಹೆಬ್ಬಂಡಿ ರಸ್ತೆ ಸಂಪರ್ಕ-ಲಕ್ಕೀಪುರ ರಸ್ತೆ ಮಾರ್ಗ.

ಎಲ್‌ಸಿ 38- ನವುಲೆ ಬಸವಾಪುರ ರಸ್ತೆ .-ಅ.22ರ ಬೆ.8 ರಿಂದ ಅ.23 ರ ಸಂಜೆ 6 ರವರೆಗೆ ಎಲ್.ಸಿ.ನಂ.35ರ ಮೂಲಕ ಮಜ್ಜಿಗೇನಹಳ್ಳಿ-ನವುಲೆ ಬಸವಾಪುರ ಸಂಪರ್ಕ ರಸ್ತೆ ಮಾರ್ಗ.

ಎಲ್‌ಸಿ 38/ಎ-ಹೊನ್ನವಿಲೆ ರಸ್ತೆ -ಅ.34 ರ ಬೆ. 8 ರಿಂದ ಅ 25ರ ಸಂಜೆ 6 ರವರೆಗೆ ಎಲ್ ಸಿ 38 ರ ಮೂಲಕ ನವುಲೆ ಬಸವಾಪುರ ರಸ್ತೆ - ಹೊನ್ನವಿಲೆ ರಸ್ತೆ ಮಾರ್ಗ.

ಸಾರ್ವಜನಿಕರು/ ವಾಹನ ಸವಾರರು ಈ ಬದಲಿ ಮಾರ್ಗಗಳಲ್ಲಿ ಅಯಾ ದಿನಾಂಕಗಳಂದು ಮಾತ್ರ ಸಂಚರಿಸಿ ಇಲಾಖೆಯೊಂದಿಗೆ ಸಹಕರಿಸುವಂತೆ ಕೋರಿದೆ.

# "ಕಲಾಪ್ರತಿಭೋತ್ಸವ" ಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು 2025-26 ನೇ ಸಾಲಿನ ನವೆಂಬರ್‌ನಲ್ಲಿ "ಕಲಾಪ್ರತಿಭೋತ್ಸವ" ಆಯೋಜಿಸಿದ್ದು, ವಿವಿಧ ಕಲಾಪ್ರಕಾರದ ಸ್ಪರ್ಧೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಕಲಾಪ್ರಕಾರದ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸುವ ಬಾಲಪ್ರತಿಭೆಗೆ 8 ರಿಂದ 13 ವರ್ಷ, ಕಿಶೋರ ಪ್ರತಿಭೆಗೆ 14 ರಿಂದ 18 ವರ್ಷ, ಯುವ ಪ್ರತಿಭೆಗೆ 19 ರಿಂದ 30 ವರ್ಷ ವಯೋಮಿತಿಯನ್ನು ನಿಗದಿ ಪಡಿಸಲಾಗಿದ್ದು, ವಯಸ್ಸಿನ ದಾಖಲೆಗಾಗಿ ಶಾಲೆ/ ಕಾಲೇಜಿನಿಂದ ದೃಢೀಕರಿಸಿದ ಪತ್ರ ಹಾಗೂ ವಿದ್ಯಾರ್ಥಿಗಳಲ್ಲದಿದ್ದಲ್ಲಿ ನಗರಸಭೆ/ ಪಂಚಾಯಿತಿಯಿಂದ ದೃಢೀಕರಣ ಪತ್ರ ಪಡದು ಸಲ್ಲಿಸಬೇಕು.

ಒಬ್ಬರು ಒಂದೇ ಸ್ಪರ್ಧೆಯಲ್ಲಿ ಮಾತ್ರ ಭಾಗವಹಿಸಲು ಅವಕಾಶವಿದ್ದು, ಕೈ ಬರಹದ ಅರ್ಜಿಯ ಮೂಲಕ ತಾವು ಭಾಗವಹಿಸುವ ಸ್ಪರ್ಧೆಯ ವಿವರದೊಂದಿಗೆ ವಯಸ್ಸಿನ ದಾಖಲಾತಿಯನ್ನು ಸೇರಿಸಿ ಅ.31 ರೊಳಗೆ ಸಹಾಯಕ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕುವೆಂಪು ರಂಗಮಂದಿರ ಇವರಿಗೆ ಸಲ್ಲಿಸಬೇಕೆಂದು ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಬಾಲಪ್ರತಿಭೆ/ ಕಿಶೋರ ಪ್ರತಿಭೆಯ ಸ್ಪರ್ಧಾ ಪ್ರಕಾರಗಳು:- ಶಾಸ್ತ್ರೀಯ ನೃತ್ಯ, ಸುಗಮ ಸಂಗೀತ, ಚಿತ್ರಕಲೆ, ಜಾನಪದ ಗೀತೆ, ಹಿಂದೂಸ್ತಾನಿ/ಕರ್ನಾಟಕ ವಾದ್ಯ ಸಂಗೀತ, ಹಿಂದೂಸ್ತಾನಿ/ ಕರ್ನಾಟಕ ಸಂಗೀತ ಹಾಡುಗಾರಿಕೆ

# ರಾಜ್ಯದ ಮುಂದಿನ ಭವಿಷ್ಯಕ್ಕಾಗಿ ಭ್ರಷ್ಟ ಸರ್ಕಾರವನ್ನು ವಜಾಗೊಳಿಸಿ: ಎಂ.ಪಿ.ಆರ್.

**ದಾವಣಗೆರೆ:** ಕರ್ನಾಟಕದ ಮುಂದಿನ ಭವಿಷ್ಯಕ್ಕಾಗಿ ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಈ ಕೂಡಲೇ ರಾಜ್ಯಪಾಲರು ವಜಾಗೊಳಿಸಬೇಕೆಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಒತ್ತಾಯಿಸಿದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭ್ರಷ್ಟ ಮತ್ತು ಶೋಷಣೆಯ ಕಾಂಗ್ರೆಸ್ ಸರ್ಕಾರದಲ್ಲಿ ಕರ್ನಾಟಕ ದಿವಾಳಿಯಾಗಿದೆ. ಗುತ್ತಿಗೆದಾರರು ಎಂಟು ಸರ್ಕಾರಿ ಇಲಾಖೆಗಳಿಂದ ಪಾವತಿಸದ 33 ಸಾವಿರ ಕೋಟಿಗೆ ಬೇಡಿಕೆ ಇಟ್ಟಿದ್ದಾರೆ.

ನೀರಾವರಿಯಿಂದ ವಸತಿವರೆಗೆ ಪಿಡಬ್ಲ್ಯುಡಿಯಿಂದ ಕಾರ್ಮಿಕರವರೆಗೆ- ಎಲ್ಲಾ ಇಲಾಖೆಗಳು ಉಸಿರುಗಟ್ಟಿವೆ. ಏಕೆಂದರೆ ಸಿಎಂ ಹಾಗೂ ಡಿಸಿಎಂ ಗಳುಕುಚಿ ಉಳಿಸಿಕೊಳ್ಳಲು ರಾಜಕೀಯ ಜಂಜಾಟಕ್ಕೆ ರಾಜ್ಯದ ಬೊಕ್ಕಸ ಖಾಲಿ ಮಾಡಿದ್ದಾರೆ ಎಂದು ದೂರಿದರು.

ಗುತ್ತಿಗೆದಾರರು ಪಾವತಿಗಾಗಿ ಬೇಡಿಕೊಂಡಾಗ ಸರ್ಕಾರ ಹೇಳುತ್ತದೆ ನ್ಯಾಯಾಲಯಕ್ಕೆ ಹೋಗಿ ಎಂದು. ಗುತ್ತಿಗೆದಾರರಿಗೆ ಬಿಲ್ ಪಾವತಿ ಮಾಡಲು ದುಡ್ಡಿಲ್ಲದೆ ಸರ್ಕಾರವನ್ನು ಪಾಪರ್ ಮಾಡಿದ್ದೀರಿ. ಅಪರೂಪಕ್ಕೆ ಕೊಡುವ ಬಿಲ್ಲಿಗೂ 80 ರಷ್ಟು ಕಮಿಷನ್ ಬೇಡಿಕೆ ಇಡುತ್ತಿದ್ದೀರಿ. ನಿಮ್ಮ ಸರ್ಕಾರದ ಲಜ್ಜೆಗೆಟ್ಟ ಭ್ರಷ್ಟಾಚಾರ, ಕಮಿಷನ್ ದಾಹದಿಂದ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಸಂಪೂರ್ಣವಾಗಿ ನಿಂತುಹೋಗಿವೆ. ಇದು ಜನರ ಸರ್ಕಾರವಲ್ಲ ವಸೂಲಿ, ಕಮಿಷನ್, ಭ್ರಷ್ಟಾಚಾರದ ಸರ್ಕಾರ ಎಂಬುದಕ್ಕೆ ಕರ್ನಾಟಕಕ್ಕೆ ಇನ್ನೇನು ಸಾಕ್ಷಿ ಬೇಕು? ಎಂದರು.

ಕರ್ನಾಟಕ ದಿವಾಳಿತನಕ್ಕೆ ಮಾದರಿಯಾಗಿದೆ. ಅಲ್ಲಿ ಪ್ರಾಮಾಣಿಕ ಗುತ್ತಿಗೆದಾರರು ಸಹ ಮುಷ್ಕರ ನಡೆಸಲು ಮುಂದಾಗಿರುವುದರಿಂದ ಅಭಿವೃದ್ಧಿಯು ಸಂಪೂರ್ಣ ಸ್ಥಗಿತಗೊಂಡಿದೆ ಆದ್ದರಿಂದ ಕೂಡಲೇ ರಾಜ್ಯಪಾಲರು ಮಧ್ಯಪ್ರವೇಶ ಮಾಡಿ ರಾಜ್ಯ ಸರ್ಕಾರವನ್ನು ವಜಾಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಪತ್ರಕರ್ತರ ಪ್ರಶ್ನೆಕೊಂದಕ್ಕೆ ಉತ್ತರಿಸಿ, ರಾಜ್ಯದ ಚಿತ್ತಾಪುರ ಭಾರತದಲ್ಲಿದೆಯೋ ಅಥವಾ ಖರ್ಗೆ ಕುಟುಂಬದ ರಿಪಬ್ಲಿಕ್ ಆಗಿದೆಯೋ ಗೊತ್ತಿಲ್ಲ. ಆರ್.ಎಸ್.ಎಸ್ ಪಥಸಂಚಲನಕ್ಕೆ ಪುರಸಭೆಯಿಂದ ಅನುಮತಿ ಪಡೆದು

ಬ್ಯಾನರ್, ಧ್ವಜ ಕಟ್ಟಲು ಜಾಹೀರಾತು ತೆರಿಗೆ ಕಟ್ಟಿ ರಸೀದಿ ಪಡೆಯಲಾಗಿದೆ. ಇಷ್ಟಾದರೂ ರಾತ್ರೋರಾತ್ರಿ ಕೇಸರಿ ಬ್ಯಾನರ್,

ಧ್ವಜಗಳನ್ನು ತೆರವುಗೊಳಿಸಲಾಗಿದೆ. ಪ್ರಿಯಾಂಕ ಖರ್ಗೆ ತಮ್ಮನ್ನು ತಾವು ಚಿತ್ತಾಪುರದ ನಿಜಾಮ ಅಂದುಕೊಂಡಿದ್ದೀರೋ ಗೊತ್ತಿಲ್ಲ. 2028ಕ್ಕೆ ನಮ್ಮ ಸರ್ಕಾರ ಬರುವುದು ಸೂರ್ಯ ಚಂದ್ರರಷ್ಟೇ ಸತ್ಯ. ಆಗ ಈ ಎಲ್ಲಾವಕ್ಕೂ ಸರಿಯಾಗಿ ಉತ್ತರ ಕೊಡುತ್ತೇವೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡರಾದ ರಾಜು ವೀರಣ್ಣ, ಪಂಜು ಪೈಲ್ವಾನ್, ಪ್ರವೀಣ್ ರಾವ್ ಜಾಧವ್, ಅಜಯ್, ಚೇತನ್, ರುದ್ರೇಶ್, ಮಂಜುನಾಥ್, ರವಿಗೌಡ ಇತರರು ಇದ್ದರು.

# ನೇತ್ರಾ ಸಹಾಯಕರ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆಗೆ ಅವಕಾಶ

**ಶಿವಮೊಗ್ಗ:** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ನೇತ್ರಾ ಸಹಾಯಕರ 5 ಹುದ್ದೆಗಳ ಆಯ್ಕೆ ಮಾಡಲಾಗಿದ್ದು, ಆಕ್ಷೇಪಣೆಗಾಗಿ ಆರೋಗ್ಯ ಇಲಾಖೆಯ ಕಚೇರಿ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಆಕ್ಷೇಪಣೆ ಸಲ್ಲಿಸುವವರು ಲಿಖಿತ ರೂಪದಲ್ಲಿ ಅ.24ರೊಳಗಾಗಿ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ದೂ.ಸಂ;8197094440, 9481691580, 08182-222382 ಗೆ ಸಂಪರ್ಕಿಸುವಂತೆ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ್ಯಾಯಬೆಲೆ ಅಂಗಡಿಗಳಲ್ಲಿ ಕಡ್ಡಾಯವಾಗಿ ಸಿ.ಸಿ. ಕ್ಯಾಮರಾ ಅಳವಡಿಕೆಗೆ ಕ್ರಮ



**ದಾವಣಗೆರೆ :** ಅನ್ನಭಾಗ್ಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮಾಡುವುದನ್ನು ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಮತ್ತು ಎಸ್‌ಐಆರ್ ದಾಖಲಿಸಬೇಕೆಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಸೂಚಿಸಿದರು.

ಶನಿವಾರ(ಅ.18) ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿವಿಧ ಇಲಾಖೆಗಳೊಂದಿಗೆ ಅನ್ನಭಾಗ್ಯ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಆಗುತ್ತಿರುವ ಕುರಿತು ಆಯೋಜಿಸಲಾಗಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು

ಮಧ್ಯವರ್ತಿಗಳು ಹಣದ ಆಮಿಷವೊಡ್ಡಿ ಬಡವರಿಂದ ಅಕ್ಕಿ ಖರೀದಿಸುತ್ತಿದ್ದಾರೆ. ಮನೆ-ಮನೆಗೆ ಹೋಗಿ ಕಡಿಮೆ ದುಡ್ಡಿಗೆ ಅಕ್ಕಿ ಸಂಗ್ರಹಿಸುವ ದಂಧೆಕೋರರು, ಅದನ್ನು ರಾಜ್ಯದ ಗಡಿಯಾಚೆ ಮಾರುತ್ತಿದ್ದಾರೆ. ನ್ಯಾಮತಿ ತಾಲ್ಲೂಕುಗಳಲ್ಲಿ ಅತಿ ಹೆಚ್ಚಾಗಿ ನ್ಯಾಯಬೆಲೆ ಅಂಗಡಿಯಿಂದ ಅಕ್ಕಿಯೂ ಕಾಳಸಂತೆಯಲ್ಲಿ ಮಾರಾಟವಾಗುತ್ತಿದ್ದು, ಅದನ್ನು ಹೊರದೇಶಗಳಿಗೆ, ರವಾನೆಯಾಗುತ್ತಿದೆ. ಗಂಜಿ ಮಾಡಲು ತೆಗೆದುಕೊಂಡು ಹೋಗುತ್ತಿದ್ದಾರೆ. ನಗರದ ಪ್ರಮುಖ ಪ್ರದೇಶಗಳಲ್ಲಿ ಸಿ.ಸಿ ಕ್ಯಾಮರಾಗಳನ್ನು ಅಳವಡಿಸಬೇಕು.

ರಾಜ್ಯದಲ್ಲಿ ಬಡವರಿಗೆ ಅನ್ನಭಾಗ್ಯ ಯೋಜನೆಯಡಿ ಉಚಿತವಾಗಿ ನೀಡುತ್ತಿರುವ ಅಕ್ಕಿಯನ್ನು ಫಲಾನುಭವಿಗಳಿಂದ ಕಡಿಮೆ ಬೆಲೆಗೆ ಖರೀದಿಸಿ ಹೊರ ಜಿಲ್ಲೆಗಳಿಗೆ ಸಾಗಿಸುವ ಬಡವರ ಹೊಟ್ಟೆ ತುಂಬಿಸಬೇಕಿದ್ದ ಅನ್ನ ಭಾಗ್ಯದ ಅಕ್ಕಿ ವ್ಯವಸ್ಥಿತವಾಗಿ ರೈಸ್ ಮಿಲ್ ಗಳ ಗೋಡೌನ್ ಸೇರುತ್ತಿದೆ ಎಂದರು.

ಟ್ರಾನ್ಸ್ ಪೋರ್ಟ್ ವಾಹನಗಳಿಗೆ ಜಿಪಿಎಫ್ ಅಳವಡಿಸಬೇಕು. ಅನ್ನಭಾಗ್ಯದ ಸ್ಟಾಕ್ ಬಂದ ತಕ್ಷಣ ಅದನ್ನು ವಾಟ್ಸ್ ಗ್ರೂಪ್ ನಲ್ಲಿ ವಿಡಿಯೋ ಅಳವಡಿಸಬೇಕು. ಸಾರ್ವಜನಿಕರು ನ್ಯಾಯಬೆಲೆ ಅಂಗಡಿ ಅಥವಾ ಇನ್ನಾವುದೇ ಪ್ರದೇಶಗಳಲ್ಲಿ ಅನ್ನಭಾಗ್ಯ ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವುದು ಕಂಡುಬಂದರೆ ಕೂಡಲೇ 112ಗೆ ಕರೆಮಾಡಿ ತಿಳಿಸಬೇಕು.

ಅಕ್ರಮವಾಗಿ ಆಟೋ, ಗೂಡ್ಸ್ ಗಾಡಿಗಳಲ್ಲಿ ಅಕ್ಕಿಯನ್ನು ಖರಿದೀಸುತ್ತಿದ್ದು, ಅಂತಹ ವಾಹನಗಳಿಗೆ ದಂಡ ವಿಧಿಸಬೇಕೆಂದರು.

ಜಿಲ್ಲಾ ಪೊಲೀಸ್ ವರಿಷಾಧಿಕಾರಿ ಉಮಾಪ್ರಶಾಂತ್, ಹೆಚ್ಚುವರಿ ಪೊಲೀಸ್ ವರಿಷಾಧಿಕಾರಿ ಪರಮೇಶ್ವರ ಹಗಡೆ, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಉಪವಿಭಾಗಾಧಿಕಾರಿ ಸಂತೋಷ್, ಗ್ರಾಮೀಣ ಪೊಲೀಸ್ ಠಾಣೆಯ ಡಿವೈಎಸ್‌ಪಿ ಬಸವರಾಜ, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಮಧುಸೂದನ್ ಉಪಸ್ಥಿತರಿದ್ದರು.

# ಕ್ರೀಡೆಗಳಿಂದ ಮಾನಸಿಕ ಮತ್ತು ದೈಹಿಕ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು

**ಬಳ್ಳಾರಿ:** ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ದೈಹಿಕ ಮತ್ತು ಮಾನಸಿಕವಾಗಿ ಸದೃಢತೆಯನ್ನು ಪಡೆದುಕೊಳ್ಳಬಹುದು ಎಂದು ಪೊಲೀಸ್ ಜಿಮ್ಖಾನ ಖಜಾಂಚಿ ಕಾಂದ್ರ ಸತೀಶ್ ಕುಮಾರ್ ತಿಳಿಸಿದರು.

ಅವರು ಇತ್ತೀಚೆಗೆ ಆಲ್ ಇಂಡಿಯಾ ಟೆನ್ನಿಸ್ ಅಸೋಸಿಯೇಷನ್ ವತಿಯಿಂದ ನಗರದ ಜಿಮ್ಖಾನದಲ್ಲಿ ನಡೆಸಲಾದ ಟೆನ್ನಿಸ್ ಟೂರ್ನಮೆಂಟ್ ನಲ್ಲಿ ವಿಜೇತರಾದವರಿಗೆ ಪ್ರಶಸ್ತಿಗಳನ್ನು ನೀಡಿ ಮಾತನಾಡಿದರು.

ಅಕ್ಟೋಬರ್ 10 ರಿಂದ 18ರವರೆಗೆ ನಡೆದ ಅಂಡರ್ 16 ಇಯರ್ಸ್ ಬಾಯ್ಸ್ ಅಂಡ್ ಗರ್ಲ್ಸ್ ಟೆನ್ನಿಸ್ ಪಂದ್ಯಾವಳಿಯಲ್ಲಿ 16 ವರ್ಷದ ಒಳಗಿನ ಪುರುಷರ ಸಿಂಗಲ್ ನಲ್ಲಿ ಶ್ರೇಯಾಂತ್ ಎಂ ವಿಜೇತರಾದರು ರನ್ನರ್ ಆಗಿ ತರುಣ್ ಎಚ್ ಆಯ್ಕೆಯಾದರು.

ಮತ್ತು 16 ವರ್ಷದೊಳಗಿನ ಪುರುಷರ ಡಬಲ್ಸ್ ನಲ್ಲಿ ಭಿನ್ನರಾಗಿ ಶ್ರೇಯಾಂಕ ಕೆಂಪೇಗೌಡ ಮತ್ತು ರನ್ನರಾಗಿ ತರುಣ್ ಎಚ್ ಮತ್ತು ಅರುಣ್ ಆರ್ ಇಸೂರು ಆಯ್ಕೆಯಾದರು. 16 ವರ್ಷದೊಳಗಿನ ಬಾಲಕಿಯರ ಸಿಂಗಲ್ಸ್ ನಲ್ಲಿ ವಿನ್ನರ್ ಆಗಿ ಆಯಿಲಿನ್ ಮರಿಯಂ ಸಿ ಆಯ್ಕೆಯಾದರೆ, ರನ್ನರ್ ಆಗಿ ಲೇಖ್ಯ ಶ್ರೀ ಆಯ್ಕೆಯಾದರು. ಮತ್ತು ಬಾಲಕಿಯರ ಡಬಲ್ಸ್ ನಲ್ಲಿ ಸಾನಿಧ್ಯ



ಮತ್ತು ಆಯಿ ಲಿನ್ ಎಂ ಸಿ ರನ್ನರಾಗಿ ಪ್ರೀತಿ ಮತ್ತು ಖುಷಿ ಆಯ್ಕೆಯಾದರು ಇವರಿಗೆ ಪ್ರಶಸ್ತಿಗಳನ್ನು ಜಿಮ್ಖಾನ ಖಜಾಂಚಿ ಸತೀಶ್ ಕುಮಾರ್ ವಿತರಿಸಿದರು.

ಈ ಸಂದರ್ಭದಲ್ಲಿ ಪೊಲೀಸ್ ಜಿಮ್ಖಾನ ಕಾರ್ಯದರ್ಶಿ ಶಿವ ನಾಯಕ, ಮಾಜಿ ಅಧ್ಯಕ್ಷರಾದ ಜಿತೇಂದ್ರ ಕೆ, ಟೆನ್ನಿಸ್ ಕೋಚ್ಗಳಾದ ಸುರೇಶ್, ಶೇಖರ್ ಉಪಸ್ಥಿತರಿದ್ದರು.

# ನ.4 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

**ಚಿಕ್ಕಮಗಳೂರು:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರೂ ಯುವ ಕೇಂದ್ರದ ಸಹಯೋಗದಲ್ಲಿ ಅಕ್ಟೋಬರ್ 28 ರಂದು ನಿಗದಿಪಡಿಸಲಾಗಿದ್ದ 2025-26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಮುಂದೂಡಿ ನವೆಂಬರ್ 4 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕುವೆಂಪು ಕಲಾ ಮಂದಿರದಲ್ಲಿ ಆಯೋಜಿಸಲಾಗಿದೆ.ಜಿಲ್ಲೆಯ ಎಲ್ಲ ತಾಲ್ಲೂಕುಗಳ ಯುವಜನರಿಗೆ ಜನಪದ ನೃತ್ಯ, ಜನಪದ ಗೀತೆ, ಕಥೆ ಬರೆಯುವುದು,

ಕವಿತೆ ಬರೆಯುವುದು, ಘೋಷಣೆ, ಚಿತ್ರಕಲೆ, ವಿಜ್ಞಾನ ಮೇಳ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶವಿದೆ. 15 ರಿಂದ 29ರ ವಯೋಮಿತಿಯ ಎಲ್ಲ ಯುವಕ, ಯುವತಿಯರು ಈ ಸ್ಪರ್ಧಾ ಕಾರ್ಯಕ್ರಮದಲ್ಲಿ ಮುಕ್ತವಾಗಿ ಭಾಗವಹಿಸಬಹುದು. ಆಸಕ್ತ ಯುವಜನರು ತಮ್ಮ ಹೆಸರು, ವಿಳಾಸ, ವಯಸ್ಸಿನ ಪ್ರಮಾಣಪತ್ರ ಸಹಿತ ಭಾಗವಹಿಸುವ ಸ್ಪರ್ಧೆ ವಿವರಗಳೊಂದಿಗೆ ನವೆಂಬರ್ 4 ರಂದು ಬೆಳಿಗ್ಗೆ 9.30 ಗಂಟೆಯೊಳಗೆ ಕುವೆಂಪು ಕಲಾ ಮಂದಿರದಲ್ಲಿ ವರದಿ ಮಾಡಿಕೊಳ್ಳಲು ಕೋರಲಾಗಿದೆ. ವಿಜೇತರಿಗೆ ಪಾರಿತೋಷಕ, ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಕಚೇರಿ ವೇಳೆಯಲ್ಲಿ (ದೂರವಾಣಿ ಸಂಖ್ಯೆ:-08262-295724) ಸಂಪರ್ಕಿಸಬಹುದು.

# ಪೂರ್ವಭಾವಿ ಸಭೆ

**ದಾವಣಗೆರೆ:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಸ್ಥಾಪನೆಗೊಂಡು 50 ವರ್ಷಗಳಾಗಿರುವ ಹಿನ್ನೆಲೆಯಲ್ಲಿ ಸುವರ್ಣ ಮಹೋತ್ಸವ ಸಂಭ್ರಮಾಚರಣೆ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 23 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ತುಂಗಭದ್ರಾ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

# ನೀವೂ ಕೋರ್ಟ್ ಆದೇಶ ಪಾಲಿಸಿ, ಇಲ್ಲವಾದರೆ ಬೇರೆ ಕಡೆ ಹೋಗಿ ಜಿಲ್ಲಾಧಿಕಾರಿ ವಿರುದ್ಧ ಶಾಸಕ ಬಿ.ಪಿ.ಹರೀಶ್ ಕಿಡಿ

**ದಾವಣಗೆರೆ:** ಹಿಂದೂಗಳ ಹಬ್ಬಗಳು ಬಂದಾಗ ಮಾತ್ರ ಜಿಲ್ಲಾಡಳಿತಕ್ಕೆ ಕಾನೂನು ನೆನಪಾಗುತ್ತದೆ. ಹೈಕೋರ್ಟ್, ಸುಪ್ರೀಂ ಕೋರ್ಟ್‌ಗಳು ಈ ರೀತಿ ಆದೇಶ ಮಾಡಿವೆ ಎಂದು ಹೇಳಿ ಹಬ್ಬದ ವಾತಾವರಣ ಕೆಡಿಸುವ ಕಾರ್ಯದಲ್ಲಿ ಜಿಲ್ಲಾಡಳಿತ ತೊಡಗಿಕೊಂಡಿದೆ ಎಂದು ಹರಿಹರ ಶಾಸಕ ಬಿ.ಪಿ.ಹರೀಶ್ ಜಿಲ್ಲಾಡಳಿತದ ವಿರುದ್ಧ ಹರಿಹಾಯ್ದರು.

ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೀಪಾವಳಿ ಹಬ್ಬಕ್ಕೆ 125 ಡೆಸಿಬಲ್‌ಗೂ ಮೇಲ್ಪಟ್ಟ ಪಟಾಕಿಗಳು ನಿಷೇದ ಎಂದು ಜಿಲ್ಲಾಧಿಕಾರಿಗಳು ಹೊಸ ಆದೇಶವೊಂದನ್ನು ಮಾಡಿದ್ದಾರೆ. ಜಿಲ್ಲಾಧಿಕಾರಿಗೆ ಹಿಂದೂಗಳ ಹಬ್ಬಕ್ಕೆ ಮಾತ್ರ ನೆನೆಪಿಗೆ ಬರುವ ಈ ಡೆಸಿಬಲ್‌ಗಳು ದಿನ ಬೆಳಗಿನಿಂದ ಸಂಜೆವರೆಗೆ ಮಸೀದಿ ಮೇಲೆ ಕೂಗುವ ಆಜಾನ್‌ಗೆ ಏಕೆ ಬರುವುದಿಲ್ಲ. ಇದೇ ಸುಪ್ರೀಂ ಕೋರ್ಟ್ ಆಜಾನ್‌ಗೂ ಇಂತಿಷ್ಟೇ ಡೆಸಿಬಲ್ ಎಂದು ಆದೇಶ ಹೊರಡಿಸಿದೆ. ಅದು ಈ ಜಿಲ್ಲಾಧಿಕಾರಿಗೆ ನೆನೆಪಿಗೆ ಬರಲ್ವ? ಅದನ್ನು ಕೇಳುವ ಧೈರ್ಯ ಇವರಿಗೆ ಇಲ್ವ ಎಂದು ಪ್ರಶ್ನೆ ಮಾಡಿದರು.

ಎಸ್ಪಿ ಅವರು ರಿಂಗ್ ರೋಡ್, ರಾಂ ಅಂಡ್ ಕೋ ವೃತ್ತ, ಎಂಸಿಸಿ ಬಡಾವಣೆಗಳಲ್ಲಿ ಮಾತ್ರ ತಾವೇ ಹೆಲ್ಮೆಟ್ ಕಾರ್ಯಚರಣೆ ನಡೆಸುತ್ತಾರೆ. ಅವರಿಗೆ ಇಲ್ಲಿ ಮಾತ್ರ ಕಾನೂನು ಕಾಣಿಸುತ್ತದೆ. ಅದೇ ಹಳೇ ಭಾಗದ ಅಜಾದ್ ನಗರ, ಬಾಷ ನಗರದಲ್ಲಿ ಹೆಲ್ಮೆಟ್ ಬದಲು ಟೋಪಿ ಹಾಕಿಕೊಂಡು ಬೈಕ್ ನಲ್ಲಿ ಹೋಗ್ತಾರಲ್ವ ಅಂತಹವರ ಮೇಲೆ ಎಷ್ಟು ಕೇಸ್ ಮಾಡಿದ್ದೀರಿ? ಟೋಪಿ ಹಾಕುವರಿಗೆ ಒಂದು ಕಾನೂನು, ಕುಂಕುಮ ಹಚ್ಚೋರಿಗೆ ಒಂದು ಕಾನೂನು ಎಂದು ಎಸ್ಪಿ ವಿರುದ್ಧ ಕೆಂಡಮಂಡಲವಾದರು.

2012ರಲ್ಲಿ ಚನ್ನಗಿರಿಯ ಮಾಡಾಳು ವಿರೂಪಾಕ್ಷಪ್ಪ ಅವರು ಶಾಸಕರಾಗಿದ್ದ ವೇಳೆ ಅಲ್ಲಿನ ಕ್ರೀಡಾಂಗಣಕ್ಕೆ ಅವರ ಹೆಸರೆ ಇಡಲಾಗಿತ್ತು. ನಂತರದ ದಿನಗಳಲ್ಲಿ ಇದೇ ಜಿಲ್ಲಾಧಿಕಾರಿ ಅದನ್ನು ತೆರವು ಮಾಡಿದರು. 2023ರಲ್ಲಿ ಈ ಬಗ್ಗೆ ವಕೀಲರೊಬ್ಬರು ನ್ಯಾಯಲಯದ ಮೊರೆ ಹೋದಾಗ ಬದುಕಿರುವವರ ಹೆಸರುಗಳನ್ನು ಸಾರ್ವಜನಿಕ ಹಾಗೂ ಸರ್ಕಾರಿ ಆಸ್ತಿಗಳಿಗೆ ಇಡುವಂತಿಲ್ಲ ಕೂಡಲೇ ದಾವಣಗೆರೆಯಲ್ಲಿನ ಶಾಮನೂರು ಶಿವಶಂಕರಪ್ಪ ಹಾಗೂ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಹೆಸರುಗಳ್ನು ತೆರವು ಮಾಡುವಂತೆ ಹೈಕೋರ್ಟ್ ಆದೇಶ ಮಾಡಿದೆ ಎಂದರು.

ಆದೇಶ ಬಂದು 4 ತಿಂಗಳು ಕಳೆದರೂ ಇನ್ನೂ ಈ ಜಿಲ್ಲಾಧಿಕಾರಿ ಆದೇಶ ಪಾಲನೆ ಮಾಡುತ್ತಿಲ್ಲ. ಜಿಲ್ಲಾಧಿಕಾರಿ ಶಾಮನೂರು ಮನೆಯ ಸೇವೆ ಮಾಡಲೇ ದಾವಣಗೆರೆಗೆ ಬಂದಂತಿದೆ. ಸ್ವಾಮೀಗಳೇ ನಿಮಗೆ ಇಲ್ಲಿ ಕೆಲಸ ಮಾಡಲು ಆಗದಿದ್ದರೆ ಬೇರೆ ಕಡೆಗೆ ಹೋಗಿ ಎಂದು ಅವರು ವಾಗ್ದಾಳಿ ನಡೆಸಿದರು.

ಜಿಲ್ಲಾಧಿಕಾರಿಗಳು ಎಲ್ಲಾ ಸಮುದಾಯಗಳ್ನು ಒಂದೇ ರೀತಿ ನೋಡಬೇಕು ಹಾಗೂ ತಾವುಗಳು ಆದೇಶ ಮಾಡುವಂತೆ ಕೋರ್ಟ್ ಆದೇಶಗಳನ್ನು ಪಾಲಿಸಬೇಕು. ಈ ಕೂಡಲೇ ಸಾರ್ವಜನಿಕ ಹಾಗೂ ಸರ್ಕಾರಿ ಕಚೇರಿಗಳಿಗೆ ಯಾರದ್ದೇ ಆಗಿರಲಿ ಬದುಕಿರುವವರ ಹೆಸರುಗಳನ್ನು ತೆರವುಗೊಳಿಸಬೇಕು ಇಲ್ಲವಾದರೆ ನಿಮ್ಮ ಕಚೇರಿ ಮುಂದೆಯೇ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

# ಕೆಯುಡಬ್ಲ್ಯೂಜೆ ಚುನಾವಣೆ: ನಾಮಪತ್ರ ಸಲ್ಲಿಕೆ ನ.19 ರಿಂದ ಆರಂಭ

**ಗದಗ:** ರಾಜ್ಯದ ಕಾರ್ಯನಿರತ ಪತ್ರಕರ್ತರ ಪ್ರತಿಷ್ಠಿತ ಪ್ರಾತಿನಿಧಿಕ ಸಂಘಟನೆಯಾದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕಾನಿಪ) 2025-28 ನೆ ಅವಧಿಯ ಆಡಳಿತ ಮಂಡಳಿ ಆಯ್ಕೆಯಾಗಿ ಚುನಾವಣೆ ಘೋಷಣೆಯಾಗಿದೆ. ಗದಗ ಜಿಲ್ಲಾ ಘಟಕದ ಆಡಳಿತ ಮಂಡಳಿಗೆ ಚುನಾವಣೆ ನಡೆಯಲಿದೆ. ಅ. 13 ರಂದು ಸೋಮವಾರ ಚುನಾವಣಾ ಅಧಿಸೂಚನೆ ಹೊರಡಿಸಲಾಗಿತ್ತು. ಅ. 19ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ. ಅ.20, 21, 22 ರಂದು ದೀಪಾವಳಿ ನಿಮಿತ್ಯ ರಜೆ ಇರಲಿದೆ.ಅ.27 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನ. ಅ.28 ನಾಮಪತ್ರಗಳ ಪರಿಶೀಲನೆ ನಡೆದು, ಅ. 30 ನಾಮಪತ್ರಗಳನ್ನು ಹಿಂತೆಗೆದುಕೊಳ್ಳುವ ಕೊನೆಯ ದಿನವಾಗಿರುತ್ತದೆ. ನಾಮಪತ್ರ ಸಲ್ಲಿಸುವ ಅಭ್ಯರ್ಥಿಗಳು ಭಾನುವಾರ 11 ರಿಂದ 1 ಗಂಟೆ ಒಳಗಾಗಿ ಜಿಲ್ಲಾ ಪತ್ರಕರ್ತರ ಭವನದ ಚುನಾವಣಾ ಘಟಕವನ್ನು ಸಂಪರ್ಕಿಸಬಹುದು.

# ಅಧುನಿಕ ಜಗತ್ತಿನಲ್ಲಿ ವಿದ್ಯಾರ್ಥಿಗಳಿಗೆ ವಿಶಾಲವಾದ ಅವಕಾಶಗಳಿವೆ

**ಗದಗ :** ದಿ.ರಾಕೇಶ ಸಿದ್ದರಾಮಯ್ಯ ಅವರು ಇಂದು ನಮ್ಮೊಂದಿಗಿಲ್ಲ ಆದರೆ, ಶ್ರೀ ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ಹೆಸರಿನಲ್ಲಿ ಹಲವಾರು ಶಿಕ್ಷಣ ಸಂಸ್ಥೆಗಳನ್ನು ಉತ್ತಮವಾಗಿ ನಡೆಸುವ ಮೂಲಕ ಅವರ ಹೆಸರನ್ನು ಅಜರಾಮರಗೊಳಿಸಿದ್ದಾರೆ ಎಂದು ಶಾಸಕ ಹಾಗೂ ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಜಿ.ಎಸ್.ಪಾಟೀಲ ಅವರು ಹೇಳಿದರು.



ನಗರದ ಕಳಸಾಪೂರ ರಸ್ತೆಯಲ್ಲಿರುವ ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಕಾಲೇಜಿನ ನೂತನ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ನಂತರ ಶ್ರೀ ರಾಕೇಶ ಸಿದ್ದರಾಮಯ್ಯ ಸಭಾಭವನದಲ್ಲಿ ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಡೊಮೆಸ್ಟಿಕ್ ಡಾಟಾ ಎಂಟ್ರಿ ಆಪರೇಟರ್ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಇಂದಿನ ದಿನಗಳಲ್ಲಿ ಪ್ರಯತ್ನ ಮಾಡಿದರೆ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ಪಡೆಯಬಹುದು. ಆದರೆ ದೊರಕಿರುವ ಅನುದಾನವನ್ನು ಸದುಪಯೋಗ ಪಡೆಸಿಕೊಳ್ಳುವ ಸಂಸ್ಥೆಗಳು ವಿರಳವಾಗಿವೆ. ಇವುಗಳ ಮಧ್ಯ ರಾಕೇಶ ಸಿದ್ದರಾಮಯ್ಯ ಟ್ರಸ್ಟ ವತಿಯಿಂದ ಸಮಾಜಕ್ಕಾಗಿ ಹಾಗೂ ಸಾರ್ವಜನಿಕರಿಗಾಗಿ ತನ್ನದೆಯಾದ ಹಲವಾರು ಕೆಲಸ ಕಾರ್ಯಗಳನ್ನು ಮಾಡುತ್ತಾ ಮತ್ತು ಗುಣಮಟ್ಟದ ಶಿಕ್ಷಣ ನೀಡುತ್ತಾ ಬಂದಿರುವದರಿಂದ ಈ ಸಂಸ್ಥೆಯು ಇಂದು ಹೆಮ್ಮರವಾಗಿ ಬೆಳೆದಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರವು ಯಾರೂ ಶಿಕ್ಷಣದಿಂದ ವಂಚಿತರಾಗಬಾರದೆಂದು ಎಲ್ಲ ವರ್ಗದ ಜನರಿಗಾಗಿ ಹಾಸ್ಟೆಲ್‌ಗಳನ್ನು ನಿರ್ಮಾಣ ಮಾಡಿದೆ. ಮೊದಲು ಗುಡಿ ಕೈಗಾರಿಕೆಗಳ ಬಗ್ಗೆ ತರಬೇತಿ ನೀಡಲಾಗುತ್ತಿತ್ತು. ಈಗ ಡೋಮೆಸ್ಟಿಕ್ ತರಬೇತಿ ಪಡೆಯುವ ಮೂಲಕ ವಿದ್ಯಾರ್ಥಿಗಳಿಗೆ ಇಲಾಖೆಯು ಪ್ರಮಾಣಪತ್ರ ನೀಡಿ ಅನುಕೂಲ ಕಲ್ಪಿಸಲಾಗುತ್ತದೆ. ವಿದ್ಯಾರ್ಥಿಗಳು ಕಷ್ಟಪಟ್ಟರೆ ಗುರಿ ಮುಟ್ಟಲು ಸಾಧ್ಯವಾಗುತ್ತದೆ. ಮುಂದಿನ ದಿನಗಳಲ್ಲಿ ಬಡವಿದ್ಯಾರ್ಥಿಗಳ ಶಿಕ್ಷಣಕ್ಕಾಗಿ ಪ್ರೋತ್ಸಾಹ ನೀಡುವದಾಗಿ ಭರವಸೆ ನೀಡಿದರು.

ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರ ಅಪ್ತಕಾರ್ಯದರ್ಶಿ ಅಶೋಕ ಮಿರ್ಜಿ ಅವರು ಮಾತನಾಡಿ, ವಿದ್ಯಾರ್ಥಿಗಳಾದವರು ಯಾವುದೇ ಕೆಲಸವಾಗಲಿ ಆತ್ಮವಿಶ್ವಾಸದಿಂದ ಶ್ರದ್ದೆಯಿಂದ "ದಿ ಬೆಸ್ಟ್" ಎನ್ನುವ ರೀತಿಯಲ್ಲಿ ಮಾಡಬೇಕು. ಈ ಹಿಂದೆ ಐಟಿಐ ಕೋರ್ಸಗೆ ಪ್ರವೇಶ ಸಿಗುತ್ತಿರಲಿಲ್ಲ ಈಗ ಸಾಕಷ್ಟು ಅವಕಾಶ ಇರುವದರಿಂದ ಐಟಿಐ ವಿಧ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಸಮಾಜ ಕಟ್ಟುವ ಕೆಲಸ ಮಾಡಬೇಕು.ಜೀವನದಲ್ಲಿ ಉತ್ತಮ ಆಯ್ಕೆ ಉತ್ತಮ ಭವಿಷ್ಯ ನಿರ್ಮಾಣ ಮಾಡಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ವೇದಿಕೆ ಮೇಲೆ ರಾಕೇಶ ಸಿದ್ದರಾಮಯ್ಯ ಟ್ರಸ್ಟ್‌ನ ಅಧ್ಯಕ್ಷ ರಾಮಕೃಷ್ಣ ರೊಳ್ಳಿ, ಕಾಳಿದಾಸ ಶಿಕ್ಷಣ ಸಮಿತಿಯ ಕಾರ್ಯದರ್ಶಿ ವೈ. ಬಿ.ಬಾಣಾಪೂರ, ವಿ.ಆರ್. ಗುಡಿಸಾಗರ, ಬಾವಿಕಟ್ಟಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ನಿರ್ದೇಶಕಿ ದ್ರಾಕ್ಷಾಯಣಿ ಪಾಟೀಲ, ವೈ.ಬಿ.ಕತ್ತಿ. ಮಲ್ಲೂರ ಬಸವರಾಜ, ಮಹಾಂತೇಶ ಕೆ.ಬಸವರಾಜ ನವಲಗುಂದ, ಯೂಸೂಪ ಇಟಗಿ, ಕೆ.ಬಿ.ಕಂಬಳಿ, ಯಲ್ಲಪ್ಪ ಗುರಿಕಾರ, ಶಿವಣ್ಣ ಸಿಂಗಟಾಲಕೇರಿ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ಬಸಪ್ಪ ಹ್ಯಾಟಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಬಸವರಾಜ ಲದ್ದಿ ಅವರು ಕಾರ್ಯಕ್ರಮ ನಿರೂಪಿಸಿದರು. ಪ್ರಾ. ರಮೇಶ ವಡವಿ ಅವರು ವಂದಿಸಿದರು.

# ಮಳೆ ಮುನ್ಸೂಚನೆ: ಎಚ್ಚರಿಕೆ ವಹಿಸಲು ಭಕ್ತರಿಗೆ ಸಲಹೆ

**ಚಿಕ್ಕಮಗಳೂರು:** 18 ರಿಂದ 26 ರವರೆಗೆ ಮಲೆನಾಡು ಜಿಲ್ಲೆಯಾದ ಚಿಕ್ಕಮಗಳೂರಿನಲ್ಲಿ ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ಬಿಂಡಿಗಾ ಶ್ರೀ ದೇವೀರಮ್ಮನ ಜಾತ್ರೋತ್ಸವದ ದಿನಗಳಲ್ಲಿ ಶ್ರೀ ದೇವಿಯ ದರ್ಶನಕ್ಕೆ ಅಕ್ಟೋಬರ್ 19 ಹಾಗೂ 20 ರಂದು ಬೆಟ್ಟ ಹತ್ತುವ ಭಕ್ತಾದಿಗಳು, ಸಾರ್ವಜನಿಕರು, ಪ್ರವಾಸಿಗರು ತಮ್ಮ ವೈಯಕ್ತಿಕ ರಕ್ಷಣೆ ಹಾಗೂ ಸುರಕ್ಷತೆ ದೃಷ್ಟಿಯಿಂದ ಸೂಕ್ತ ಮುನ್ನೆಚ್ಚರಿಕೆ ವಹಿಸುವುದಲ್ಲದೆ, ಅಗತ್ಯವಿರುವ ಎಲ್ಲ ಸುರಕ್ಷತಾ ಸಾಮಗ್ರಿಗಳೊಂದಿಗೆ ಆಗಮಿಸಿ ಯಾವುದೇ ಅಹಿತಕರ ಘಟನೆಗಳಿಗೆ ಅವಕಾಶ ಕೊಡದೆ ಶ್ರೀ ದೇವೀರಮ್ಮ ಜಾತ್ರಾ ಮಹೋತ್ಸವು ಸುಗಮವಾಗಿ ಹಾಗೂ ಯಶಸ್ವಿಯಾಗಿ ಸಂಪನ್ನವಾಗಲು ಸಹಕಾರ ನೀಡುವಂತೆ ಜಿಲ್ಲಾಡಳಿತ ಕೋರಿದೆ.

ಜಿಲ್ಲೆಯ ಗಿರಿ ಭಾಗಗಳಾದ ಮುಳ್ಳಯ್ಯನಗಿರಿ, ಶ್ರೀ ಗುರು ದತ್ತಾತ್ರೇಯ ಬಾಬಾಬುಡನ್ ಸ್ವಾಮಿ ದರ್ಗಾ ಸಂಸ್ಥೆ, ಗಾಳಿಕೆರೆ, ಶ್ರೀ ದೇವೀರಮ್ಮ ಬೆಟ್ಟ ಮತ್ತು ಮಾಣಿಕ್ಯಧಾರಾ ಸ್ಥಳಗಳಲ್ಲಿ ಅಕ್ಟೋಬರ್ 18 ರಿಂದ 26 ರವರೆಗೆ 10 ರಿಂದ 30 ಮಿ.ಮೀ ಮಳೆಯಾಗುವ ಸಂಭವವಿದೆ ಎಂದು ಹವಾಮಾನ ಇಲಾಖೆ ಮಾಹಿತಿ ನೀಡಿದೆ. ಈ ಹಿನ್ನೆಲೆಯಲ್ಲಿ ಭಕ್ತರು, ಸಾರ್ವಜನಿಕರು ಹಾಗೂ ಪ್ರವಾಸಿಗರ ರಕ್ಷಣಾ ಹಿತದೃಷ್ಟಿಯಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಕೂಡ ಸೂಕ್ತ ಮುಂಜಾಗೃತಾ ಕ್ರಮ ವಹಿಸಲಿದೆ ಎಂದು ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಸೇವಾ ನ್ಯೂನತೆ ಆರೋಪ: ಬಡ್ಡಿ ಸಹಿತ ಹಣ ವಾಪಸಿಗೆ ಆದೇಶ

## ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ತೀರ್ಪು

ಚಿಕ್ಕಮಗಳೂರು, ಅ.18: ಒಪ್ಪಿಗೆ ಪಡೆಯದೆ ಗುಂಪು ಆರೋಗ್ಯ ವಿಮೆಗಾಗಿ ಹಣ ಕಡಿತಗೊಳಿಸಿ ಸೇವಾ ನ್ಯೂನತೆ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬ್ಯಾಂಕ್ ಹಾಗೂ ಇನ್‌ಶೂರೆನ್ಸ್ ಕಂಪನಿಗಳ ವಿರುದ್ಧ ತೀರ್ಪು ನೀಡಿರುವ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಬಡ್ಡಿ ಸಹಿತ ಹಣ ಮರಳಿಸುವಂತೆ ಕಂಪನಿಗಳಿಗೆ ಆದೇಶ ನೀಡಿದೆ.

ನಗರದ ಕೋಟೆ ಚೆನ್ನಾಪುರದ ಎ.ಪಿ.ನಾಗೇಶ್ ಗೌಡ ಎಂಬುವವರು ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ನ ವಸ್ತಾರೆ ಶಾಖೆಯಲ್ಲಿ ಉಳಿತಾಯ ಖಾತೆ ಹೊಂದಿದ್ದಾರೆ. ನಾಗೇಶ್ ಗೌಡರ ಖಾತೆಯಿಂದ ತಲಾ 76,793 ರೂ.ಗಳಂತೆ ಒಟ್ಟು 1,53,586 ರೂ. ಗಳನ್ನು ಕಡಿತಗೊಳಿಸಿದ್ದು, ಈ ಬಗ್ಗೆ ಬ್ಯಾಂಕ್ ವ್ಯವಸ್ಥಾಪಕರನ್ನು ಸಂಪರ್ಕಿಸಿದ ಅವರು ಈ ಹಣವನ್ನು ಮರಳಿಸುವಂತೆ ಮನವಿ ಮಾಡಿಕೊಂಡಿದ್ದರು. ಆದರೆ ಹಣ ಮರಳಿಸದೆ ಸೇವಾ ನ್ಯೂನತೆ ಎಸಗಿದ್ದರೆನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಬ್ಯಾಂಕ್ ವ್ಯವಸ್ಥಾಪಕರು, ಹೆಚ್‌ಡಿಎಫ್‌ಸಿ ಎರ್ಗೊ ಜನರಲ್ ಇನ್‌ಶೂರೆನ್ಸ್ ಕಂಪನಿಯ ಮಂಗಳೂರು ಹಾಗೂ ಬೆಂಗಳೂರು ಕಚೇರಿಯ ವ್ಯವಸ್ಥಾಪಕರುಗಳು ಹಾಗೂ ಈ ಸಂಸ್ಥೆಯ ಕಾರ್ಯಾಚರಣೆ ಮತ್ತು ಸೇವಾ ಗುಂಪಿನ ಹಿರಿಯ ಉಪಾಧ್ಯಕ್ಷರು ಹಾಗೂ ಅಧ್ಯಕ್ಷರ ವಿರುದ್ಧ ಕಳೆದ ಡಿಸೆಂಬರ್ 4 ರಂದು ನಾಗೇಶ್‌ಗೌಡ ಅವರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಈ ಬಗ್ಗೆ ವಿಚಾರಣೆ ನಡೆಸಿದ ಆಯೋಗವು ಇತ್ತೀಚೆಗೆ ತೀರ್ಪು ನೀಡಿ ವಿಮೆ ಮೊತ್ತವಾದ ಎರಡು ಬಾರಿ ಖಾತೆಯಿಂದ ಕಡಿತಗೊಳಿಸಿದ ಒಟ್ಟು ಮೊತ್ತ 1,53,586 ರೂ.ಗಳನ್ನು ಶೇ.9ರ ವಾರ್ಷಿಕ ಬಡ್ಡಿ ಸಹಿತ ದೂರುದಾರರಿಗೆ ಮರಳಿಸುವಂತೆ ಹಾಗೂ ಪರಿಹಾರವಾಗಿ 20 ಸಾವಿರ ರೂ.ಗಳು ಮತ್ತು ಪ್ರಕರಣದ ಖರ್ಚು-ವೆಚ್ಚಕ್ಕಾಗಿ 10 ಸಾವಿರ ರೂ.ಗಳನ್ನು ನೀಡುವಂತೆ ಆದೇಶ ನೀಡಿದೆ.

# ಕ್ರೀಡಾ ಸಾಧಕ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಮಂತ್ರಾಲಯದ ಕ್ರೀಡಾ ಇಲಾಖೆಯು ವಿವಿಧ ಕ್ರೀಡಾ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವವರಿಗೆ ಅರ್ಜುನ ಪ್ರಶಸ್ತಿ, ರಾಷ್ಟ್ರೀಯ ಕ್ರೀಡಾ ಪೋಷಕ ಪ್ರಶಸ್ತಿ, ದ್ರೋಣಾಚಾರ್ಯ ಪ್ರಶಸ್ತಿ ಹಾಗೂ ಧ್ಯಾನ್ ಚಂದ್ ಖೇಲ್ ರತ್ನ ಪ್ರಶಸ್ತಿಗಳನ್ನು ನೀಡುತ್ತಿದೆ.

ಈ ಪ್ರಶಸ್ತಿಗಳಿಗೆ ಆಸಕ್ತ ಕ್ರೀಡಾ ಸಾಧಕರು ಮಾರ್ಗಸೂಚಿಯಲ್ಲಿ ಸೂಚಿಸಿರುವಂತೆ ಖಚಿತಪಡಿಸಿಕೊಂಡು ಆನ್‌ಲೈನ್ (ವೆಬ್ ಸೈಟ್: www.dbtyas.sports.gov <http://www.dbtyas.sports.gov/>) ಮೂಲಕ ಅಕ್ಟೋಬರ್ 28 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ sportsawards-moyas@gov.in <mailto:sportsawards-moyas@gov.in> (ದೂರವಾಣಿ ಸಂಖ್ಯೆ -011-23387432 ಅಥವಾ 1800-202-5155) ಮೂಲಕ ಸಂಪರ್ಕಿಸಬಹುದು.

# ಸಾರ್ವಜನಿಕರು ಡೆಂಗ್ಯೂ ಜ್ವರದ ಬಗ್ಗೆ ಜಾಗೃತಿವಹಿಸಿ

**ಬಳ್ಳಾರಿ:** ಸಾರ್ವಜನಿಕರು ತಮ್ಮ ಮನೆಯ ಸುತ್ತಮುತ್ತ ನೀರು ನಿಲ್ಲುವುದರಿಂದ ಡೆಂಗ್ಯು ಹರಡುವ ಈಡಿಸ್ ಇಜಿಪ್ಟೈ ಸೊಳ್ಳೆಯ ಸಂತತಿ ಹೆಚ್ಚಾಗುವ ಸಾಧ್ಯತೆ ಇದ್ದು, ಡೆಂಗ್ಯು ಪ್ರಕರಣಗಳು ಹೆಚ್ಚು ಕಂಡು ಬರುವುದರಿಂದ ನೀರು ನಿಲ್ಲದಂತೆ ನೋಡಿಕೊಂಡು ಡೆಂಗ್ಯೂ ಜ್ವರದ ಬಗ್ಗೆ ಜಾಗೃತಿವಹಿಸಿವಬೇಕು ಎಂದು ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಹೇಳಿದರು.



ನಗರದ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಬ್ರೂಸ್‌ಪೇಟೆ ವ್ಯಾಪ್ತಿಯಲ್ಲಿ ಬರುವ ಕೋಟೆ ಪ್ರದೇಶದ 39ನೇ ವಾರ್ಡಿನಲ್ಲಿ ಡೆಂಗ್ಯೂ ಜ್ವರದ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡುತ್ತಾ ಮಾತನಾಡಿದರು.

ನೀರು ತುಂಬುವ ಪರಿಕರಣಗಳನ್ನು ವಾರಕ್ಕೊಮ್ಮೆ ಸ್ವಚ್ಚಗೊಳಿಸಿ ಮತ್ತು ಯಾರಿಗಾದರೂ ಒಂದೇ ದಿನಕ್ಕಿಂತ ಹೆಚ್ಚು ಬಾರಿ ಜ್ವರ ಕಂಡು ಬಂದರೆ ವೈದ್ಯರ ಬಳಿ ಪರೀಕ್ಷಿಸಿ ಅಗತ್ಯ ಚಿಕಿತ್ಸೆ ಪಡೆಯಬೇಕು. ಅದರಲ್ಲೂ ಚಿಕ್ಕ ಮಕ್ಕಳು, ಗರ್ಭಿಣಿಯರು, ವಯೋವೃದ್ದರ ಕಾಳಜಿ ತೆಗೆದುಕೊಂಡು ನಿರ್ಲಕ್ಷ್ಯ ವಹಿಸಬೇಡಿ, ವೈದ್ಯರಿಂದ ಪರೀಕ್ಷಿಸಿಕೊಳ್ಳಬೇಕು ಎಂದು ಸಾರ್ವಜನಿಕರಿಗೆ ತಿಳಿಸಿದರು.

ನಿಂತ ನೀರಿನಿಂದ ಸೊಳ್ಳೆ ಉತ್ಪತ್ತಿಯಾಗುವ ಜೊತೆಗೆ ಡೆಂಗ್ಯೂ ಸೇರಿದಂತೆ ಸೊಳ್ಳೆಯ ಕಚ್ಚುವಿಕೆಯಿಂದ ಹರಡುವ ಚಿಕುನ್‌ಗುನ್ಯಾ, ಮಲೇರಿಯಾ, ಆನೇಕಾಲು ರೋಗ, ಮೆದುಳು ಜ್ವರ ಮುಂತಾದವುಗಳು ಕಂಡುಬರುವ ಸಾಧ್ಯತೆ ಇರುತ್ತದೆ. ಸಾಮಾನ್ಯವಾಗಿ ಜ್ವರವನ್ನು ನಾವು ನಿರ್ಲಕ್ಷಿಸುತ್ತೇವೆ, ಇಂತಹ ಸಂದರ್ಭಗಳಲ್ಲಿ ಡೆಂಗ್ಯು ಸಂಬಂಧಿತ ಜ್ವರವಾಗಿದ್ದರೆ ರೋಗಿಯ ಪ್ಲೇಟ್‌ಲೆಟ್ಸಳ ಶೀಘ್ರ ಕುಸಿಯುವಿಕೆಯಿಂದ ಆರೋಗ್ಯ ಸಮಸ್ಯೆ ಎದುರಾಗಿ ರಕ್ತಸ್ರಾವದಂತಹ ಗಂಭಿರ ಸಮಸ್ಯೆ ಉಂಟಾಗಬಹುದು. ಯಾರಿಗಾದರೂ 3 ದಿನಗಳ ಕಡಿಮೆಯಾಗದ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಂಡಲ್ಲಿ ನಿರ್ಲಕ್ಷಿಸಿದೆ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಬೇಟಿ ನೀಡಿ ಅಗತ್ಯ ಪರೀಕ್ಷೆ ಮಾಡಿಸಿ ವೈದ್ಯರ ಸಲಹೆಯಂತೆ ಲಕ್ಷಣಗಳ ಆಧಾರದ ಮೇರೆಗೆ ಚಿಕಿತ್ಸೆ ಪಡೆಯಲು ತಿಳಿಸಿದರು.

ಡ್ರಮ್, ಬ್ಯಾರಲ್, ನೀರಿನ ತೊಟ್ಟಿ, ಕಲ್ಲಿನ ಡೋಣಿ, ಹೂವಿನ ಕುಂಡಲ ಮುಂತಾದ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಚಗೊಳಿಸಲು ಹಾಗೂ ಮುಚ್ಚಳ ಮುಚ್ಚಿ ಬಟ್ಟೆ ಕಟ್ಟಲು, ಬಳಕೆ ಮಾಡದ ನೀರು ಸಂಗ್ರಹಕಗಳಿಗೆ ಕೊಬ್ಬರಿ ಎಣ್ಣೆಯನ್ನು ಹಾಕುವ ಮೂಲಕ ಸೊಳ್ಳೆ ಉತ್ಪತ್ತಿ ತಡೆಯಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ 39 ನೇ ವಾರ್ಡಿನ ಕಾರ್ಪೊರೇಟರ್ ಶಶಿಕಲಾ ಜಗನ್ನಾಥ, ಆಡಳಿತ ವೈದ್ಯಾಧಿಕಾರಿ ಡಾ. ಸುರೇಖ, ಎನ್.ವಿ.ಬಿ.ಡಿ.ಸಿಪಿ ಸಲಹೆಗಾರ ಪ್ರತಾಪ್, ಜಿಲ್ಲಾ ನೋಡಲ್ ಕಿರಿಯ ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ನಂದಿನಿ, ಹಿರಿಯ ಆರೋಗ್ಯ ನೀರಿಕ್ಷಣಾಧಿಕಾರಿ ನಾಗೇಂದ್ರಪ್ಪ, ಆರೋಗ್ಯ ನೀರಿಕ್ಷಣಾಧಿಕಾರಿಗಳಾದ ಮರಿ ಬಸವನಗೌಡ, ರವೀಂದ್ರ ಜಿನಗ, ನಾಗರಾಜ ಸೇರಿದಂತೆ ಬ್ರೂಸ್‌ಪೇಟೆ ಆಸ್ಪತ್ರೆಯ ಸಿಬ್ಬಂದಿಗಳು, ಆಶಾಕಾರ್ಯ ಕರ್ತೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

# ಖುದ್ದು ಹಾಜರಿದ್ದು ಜನಸಂದಣಿ ನಿಯಂತ್ರಿಸಿದ ಉಸ್ತುವಾರಿ ಸಚಿವರು

**ಹಾಸನ :** ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣಬೈರೇಗೌಡ ಅವರುಶುಕ್ರವಾರ ಸಂಜೆಯಿಂದ ಶನಿವಾರ ಬೆಳಗ್ಗಿನ ಜಾವ 4 ಗಂಟೆಯವರೆಗೆ ರಾತ್ರಿ ಇಡೀ ಹಾಸನಾಂಬ ದೇವಾಲಯದಲ್ಲೇ ಖುದ್ದು ಹಾಜರಿದ್ದು, ಸಾರ್ವಜನಿಕರಿಗೆ ಸುಗಮ ದರ್ಶನಕ್ಕೆ ಅನುವುಮಾಡಿಕೊಟ್ಟರು.




ಶನಿವಾರ ಮತ್ತೆ ಬೆಳಗ್ಗೆ 7.30ಕ್ಕೇ ಫೀಲ್ಡ್‌ಗೆ ಇಳಿದು ಜನರಿಗೆ ಸುಗಮ ದರ್ಶನದ ಜೊತೆಗೆ ಶೌಚಾಲಯಗಳ ನೈರ್ಮಲ್ಯವನ್ನು ಪರಿಶೀಲಿಸಿದರು. ನಂತರ ದೇವಾಲಯದ ಆವರಣದಲ್ಲಿ ಖುದ್ದು ನಿಂತು ಭಕ್ತಾದಿಗಳು ಸರತಿ ಸಾಲಿನಲ್ಲಿ ಸಾಗುವಾಗ ದರ್ಶನದ ಬಾಗಿಲ ಬಳಿ ಬಂದ ತಕ್ಷಣ ದೇವಿಯ ದರ್ಶನ ಮಾಡುತ್ತಾ ಸಾಗಿ ಇತರರಿಗೂ ದರ್ಶನಕ್ಕೆ ಅವಕಾಶ ಮಾಡಿಕೊಡುವಂತೆ ಧ್ವನಿ ವರ್ಧಕದ ಮೂಲಕ ಮನವಿ ಮಾಡುತ್ತಿದ್ದರು.

ನಾನು ಗಮನಿಸಿದ್ದೇನೆ ಕೆಲವರು ರ್‍ಯಾಂಪ್ ಹತ್ತಿದ ತಕ್ಷಣ ಅತ್ತಿತ್ತಾ ನೋಡುತ್ತಾರೆ ಹಾಗೆ ಮಾಡದೆ ಮುಂದೆ ನೋಡುತ್ತಾ ನೇರವಾಗಿ ದೇವಿ ದರ್ಶನ ಮಾಡುತ್ತಾ ಸಾಗಿ ಎಂದರಲ್ಲದೆ,ಭಕ್ತಾದಿಗಳು ಯಾವುದೇ ಗೊಂದಲಕ್ಕೀಡಾಗದೆ ದೇವಿ ದರ್ಶನ ಪಡೆದು ಪುನೀತರಾಗಿ ಎಂದು ತಿಳಿಸಿದರು.ನಿನ್ನೆ ಒಂದೇ ದಿನ 3,70,000 ಜನ ದೇವಿ ದರ್ಶನ ಪಡೆದಿದ್ದಾರೆ ಎಂದರು.

ಭಕ್ತಾದಿಗಳು ಸರಾಗವಾಗಿ ಸರತಿ ಸಾಲಿನಲ್ಲಿ ಸಾಗುವುದರ ಮೂಲಕ ಇತರರಿಗೂ ದರ್ಶನಕ್ಕೆ ಅವಕಾಶ ಕಲ್ಪಿಸುತ್ತ ಸಹಕಾರ ನೀಡಿ ಎಂದು ಮನವಿ ಮಾಡಿದರು.ಸಂಸದರಾದ ಶ್ರೇಯಸ್ ಎಂ ಪಟೇಲ್, ಜಿಲ್ಲಾಧಿಕಾರಿ ಲತಾ ಕುಮಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಬಿ. ಆರ್.ಪೂರ್ಣಿಮಾ,ಉಪ ವಿಭಾಗಾಧಿಕಾರಿ ಮಾರುತಿ ಮತ್ತಿತರರು ಹಾಜರಿದ್ದರು.

# ಸಂಕಷ್ಟದಲ್ಲಿರುವ ಮಹಿಳೆಯರಿಗೆ ಆಶ್ರಯ ನೀಡುವ ಸರ್ಕಾರದ ಯೋಜನೆಯ ಪ್ರಚಾರ

**ದಾವಣಗೆರೆ :** ಸ್ವಧಾರ್ ಗೃಹ ಒದಗಿಸುವ ಸೌಲಭ್ಯಗಳು ಉಚಿತ ಊಟ, ಬಟ್ಟೆ, ಆಶ್ರಯ, ವೈದ್ಯಕೀಯ ಸೌಲಭ್ಯ, ಆಪ್ತಸಮಾಲೋಚನೆ, ಜಿಲ್ಲಾ ಕಾನೂನು ಪ್ರಾಧಿಕಾರದಿಂದ ಅಗತ್ಯ ಕಾನೂನು ಸಲಹೆ ನೀಡಲಾಗುವುದು ಎಂದು ನ್ಯಾಯಾಧೀಶರು ಹಾಗೂ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ತಿಳಿಸಿದರು.

ಶನಿವಾರ(ಅ.18) ರಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ದಾವಣಗೆರೆ ಇವರ ಕಚೇರಿಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಶಕ್ತಿ ಸದನ ಶುಭೋದಯ ಸ್ವಾಧಾರ ಗ್ರಹ ಇವರ ಸಂಯುಕ್ತ ಆಶ್ರಯದಲ್ಲಿ ಸಂಕಷ್ಟದಲ್ಲಿರುವ ಮಹಿಳೆಯರಿಗೆ ಉಚಿತ ಊಟ, ಬಟ್ಟೆ, ಆಶ್ರಯ ನೀಡುವ ಸರ್ಕಾರದ ಯೋಜನೆಗಳಿಗೆ ಚಾಲನೆ ನೀಡಿ ಬಿತ್ತಿ ಪತ್ರಗಳನ್ನು ಪ್ರದರ್ಶಿಸಿ ಬಳಿಕ ಮಾತನಾಡಿದ ಅವರು ಯಾರು ಇದರ ಆಶ್ರಯ ಪಡೆಯಬಹುದು ಎಂಬುದರ ಬಗ್ಗೆ ಮಾಹಿತಿ ನೀಡಿದರು. 18 ರಿಂದ 55 ವರ್ಷದೊಳಗಿನ ನಿರಾಶ್ರಿತ, ನಿರ್ಗತಿಕ ಮಹಿಳೆಯರು ಮತ್ತು ಆರ್ಥಿಕ ಭದ್ರತೆ ಇಲ್ಲದ ಮಹಿಳೆಯರು, ಪ್ರಕೃತಿ ವಿಕೋಪಕ್ಕೆ ಒಳಗಾಗಿ ಮನೆ, ಆಶ್ರಯ ಕಳೆದುಕೊಂಡು, ಜೈಲಿನಿಂದ ಬಿಡುಗಡೆ ಹೊಂದಿ ಸಾಮಾಜಿಕ ಮತ್ತು ಆರ್ಥಿಕ ಸಹಾಯ ಇಲ್ಲದೇ ಇರುವವರು, ದೈಹಿಕ ಮತ್ತು ಮಾನಸಿಕ ಹಿಂಸೆಗೆ ಒಳಪಟ್ಟವರು, ಕುಟುಂಬ, ಮನೆಯಿಂದ ಹೊರಹಾಕಲ್ಪಟ್ಟವರು, ಪತಿಯಿಂದ ಅಥವಾ ಬೇರೆ ಸದಸ್ಯರಿಂದ ದೌರ್ಜನ್ಯಕ್ಕೆ ಒಳಪಟ್ಟವರು, ವಿಧವೆಯರು, ವಿಚ್ಛೇದಿತ ಮಹಿಳೆಯರು, ಮನೆಯವರಿಂದ ನಿರ್ಲಕ್ಷ್ಯಕ್ಕೆ ಒಳಪಟ್ಟವರು ಇತ್ಯಾದಿ ಮಹಿಳೆಯರು ಹಾಗೂ ಈ ಮಹಿಳೆಯರಿಗೆ 12 ವರ್ಷದೊಳಗಿನ ಗಂಡುಮಕ್ಕಳು ಹಾಗೂ 18 ವರ್ಷದೊಳಗಿನ ಹೆಣ್ಣುಮಕ್ಕಳಿದ್ದರೆ ಅವರೂ ಕೂಡಾ ತಾಯಿಯೊಂದಿಗೆ ಆಶ್ರಯ ಪಡೆಯಬಹುದು. ಮಹಿಳಾ ಮತ್ತು ಮಕ್ಕಳ ಇಲಾಖೆ ಅಧಿಕಾರಿಗಳು, ಶಕ್ತಿ ಸದನ ಶುಭೋದಯ ಸ್ವಾಧಾರ ಗ್ರಹ ಸ್ವಾಧಾರ ಗೃಹಗಳ ಮೇಲ್ವಿಚಾರಕಿಯರು ಇತರೆ ವಕೀಲರೂ ಕೂಡ ಹಾಜರಿದ್ದರು.

# ಕಲಾಕುಂಚದಿಂದ ಎಸ್.ಎಸ್.ಎಲ್.ಸಿ. ಮಕ್ಕಳಿಗೆ ಪರೀಕ್ಷೆ ಪೂರ್ವಭಾವಿ ಸಿದ್ಧತಾ ತಯಾರಿ ರಾಜ್ಯ ಮಟ್ಟದ ಉಚಿತ ಕಾರ್ಯಾಗಾರ

**ದಾವಣಗೆರೆ:** 2025-26ನೇ ಸಾಲಿನ ಸಾರ್ವಜನಿಕ ಶಿಕ್ಷಣ ಇಲಾಖೆವತಿಯಿಂದ ನಡೆಯುವ ಎಸ್.ಎಸ್.ಎಲ್.ಸಿ. ಪರೀಕ್ಷೆ ಭಯ ದೂರ ಮಾಡುವ ಮತ್ತು ಮಕ್ಕಳಿಗೆ ಆತ್ಮಸ್ಥೈರ್ಯ ತುಂಬುವ ಪರೀಕ್ಷೆ ಪೂರ್ವಬಾವಿ ತಯಾರಿ ಸಿದ್ಧತಾ ಉಚಿತ ಕಾರ್ಯಾಗಾರ ನಡೆಸಿಕೊಡಲಿದ್ದು ಆಸಕ್ತ ವಿದ್ಯಾಸಂಸ್ಥೆಗಳು ಈ ಕೆಳಗಿನ ವಿಳಾಸಕ್ಕೆ ಸಂಪರ್ಕಿಸಿ ಹೆಚ್ಚಿನ ವಿವರ ಪಡೆದು ತಮ್ಮ ತಮ್ಮ ಶಾಲೆಗಳಲ್ಲಿ ಪರೀಕ್ಷಾ ಪೂರ್ವ ಸಿದ್ಧತಾ ಉಚಿತ ಕಾರ್ಯಾಗಾರ ಹಮ್ಮಿಕೊಳ್ಳಬಹುದಾಗಿದೆ.

ಕಳೆದ 36 ವರ್ಷಗಳಿಂದ ಎಸ್.ಎಸ್.ಎಲ್.ಸಿ.ಯಲ್ಲಿ ಹೆಚ್ಚು ಅಂಕ ಪಡೆದ ಮಕ್ಕಳಿಗೆ ಗಣ್ಯಮಾನ್ಯರ ಸಮ್ಮುಖದಲ್ಲಿ ಪ್ರಶಸ್ತಿಗಳನ್ನು ನೀಡುತ್ತಾ ಬಂದಿರುವ ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಪ್ರತೀ ವರ್ಷದಂತೆ ಈ ವರ್ಷವೂ ಪ್ರಥಮ ಭಾಷೆ ಕನ್ನಡದಲ್ಲಿ 125 ಕ್ಕೆ 125 ಪರಿಪೂರ್ಣ ಅಂಕ ಪಡೆದ ಮಕ್ಕಳಿಗೆ 'ಕನ್ನಡ ಕೌಸ್ತುಭ' ರಾಜ್ಯ ಪ್ರಶಸ್ತಿ ಒಟ್ಟು ಅಂಕ 625 ಕ್ಕೆ 600 ಕ್ಕೂ ಹೆಚ್ಚು ಅಂಕ ಪಡೆದ ಮಕ್ಕಳಿಗೆ ರಾಜ್ಯ ಮಟ್ಟದಲ್ಲಿ 'ಸರಸ್ವತಿ ಪುರಸ್ಕಾರ' ರಾಜ್ಯ ಪ್ರಶಸ್ತಿ ಸೇರಿದಂತೆ ಮಕ್ಕಳಿಗೆ ವಿವಿಧ ಪ್ರಶಸ್ತಿಗಳ ವಿವರ ನೀಡಿ ಅವರನ್ನು ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದು ಮಕ್ಕಳು ವ್ಯಾಸಂಗ ಮಾಡಿದ ಸಂಸ್ಥೆಗೆ ಹೆಸರು ತಂದು ಕೊಟ್ಟು ಉತ್ತಮ ಫಲಿತಾಂಶ ಬರುವ ನಿಟ್ಟಿನಲ್ಲಿ ಮಾನಸಿಕ ಸಿದ್ಧತೆಗಾಗಿ ಹಮ್ಮಿಕೊಳ್ಳಲಾದ ಈ ಕಾರ್ಯಾಗಾರ ಸಂಸ್ಥೆ ಉಚಿತವಾಗಿ ನಡೆಸಿಕೊಡುತ್ತದೆ ಎಂದು ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ, # 588, 'ಕನ್ನಡ ಕೃಪ', ಮೊದಲನೇ ಮಹಡಿ, ಕುವೆಂಪು ರಸ್ತೆ, (ಲಾಯರ್ ರೋಡ್) ಕಸ್ತೂರ್ಬಾ ಬಡಾವಣೆ, ದಾವಣಗೆರೆ - 577002. ಮೊ. 9538732777, 9945785170 ಈ ಸನೀಹವಾಣಿಗಳಿಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

# ಡಿ.07 ರಂದು ಮಾಜಿ ಸೈನಿಕರ ಕುಂದು ಕೊರತೆ ನಿವಾರಣೆ ಸಭೆ

**ಬಳ್ಳಾರಿ:** ಬೆಳಗಾವಿ ನಗರದ ಮರಾಠಾ ಲೈಟ ಇನಫಂಟ್ರಿ, ಶಿವಾಜಿ ಸ್ಟೇಡಿಯಂನಲ್ಲಿ ಡಿ.07 ರಂದು ಬೆಳಿಗ್ಗೆ 06 ರಿಂದ ಸಂಜೆ 06 ಗಂಟೆವರೆಗೆ ಮಾಜಿ ಸೈನಿಕರು ಮತ್ತು ಅವರ ಅವಲಂಬಿತರುಗಳ ಕುಂದು ಕೊರತೆ ನಿವಾರಣಾ ಶಿಬಿರ ಏರ್ಪಡಿಸಲಾಗಿದೆ.

ಶಿಬಿರದಲ್ಲಿ ಮಾಜಿ ಸೈನಿಕರ ನಿವೃತ್ತಿ ಪಿಂಚಣಿ, ಕುಟುಂಬ ಪಿಂಚಣಿ, ಸ್ಪರ್ಶ ಹಾಗೂ ಇಸಿಎಚ್‌ಎಸ್ ಸಂಬಂಧಿಸಿದ ಸಮಸ್ಯೆಗಳು ಕುರಿತು ಸೂಕ್ತ ಪರಿಹಾರ ಕ್ರಮ ಕೈಗೊಳ್ಳಲಾಗುವುದು.

ಶಿಬಿರದಲ್ಲಿ ಪಾಲ್ಗೊಳ್ಳುವ ಫಲಾನುಭವಿಗಳು ತಮ್ಮ ಸಮಸ್ಯೆ ಕುರಿತು ಹೆಸರುಗಳನ್ನು ನೊಂದಾಯಿಸಿಕೊಂಡು, ನೋಂದಣಿ ಸಂಖ್ಯೆಯನ್ನು ಪಡೆಯಬೇಕಾಗಿರುತ್ತದೆ. ನೊಂದಣಿ ಮಾಡಲು ಬಯಸುವವರು ತಮ್ಮ ಕುಂದು ಕೊರತೆಗಳ ಅರ್ಜಿ ಮತ್ತು ಅದಕ್ಕೆ ಸಂಭಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584 ಅಥವಾ greatgorill@nic.in ಮೂಲಕ ಅಪ್‌ಲೋಡ್ ಮಾಡಬಹುದು.

ಶಿಬಿರದಲ್ಲಿ ಬೆಳಗಾವಿ ಜಿಲ್ಲೆ ಮತ್ತು ಧಾರವಾಡ, ಹಾವೇರಿ, ಗದಗ, ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗೆ ಸಂಬಂಧಿಸಿದ ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರುಗಳು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ.

ಅರ್ಜಿ ಮತ್ತು ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಮೊಬೈಲ್ (ವಾಟ್ಸಾಪ್) ಸಂಖ್ಯೆ 8317350584 ಗೆ ಅಪ್‌ಲೋಡ್ ಮಾಡಿದ ವಿವರವನ್ನು ತಿಳಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ದೂ.0836-2440176 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕ ಅವರು ತಿಳಿಸಿದ್ದಾರೆ.

# ಡಾ.ಹಂಪನಹಳ್ಳಿ ತಿಮ್ಮೇಗೌಡ ಅವರಿಗೆ ದತ್ತಿ ಪ್ರಶಸ್ತಿ

**ಹಾಸನ :** ಹಾಸನದ ಮಾಣಿಕ್ಯ ಪ್ರಕಾಶನ ನೀಡುವ ರಾಜ್ಯ ಮಟ್ಟದ ನಿಂಗಪ್ಪ ಮಲ್ಲಪ್ಪ ಮೇಟಿ ಸ್ಮಾರಕ ದತ್ತಿ- ಸಂಶೋಧನಾ ಮಾಣಿಕ್ಯ ಪ್ರಶಸ್ತಿಯನ್ನು ನಿವೃತ್ತ ಪ್ರಾಧ್ಯಾಪಕ, ಜಾನಪದ ವಿದ್ವಾಂಸ, ಶಿಕ್ಷಣ ತಜ್ಞ, ಸಾಹಿತಿಯು ಆಗಿರುವ ಡಾ.ಹಂಪನಹಳ್ಳಿ ತಿಮ್ಮೇಗೌಡ ಅವರ ದಾಸೊಕ್ಕಲಿಗರುಕೃತಿಗೆ ನೀಡಿರುವುದಾಗಿ ಪ್ರಕಾಶಕಿ ದೀಪಾ ಉಪ್ಪಾರ್ ತಿಳಿಸಿದ್ದಾರೆ.

ಡಾ.ಹಂಪನಹಳ್ಳಿ ತಿಮ್ಮೇಗೌಡ ಅವರು ಇದುವರೆಗೆ ಸ್ವರಚಿತ ಮತ್ತು ಸಂಪಾದನೆಯ ನಲವತ್ತು ಕೃತಿಗಳನ್ನು ಪ್ರಕಟಿಸಿದ್ದಾರೆ. ಇವರಿಗೆ ಕರ್ನಾಟಕ ಸರ್ಕಾರದ ರಾಜ್ಯೋತ್ಸವ ಪ್ರಶಸ್ತಿ ಸೇರಿದಂತೆ ರಾಷ್ಟ್ರ ಹಾಗೂ ರಾಜ್ಯ ಮಟ್ಟದ ಹದಿನೆಂಟು ಪ್ರಶಸ್ತಿಗಳು ಇದುವರೆಗೆ ದೊರೆಕಿದ್ದು ಇದು ಹತ್ತೊಂಬತ್ತನೆಯ ಪ್ರಶಸ್ತಿಯಾಗಿದೆ.ನವೆಂಬರ್ ಎರಡರಂದು ಹಾಸನದ ಸಂಸ್ಕೃತ ಭವನದಲ್ಲಿ ಪ್ರಶಸ್ತಿ ನೀಡಲಾಗುವುದೆಂದು ಪ್ರಕಾಶಕರು ತಿಳಿಸಿದ್ದಾರೆ.

## ಬಿಂಡಿಗಾ ದೇವೀರಮ್ಮನ ಜಾತ್ರೆಗೆ ಚಾಲನೆ

# ಮಳೆ ಲೆಕ್ಕಿಸದೆ ಸಾವಿರಾರು ಸಂಖ್ಯೆಯಲ್ಲಿ ಆಗಮಿಸಿದ ಭಕ್ತ ಸಮೂಹ

**ಚಿಕ್ಕಮಗಳೂರ:** ತಾಲೂಕಿನ ಮಲ್ಲೇನಹಳ್ಳಿ ಸಮೀಪದ ಬಿಂಡಿಗಾ ದೇವೀರಮ್ಮ ಜಾತ್ರೆಗೆ ಇಂದು ಚಾಲನೆ ದೊರಕಿದೆ.

ನಿನ್ನೆ ರಾತ್ರಿಯಿಡಿ ಬಿಡದೆ ಬಿದ್ದ ಬಾರಿ ಮಳೆಯನ್ನು ಲೆಕ್ಕಿಸದೆ ಆಗಮಿಸಿ,ಬೆಳಗಿನ ಜಾವದ ಚಳಿ ಮತ್ತು ನಡೆಯುವ ದಾರಿಗೆ ಎದುರಾಗಿ ನಿಂತ ಮಂಜಿನ ಮುಸುಕನ್ನು ಸೀಳಿಕೊಂಡು ನಿಗದಿಪಡಿಸಿದ ಸಮಯಕ್ಕೆ ಸರಿಯಾಗಿ ಭಕ್ತರು ಬೆಟ್ಟ ಏರತೊಡಗಿದರು.

ರಾತ್ರಿ ಇಡೀ ಬಿದ್ದ ಮಳೆ ಹಿನ್ನೆಲೆಯಲ್ಲಿ ಬೆಟ್ಟ ಏರಲು ಭಕ್ತರಿಗೆ ಕಠಿಣ ಸವಾಲು ಎದುರಾಗಿತ್ತು. ಹೀಗಿದ್ದೂ

ಸರದಿ ಸಾಲಿನಲ್ಲಿ ತೆರಳಿದ ಸಾವಿರಾರು ಭಕ್ತರು ಬೆಟ್ಟದ ತುದಿಯಲ್ಲಿ ನೆಲೆಸಿರುವ ದೇವಿಯ ದರ್ಶನ ಪಡೆದು ಪುನೀತರಾದರು.

ಭಕ್ತರಿಗೆ ಬೆಟ್ಟ ಏರಲು ಅನುಕೂಲವಾಗುವಂತೆ ಹಲವಡೆ ಹಗ್ಗಗಳನ್ನು ಕಟ್ಟಲಾಗಿತ್ತಲ್ಲದೆ ಅಲ್ಲಲ್ಲಿ ಪೊಲೀಸರು, ಗೃಹರಕ್ಷಕ ದಳದ ಸಿಬ್ಬಂದಿ ನಿಂತು, ಪೊಲೀಸ್ ಭಾಷೆಯಿಂದ ಹೊರತಾಗಿ, ಸ್ನೇಹಮಯ ವಾತಾವರಣದಲ್ಲಿ ಸಹಕರಿಸಿದ್ದು ಗಮನ ಸೆಳೆಯಿತು.

ಬೆಟ್ಟವನ್ನು ಮೇಲೆ ಮೇಲೆ ಏರುತ್ತಿದ್ದಂತೆ ಹೊತ್ತು ಸರಿದು ಸೂರ್ಯ ಕಾಣಿಸಿಕೊಂಡು ಸುತ್ತಮುತ್ತಲ ರಮಣೀಯ ದೃಶ್ಯವನ್ನು ತುಸುಕಾಲ ಸವಿಯಲು ಅನುಕೂಲ ಆಯಿತಾದರೂ , ಈ ಸನ್ನಿವೇಶ ಹೆಚ್ಚು ಹೊತ್ತು ಇರದೇ ಇದ್ದದ್ದು ಸಾಹಸಿಗಳಂತೆ ಬೆಟ್ಟವನ್ನು ಏರುತ್ತಿದ್ದ ಭಕ್ತರಿಗೆ ನಿರಾಸೆಯಾಯಿತು.

ಆದರೂ, ಮಂಜು ಮುಸುಕಿದ ವಾತಾವರಣ ತಣ್ಣನೆ ಬೀಸುತ್ತಿದ್ದ ಗಾಳಿಯ ಮಧ್ಯೆ, ಇರುವೆಗಳಂತೆ ಮಹಿಳೆಯರು ಪುರುಷರು ಜೊತೆಗೂಡಿ, ಕಡಿದಾದ ಸ್ಥಳಗಳಲ್ಲಿ ಮಹಿಳೆಯರ ಕೈಹಿಡಿದು ಸಾಲು ಸಾಲಾಗಿ ಬೆಟ್ಟ ಹತ್ತಿ ಪುನೀತರಾಗುತ್ತಿರುವುದು ಕಂಡುಬಂದಿತು.



ವಾಹನಗಳಿಗೆ ನಿಗದಿಪಡಿಸಿದ ಪಾರ್ಕಿಂಗ್ ಸ್ಥಳ ಕೊಚ್ಚೆಯಿಂದ ಕೂಡಿದ್ದು, ಬದಲಿ ವ್ಯವಸ್ಥೆಯನ್ನು ಮಾಡಲಾಯಿತು. ಎಲ್ಲಿಯೂ ಭಕ್ತರ ನೂಕು ನುಗ್ಗಲು ಆಗದಂತೆ ಜಿಲ್ಲಾ ರಕ್ಷಣಾಧಿಕಾರಿ ವಿಕ್ರಮ ಆಮಟೆ ನೇತೃತ್ವದಲ್ಲಿ ಪೊಲೀಸ್ ತಂಡ ಅವಿರತ ಕೆಲಸ ಮಾಡುತಿತ್ತು. ಈ ಬಾರಿ ಬಿಂಡಿಗಾ ದೇವಿರಮ್ಮ ದೇವಸ್ಥಾನದ ಇತಿಹಾಸದಲ್ಲೇ ಪರ್ಸೆ ಜನರಿಗೆ (ಹೊರಗಿನವರಿಗೆ) ಎರಡು ದಿನಗಳ ಕಾಲ ಬೆಟ್ಟ ಏರಲು ದೇವಸ್ಥಾನ ಆಡಳಿತ ಮಂಡಳಿ ಅವಕಾಶ ಕಲ್ಪಿಸಿದೆ. ಈ ಹಿನ್ನೆಲೆಯಲ್ಲಿ ಬೆಟ್ಟಕ್ಕೆ ಏರುವ ಭಕ್ತರ ಸಂಖ್ಯೆಯಲ್ಲಿ ತುಸು ಇಳಿಕೆಯಾಗಿದೆ, ಮಧ್ಯಾಹ್ನದ 12 ಘಂಟೆಯ ವೇಳೆಗೆ 15000 ಭಕ್ತರು ಬೆಟ್ಟವನ್ನು ಏರಿರಬಹುದು ಎಂದು ಅಂದಾಜಿಸಲಾಗಿದೆ. ಸಂಜೆ ವೇಳೆಗೆ ಈ ಸಂಖ್ಯೆ 30000 ದಾಟಬಹುದು.

ಹೊರಗಿನ ಭಕ್ತಾದಿಗಳಿಗೆ ನಾಳೆಯೂ ಬೆಟ್ಟದ ಮೇಲಿನ ಶ್ರೀ ದೇವಿಯ ದರ್ಶನಕ್ಕೆ ಮತ್ತೊಂದು. ಅವಕಾಶವಿದ್ದು, ಸಂಜೆ ಕತ್ತಲಾದ ನಂತರ ದೊಡ್ಡ ದೀಪ ಹಚ್ಚಲಾಗುತ್ತದೆ. ಬೆಳಿಗ್ಗೆ ಘಂಟೆ 8:00 ರಿಂದ ಬೆಟ್ಟ ಏರಲು ಅವಕಾಶ ಕಲ್ಪಿಸಲಾಗಿದೆ, ಈ ಹಿನ್ನೆಲೆಯಲ್ಲಿ ಘಂಟೆ 7:00ರಿಂದ ಕೆಎಸ್ಆರ್ಟಿಸಿ ಬಸ್ಸುಗಳನ್ನು ಭಕ್ತರ ಅನುಕೂಲಕ್ಕಾಗಿ ಚಿಕ್ಕಮಗಳೂರು ನಗರದಿಂದ ವ್ಯವಸ್ಥೆ ಮಾಡಲಾಗಿದೆ. ನಾಳೆ ಸುಮಾರು 40 ರಿಂದ 50 ಸಾವಿರ ಜನರು ಬರಬಹುದೆಂಬ ನಿರೀಕ್ಷೆ ಇದೆ.

ಇನ್ನೂ, ನಾಡಿದ್ದು 21ನೇ ಮಂಗಳವಾರ ಶ್ರೀ ಫಲಾಹಾರಸ್ವಾಮಿ ಮಠದ ವತಿಯಿಂದ ಪರಂಪರೆಯಂತೆ ಶ್ರೀ ಮಠಕ್ಕೆ ಸೇರಿದ ಹತ್ತಾರು ಹಳ್ಳಿಯ ಸ್ಥಳೀಯ ಭಕ್ತರು ಒಟ್ಟುಗೂಡಿ ದೇವಿಯ ಬೆಟ್ಟವನ್ನೇರಿ ಹಗಲಿಡಿ ಪೂಜಾ ಕೈಂಕರ್ಯವನ್ನು ನೆರವೇರಿಸಿ ಸಂಜೆ ಮರಿದೀಪ ಹಚ್ಚಿ ಹಿಂದಿರುಗಲಿದ್ದಾರೆ.

## ಜನ ನೆಮ್ಮದಿಯಾಗಿ ಹಾಸನಾಂಬ ತಾಯಿಯ ದರ್ಶನ ಮಾಡುತ್ತಿದ್ದಾರೆ

**ಬೆಂಗಳೂರು:** ಜನ ನೆಮ್ಮದಿಯಾಗಿ ಹಾಸನಾಂಬ ತಾಯಿಯ ದರ್ಶನ ಮಾಡುತ್ತಿದ್ದಾರೆ. ಉತ್ತಮ ವ್ಯವಸ್ಥೆಯಾಗಿದೆ ಅಷ್ಟು ಸಾಕು. ಅದು ಆಗಿದೆ. ನನಗೆ ಶಿಷ್ಟಾಚಾರ ಪಾಲನೆ ಬೇಕಿಲ್ಲ ಎಂದು ಕೇಂದ್ರ ಸಚಿವ ಎಚ್‌ಡಿ ಕುಮಾರಸ್ವಾಮಿ ಹೇಳಿದ್ದಾರೆ.



ಬೆಂಗಳೂರಿನಲ್ಲಿ ಭಾನುವಾರ ಕೇಂದ್ರ ಸಚಿವರು ಹಾಸನಾಂಬೆ ದರ್ಶನ ವೇಳೆ ಜಿಲ್ಲಾಡಳಿತದಿನ ಶಿಷ್ಟಾಚಾರ ಪಾಲನೆ ಮಾಡದೆ ನಿಮಗೆ ಅಪಮಾನ ಮಾಡಲಾಗಿದೆ ಎಂಬ ಬಗ್ಗೆ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದರು. " ನಾನು ಶಿಷ್ಟಾಚಾರಕ್ಕೆ ಆದ್ಯತೆ ಕೊಡಲ್ಲ, ಅದರ ಬಗ್ಗೆ ತಲೆ ಕೆಡಿಸಿಕೊಳ್ಳುವುದಿಲ್ಲ. ಅಧಿಕಾರಿಗಳಿಗೇಕೆ ತೊಂದರೆ ಕೊಡಬೇಕು? ದೇವಿಯ ದರ್ಶನ ಮುಖ್ಯ, ನನಗೆ ದರ್ಶನ ಆಗಿದೆ. ಸಾರ್ವಜನಿಕರು ಕೂಡ ಯಾವುದೇ ತೊಂದರೆಗೆ ಒಳಗಾಗದೆ ನೆಮ್ಮದಿಯಾಗಿ ತಾಯಿಯ ದರ್ಶನ ಮಾಡುತ್ತಿದ್ದಾರೆ. ಉತ್ತಮವಾಗಿ ವ್ಯವಸ್ಥೆ ಮಾಡಲಾಗಿದೆ. ಅದು ಮುಖ್ಯವೇ ಹೊರತು ಶಿಷ್ಟಾಚಾರವಲ್ಲ " ಎಂದರು.

ನಾನು ಸಿಎಂ ಆಗಿದ್ದ ಸಂದರ್ಭದಲ್ಲಿ ಗ್ರಾಮ ವಾಸ್ತವ್ಯ ಮಾಡುತ್ತಿದ್ದಾಗ ಅಧಿಕಾರಿಗಳು ಹೊರಗೆ ಮಲಗುತ್ತಿದ್ದರು. ನನ್ನಿಂದ ಅವರಿಗೆ ತೊಂದರೆ ಆಗಿದೆ. ಹೀಗಾಗಿ ನಾನು ಶಿಷ್ಟಾಚಾರದ ಬಗ್ಗೆ ತಲೆಕೆಡಿಸಿಕೊಳ್ಳಲಾರೆ ಎಂದು ಅವರು ಹೇಳಿದರು.

ಜೆಡಿಎಸ್ ಪಕ್ಷದ ಕೋರ್ ಕಮಿಟಿಯನ್ನು ಪುನಾರಚನೆ ಮಾಡಲಾಗುತ್ತಿದ್ದು, ಎರಡು ಮೂರು ದಿನಗಳಲ್ಲಿ ನಿರ್ಧಾರ ಕೈಗೊಳ್ಳಲಾಗುವುದು ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು.

ಕಾಂಗ್ರೆಸ್ ಸರ್ಕಾರ ಈಗಲೂ ಇವರು ಮಾಡುತ್ತಿರುವ ಕೆಲಸಗಳು ನನ್ನ ಅವಧಿಯಲ್ಲಿ ನಾನು ಮಂಜೂರಾತಿ ನೀಡಿದ್ದು. ಈ ಸರ್ಕಾರಕ್ಕೆ ಜನರ ಕೆಲಸ ಮಾಡುವುದು ಬಿಟ್ಟು ವಿನಾಕಾರಣ ಕಾಲಹರಣ ಮಾಡುತ್ತಿದೆ. ಬೇರೆ ರಾಜ್ಯಗಳಲ್ಲಿ ಉದ್ಯಮಿಗಳಿಗೆ ಕೊಡುವ ಸವಲತ್ತು, ರಿಯಾಯ್ತಿಗಳ ಬಗ್ಗೆ ಹೇಳಿದರೆ ಅಲ್ಲಿಗೇ ಹೋಗಲಿ, ಇಲ್ಲಿಗ್ಯಾಕೆ ಬಂದ್ರು ಅಂತಾರೆ. ಹೀಗೆ ಹೇಳಿದರೆ ಯಾವ ಉದ್ಯಮ ರಾಜ್ಯಕ್ಕೆ ಬರುತ್ತದೆ ಎಂದು ಅವರು ಕಿಡಿಕಾರಿದರು.

ಈಗ ದಿನವೂ ಆರ್‌ಎಸ್‌ಎಸ್.. ಆರ್‌ಎಸ್‌ಎಸ್.. ಎಂದು ಜಪ ಮಾಡುತ್ತಿದೆ ಕಾಂಗ್ರೆಸ್ ಸರ್ಕಾರ. ಇದು ಆರ್‌ಎಸ್‌ಎಸ್ ಬಗ್ಗೆ ಚರ್ಚೆ ಮಾಡುವ ಸಂದರ್ಭವೇ? ರಾಜ್ಯದಲ್ಲಿ ಎಷ್ಟೊಂದು ಸಮಸ್ಯೆಗಳಿವೆ, ಅವುಗಳನು ನಿವಾರಿಸುವುದು ಬಿಟ್ಟು ಒಂದು ಸಂಘಟನೆ ವಿರುದ್ಧ ಚರ್ಚಿಸುತ್ತಿದ್ದರೆ ಉಪಯೋಗ ಏನು? ಇಂದು ಸಚಿವರು ಕೇಳಿದರು.

## ‘ಸ್ವಾರ್ಥ ಮನಸ್ಥಿತಿ’–ಸಮೀಕ್ಷೆಗೆ ಮಾಹಿತಿ ನೀಡದ ಸುಧಾ ಮೂರ್ತಿ ದಂಪತಿ ವಿರುದ್ಧ ಬಿ.ಕೆ. ಹರಿಪ್ರಸಾದ್ ಕಿಡಿ

**ಬೆಂಗಳೂರು:** ಖ್ಯಾತ ಲೇಖಕಿ, ಇನ್ಫೋಸಿಸ್ ಪ್ರತಿಷ್ಠಾನದ ಅಧ್ಯಕ್ಷೆ ಸುಧಾ ಮೂರ್ತಿ ಹಾಗೂ ಅವರ ಪತಿ, ಇನ್ಫೋಸಿಸ್ ಸಂಸ್ಥಾಪಕ ಎನ್‌ಆರ್ ನಾರಾಯಣ ಮೂರ್ತಿ ಅವರು ಕರ್ನಾಟಕದಲ್ಲಿ ನಡೆಯುತ್ತಿರುವ ’ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ’ಯಲ್ಲಿ (ಜಾತಿ ಸಮೀಕ್ಷೆ) ಭಾಗವಹಿಸಲು ನಿರಾಕರಿಸಿದ್ದರು. ಇದು ರಾಜಕೀಯ ವಲಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದ್ದು, ಕಾಂಗ್ರೆಸ್‌ನ ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಮೂರ್ತಿ ದಂಪತಿ ನಡೆಗೆ ಕಿಡಿಕಾರಿದ್ದಾರೆ.



ಸುಧಾ ಮೂರ್ತಿ ಅವರ ನಿಲುವಿಗೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್, ಇದು ’ಸ್ವಾರ್ಥ ಮನಸ್ಥಿತಿ’ ಎಂದು ಟೀಕಿಸಿದ್ದಾರೆ. "ಸರಳತೆಯಲ್ಲಿ ಶ್ರೀಮಂತಿಕೆಯನ್ನು ಬಚ್ಚಿಟ್ಟು, ಸಾಮಾಜಿಕ ನ್ಯಾಯಕ್ಕಾಗಿ ನಡೆಯುತ್ತಿರುವ ಸಮೀಕ್ಷೆಯಿಂದ ತಪ್ಪಿಸಿಕೊಳ್ಳುವುದು ಸರಿಯಲ್ಲ. ಸರ್ಕಾರದ ಭೂಮಿ, ನೀರು, ತೆರಿಗೆ ವಿನಾಯಿತಿ ಸೇರಿದಂತೆ ಹಲವು ಸವಲತ್ತುಗಳನ್ನು ಪಡೆದು ಜಗದಗಲ ಬೆಳೆದ ಸಂಸ್ಥೆಗಳ ಮಾಲೀಕರು, ಜನರ ಏಳಿಗೆಗಾಗಿ ನಡೆಯುತ್ತಿರುವ ಸಮೀಕ್ಷೆಯನ್ನೇ ತಿರಸ್ಕರಿಸುವುದು ಉದ್ಧಟತನದ ಪರಮಾವಧಿ," ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

"ಸರಳತೆಯು ಶ್ರೀಮಂತಿಕೆಯನ್ನು ಮುಚ್ಚಿಡಬಹುದೇ ಹೊರತು, ಜಾತಿಗ್ರಸ್ತ ಮನಸ್ಥಿತಿಯನ್ನಲ್ಲ," ಎಂದು ಅವರು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಪರೋಕ್ಷವಾಗಿ ಮೂರ್ತಿ ದಂಪತಿಯನ್ನು ಕುಟುಕಿದ್ದಾರೆ.

ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಮನೆ–ಮನೆಗೆ ತೆರಳಿ ನಡೆಸುತ್ತಿರುವ ಸಮೀಕ್ಷೆಗೆ ಮಾಹಿತಿ ನೀಡಲು ಮೂರ್ತಿ ದಂಪತಿ ನಿರಾಸಕ್ತಿ ತೋರಿದ್ದರು. ತಾವು ಹಿಂದುಳಿದ ಸಮುದಾಯಕ್ಕೆ ಸೇರಿಲ್ಲದ ಕಾರಣ, ಸಮೀಕ್ಷೆಯಲ್ಲಿ ಭಾಗವಹಿಸುವುದರಿಂದ ಸರ್ಕಾರಕ್ಕೆಯಾವುದೇಪ್ರಯೋಜನವಾಗುವುದಿಲ್ಲ ಎಂದು ಅವರು ಸ್ವಯಂ–ಘೋಷಣಾ ಪತ್ರಕ್ಕೆ ಸಹಿ ಹಾಕಿದ್ದರಿ. ’ವೈಯಕ್ತಿಕ ಕಾರಣಗಳಿಂದ’ ತಾವು ಮಾಹಿತಿ ನೀಡುವುದಿಲ್ಲ ಎಂದು ಸುಧಾ ಮೂರ್ತಿ ಸ್ಪಷ್ಟಪಡಿಸಿದ್ದರು.


ಈ ವಿವಾದದ ಕುರಿತು ಪ್ರತಿಕ್ರಿಯಿಸಿದ್ದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, "ಸಮೀಕ್ಷೆಯಲ್ಲಿ ಭಾಗವಹಿಸುವಂತೆ ಯಾರನ್ನೂ ಒತ್ತಾಯಿಸಲು ಸಾಧ್ಯವಿಲ್ಲ. ಇದು ಸಂಪೂರ್ಣವಾಗಿ ಸ್ವಯಂಪ್ರೇರಿತ," ಎಂದು ಹೇಳಿದ್ದರು.

ಈ ಸಮೀಕ್ಷೆಯು ಸ್ವಯಂಪ್ರೇರಿತವಾಗಿದ್ದು, ಯಾರಿಗೂ ಮಾಹಿತಿ ನೀಡುವಂತೆ ಒತ್ತಾಯಿಸುವಂತಿಲ್ಲ ಎಂದು ಕರ್ನಾಟಕ ಹೈಕೋರ್ಟ್ ಕೂಡ ಸೆಪ್ಟೆಂಬರ್ 25ರಂದು ಸ್ಪಷ್ಟಪಡಿಸಿತ್ತು. ಸಾರ್ವಜನಿಕರಿಗೆ ಈ ಬಗ್ಗೆ ಮಾಹಿತಿ ನೀಡುವಂತೆ ಗಣತಿದಾರರಿಗೆ ನ್ಯಾಯಾಲಯವು ಸೂಚಿಸಿತ್ತು.

## ಮಾರ್ಚ್ ಅಂತ್ಯಕ್ಕೆ ನಕ್ಸಲ್ ಮುಕ್ತ ಭಾರತ

**ನವದೆಹಲಿ:** ದೇಶದಲ್ಲಿ ನಕ್ಸಲೀಯರನ್ನು ಮುಂದಿನ ವರ್ಷ ಮಾರ್ಚ್ ಅಂತ್ಯದ ವೇಳೆಗೆ ಬೇರು ಸಮೇತ ದೇಶದಿಂದ ಕಿತ್ತೊಗೆಯುವ ಗುರಿಯನ್ನು ಕೇಂದ್ರ ಸರ್ಕಾರ ಹೊಂದಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

2026 ಮಾರ್ಚ್ 31ಕ್ಕೆ ದೇಶವನ್ನು ನಕ್ಸಲ್ ಮುಕ್ತ ಮಾಡುವ ಸಂಕಲ್ಪ ಹೊಂದಿದ್ದು ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರಗಳ ಜೊತೆ ಸೇರಿ ಕೇಂದ್ರ ಸರ್ಕಾರ ಕೆಲಸ ಮಾಡುತ್ತಿದೆ ಎಂದಿದ್ದಾರೆ.



ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ಹಂಚಿಕೊಂಡಿರುವ ಅಮಿತ್ ಶಾಮ ಛತ್ತೀಸ್ ಘಡದಲ್ಲಿ ವಿಷ್ಣು ದೇವ್ ಸಾಯಿ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ 2,100 ಮಂದಿ ನಕ್ಸಲರು ಶರಣಾಗಿದ್ದು 1,785 ಬಂಧನವಾಗಿದೆ, ಈ ವೇಳೆ 477 ಮಂದಿ ನಕ್ಸಲರು ಸಾವನ್ನಪ್ಪಿದ್ದಾರೆ ಎಂದು ಅಂಕಿ ಸಂಖ್ಯೆ ಕುರಿತು ಮಾಹಿತಿ ನೀಡಿದ್ದಾರೆ. ಒಂದು ಕಾಲದಲ್ಲಿ ಭಯೋತ್ಪಾದಕ ನೆಲೆಗಳಾಗಿದ್ದ ಛತ್ತೀಸ್‌ಗಢದ ಅಬುಜ್‌ಮರ್ ಮತ್ತು ಉತ್ತರ ಬಸ್ತರ್ ಅನ್ನು ಇಂದು ನಕ್ಸಲ್ ಭಯೋತ್ಪಾದನೆಯಿಂದ ಮುಕ್ತಗೊಳಿಸಲಾಗಿದೆ ಎಂದು ಘೋಷಿಸಿರುವುದು ಅಪಾರ ಸಂತೋಷದ ವಿಷಯ ಎಂದಿದ್ದಾರೆ.

ದಕ್ಷಿಣ ಬಸ್ತರ್‌ನಲ್ಲಿ ನಕ್ಸಲ್‌ವಾದದ ಕುರುಹು ಇದೆ, ಅದನ್ನು ಭದ್ರತಾ ಪಡೆಗಳು ಶೀಘ್ರದಲ್ಲೇ ಅಳಿಸಿಹಾಕಲಿವೆ 78 ಭಾರತದ ಸಂವಿಧಾನದ ಮೇಲಿನ ನಂಬಿಕೆ ಇರಿಸಿ, ಹಿಂಸಾಚಾರ ತ್ಯಜಿಸುವ ಅವರ ನಿರ್ಧಾರ ಶ್ಲಾಘನೀಯ ಎಂದು ತಿಳಿಸಿದ್ದಾರೆ.

## ಕನ್ಹೇರಿ ಶ್ರೀಗಳ ಮೇಲಿನ ನಿಷೇಧ ಹಿಂಪಡೆಯದಿದ್ದರೆ ವಿಜಯಪುರ ಬಂದ್‌ಗೆ ಕರೆ:


**ವಿಜಯಪುರ:** ಸಮಾಜದಲ್ಲಿ ನಡೆಯುತ್ತಿರುವ ಘಟನಾವಳಿಗಳನ್ನು ಯಥಾವತ್ತಾಗಿ ವಿವರಿಸಿದ್ದಕ್ಕೆ ಶ್ರೀ ಕನೇರಿ ಮಠದ ಶ್ರೀ ಅದೃಶ್ಯ ಕಾಡಸಿದ್ದೇಶ್ವರ ಮಠದ ಸ್ವಾಮೀಜಿಗಳಿಗೆ ವಿಜಯಪುರಕ್ಕೆ ಬರ'ದ'ಂತೆ ಜಿಲ್ಲಾಡಳಿತ ನಿಷೇಧ ಹೇರಿರುವುದನ್ನು ಹಿಂಪಡೆಯದಿದ್ದರೆ ವಿಜಯಪುರದ ಬಂದ್‌ಗೆ ಕರೆ ನೀಡಬೇಕಾಗುತ್ತದೆ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಎಚ್ಚರಿಸಿದ್ದಾರೆ.



ರಾಜಕೀಯ ಪ್ರಾಬಲ್ಯ ಸಾಧಿಸಲು, ವೋಟ್ ಬ್ಯಾಂಕ್ ರಾಜಕಾರಣವನ್ನು ಧಿಕ್ಕರಿಸಲು ಅವರು ಮಾತನಾಡಿದ ಕಾರಣ, ಅವರ ಮೇಲೆ ಈ ಕ್ರಮ ಜರುಗಿಸಲಾಗಿದೆ. ಆತ್ಮನಿರ್ಭರ ಸಮಾಜವನ್ನು ಸ್ಥಾಪಿಸಲು ಅನೇಕ ಉಪಕ್ರಮಗಳನ್ನು ಪರಿಚಯಿಸಿ ಎಲೆಮರಿಕಾಯಿಯಂತೆ ದುಡಿಯುತ್ತಿರುವ ಸರ್ವಸಂಗ ಪರಿತ್ಯಾಗಿಗಳ ಮೇಲೆ ಸರ್ಕಾರ ಕ್ರಮ ಜರುಗಿಸಿದೆ.

ಪ್ರಜೆಗಳ ವಾಕ್ ಸ್ವಾತಂತ್ರ್ಯ, ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ. ಒಂದೆಡೆ, ?ಮೊಹಬ್ಬತ್ ಕಿ ದುಕಾನ್? ಎಂದು ಸಮ ಸಮಾಜದ ಬಗ್ಗೆ ಪುಂಖಾನುಪುಂಖವಾಗಿ ಮಾತನಾಡುವವರು ಪೊಲೀಸರನ್ನು, ಜಿಲ್ಲಾಡಳಿತವನ್ನು ಉಪಯೋಗಿಸಿಕೊಂಡು ವಾಕ್‌ಸ್ವಾತಂತ್ರ್ಯ ಹರಣ ಮಾಡುತ್ತಿರುವುದು ಹೇಯ ಹಾಗೂ ಖಂಡನೀಯ. ಇದು ಪ್ರಜಾಪ್ರಭುತ್ವದ ಅಣಕ ಎಂದರೆ ತಪ್ಪಾಗಲಾರದು. ಸರ್ಕಾರ ಕೂಡಲೇ ಈ ನಿಷೇಧವನ್ನು ವಾಪಸ್ ಪಡೆಯಬೇಕು. ಈ ರೀತಿಯಾದ ನಿರಂಕುಶ ಧೋರಣೆಯನ್ನು ಕೂಡಲೇ ಕೈಬಿಡಬೇಕು.

## ದಲಿತರ ವಿವಿಧ ಬೇಡಿಕೆ ಈಡೇರಿಸಲು ಒತ್ತಾಯಿಸಿ ಡಿಎಸ್‌ಎಸ್ ಮನವಿ



**ಚಿತ್ರದುರ್ಗ:** ಅಲೆಮಾರಿ, ಅರೆ ಅಲೆಮಾರಿ 59 ಜಾತಿಗಳಿಗೆ ಶೇ.1 ರಷ್ಟು ಪ್ರತ್ಯೇಕ ಮೀಸಲಾತಿ ಹಾಗೂ ದಲಿತರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ(ದಾದಾ ಸಾಹೇಬ್ ಡಾ.ಎನ್.ಮೂರ್ತಿ ಸ್ಥಾಪಿತ) ಜಿಲ್ಲಾ ಸಮಿತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಇತ್ತೀಚೆಗೆ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ರಾಜ್ಯದ ಮುಖ್ಯಮಂತ್ರಿ, ರಾಜ್ಯಪಾಲರು, ರಾಷ್ಟ್ರಪತಿ, ಪ್ರಧಾನಿಗೆ ಮನವಿ ಸಲ್ಲಿಸಲಾಯಿತು.

ಒಳ ಮೀಸಲಾತಿ ಜಾರಿಗೊಳಿಸುವ ಅಧಿಕಾರ ಆಯಾ ರಾಜ್ಯ ಸರ್ಕಾರಗಳಿಗಿದೆಯೆಂದು ಸುಪ್ರಿಂಕೋರ್ಟ್ ತೀರ್ಪು ನೀಡಿ ಒಂದು ವರ್ಷಗಳ ನಂತರ ರಾಜ್ಯ ಸರ್ಕಾರ ಒಳ ಮೀಸಲಾತಿಯನ್ನು ಅನುಷ್ಠಾನಗೊಳಿಸಿದ್ದು, ಅಲೆಮಾರಿ ಮತ್ತು ಅರೆಅಲೆಮಾರಿಗಳಿಗೆ ಅನ್ಯಾಯವೆಸಗಿದೆ. ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗಳಿಗೆ ಸಾಮಾಜಿಕ ನ್ಯಾಯ ನೀಡಬೇಕೆಂಬ ಉದ್ದೇಶವಿಟ್ಟುಕೊಂಡು ನಾಗಮೋಹನ್‌ದಾಸ್ ಆಯೋಗ ದತ್ತಾಂಶ ಸಂಗ್ರಹಿಸಿ ರಾಜ್ಯ ಸರ್ಕಾರಕ್ಕೆ ನೀಡಿರುವ ವರದಿಯನ್ನು ರಾಜ್ಯ ಸಚಿವ ಸಂಪುಟ ಮಾರ್ಪಡಿಸಿ ಒಳ ಮೀಸಲಾತಿ ಜಾರಿಗೊಳಿಸಿರುವುದು ಅಲೆಮಾರಿ ಮತ್ತು ಅರೆಅಲೆಮಾರಿಗಳಿಗೆ ಮರಣ ಶಾಸನವಾಗಿ ಪರಿಣಮಿಸಿದೆ. ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ ಔದ್ಯೋಗಿಕವಾಗಿ ಅತ್ಯಂತ ಹಿಂದುಳಿದಿರುವ ಚನ್ನದಾಸ, ಬುಡ್ಗಜಂಗಮ, ದಕ್ಕಲರು, ಮಾಲದಾಸರು, ಹೊಲಿಯದಾಸರು, ಡಂಬರು, ಸಿಳ್ಳೆಕ್ಯಾತರು, ಸಿಂಧೂಳು ಇನ್ನು ಮುಂತಾದ 59 ಜಾತಿಗಳು ತಮಗಾಗಿರುವ ಶೋಷಣೆಯ ವಿರುದ್ಧ ಪ್ರತಿಭಟನೆ ನಡೆಸುತ್ತಿವೆ ಎಂದರು.

## ರಾಜ್ಯದಲ್ಲಿ ಗೋಹತ್ಯೆ, ಅಕ್ರಮ ಸಾಗಾಟ ತಡೆಗೆ ಶ್ರೀರಾಮ ಸೇನೆಯಿಂದ ರಾಜ್ಯಪಾಲರಿಗೆ ಮನವಿ

**ಚಿತ್ರದುರ್ಗ:** ರಾಜ್ಯದಲ್ಲಿ ಗೋಹತ್ಯೆ ನಿಷೇಧ ಕಾಯಿದೆ ಉಲ್ಲಂಘನೆಯಿಂದ ಗೋವುಗಳ ವಧೆ ಹಾಗೂ ಸಾವಿರಾರು ಗೋವುಗಳ ಅಕ್ರಮ ಸಾಗಾಟವಾಗುತ್ತಿರುವುದನ್ನು ತಡೆಯುವಂತೆ ಶ್ರೀರಾಮ ಸೇನಾ ಕರ್ನಾಟದಿಂದ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಸಂವಿಧಾನಿಕ ಅಧಿಕಾರವನ್ನು ಬಳಸಿ ಗೋಹತ್ಯೆ ನಿಷೇಧ ಕಾಯಿದೆ ಮತ್ತು ಪ್ರಾಣಿ ಕ್ರೌರ್ಯ ನಿಷೇಧ ಕಾಯಿದೆಯನ್ನು ರಾಜ್ಯಾದ್ಯಂತ ಕಟ್ಟುನಿಟ್ಟಾಗಿ ಜಾರಿಗೆ ತರಬೇಕು.

ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರದ ನಿರ್ಲಕ್ಷ್ಯದಿಂದ ಗೋಹತ್ಯೆ ಹೆಚ್ಚುತ್ತಿದ್ದು, ಸೂಕ್ತ ತನಿಖೆಗೆ ಕೇಂದ್ರ ಗೃಹ ಸಚಿವಾಲಯಕ್ಕೆ ರಾಜ್ಯ ಸರ್ಕಾರ ಶಿಫಾರಸ್ಸು ಮಾಡಬೇಕು. ಗೋಸಂರಕ್ಷಣೆಯಲ್ಲಿ ಕಾನೂನುಬದ್ದವಾಗಿ ತೊಡಗಿರುವ ಹಿಂದೂ ಕಾರ್ಯಕರ್ತರ ಮೇಲೆ ಹಲ್ಲೆ ನಡೆಯುತ್ತಿದ್ದು, ಕೇಸು ದಾಖಲಿಸಿರುವುದನ್ನು ಪರಿಶೀಲಿಸಿ ಹಿಂದಕ್ಕೆ ಪಡೆಯುವಂತೆ ಪೊಲೀಸ್ ಮಹಾ ನಿರ್ದೇಶಕರಿಗೆ ಮಾರ್ಗದರ್ಶನ ನೀಡಬೇಕು. ರಾಜ್ಯ ಮಟ್ಟದಲ್ಲಿ ವಿಶೇಷ ಗೋರಕ್ಷಣಾ ನಿಯಂತ್ರಣ ದಳ ರಚಿಸಿ ಗೋವುಗಳ ಅಕ್ರಮ ಸಾಗಾಣಿಕೆ ವಿರುದ್ದ ನಿಗಾ ಇಡಬೇಕೆಂದು ಕರ್ನಾಟಕ ರಾಜ್ಯ ದಕ್ಷಿಣ ಪ್ರಾಂತ ರಾಜ್ಯಾಧ್ಯಕ್ಷ ಸುರೇಶ್‌ಬಾಬು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.



ಶ್ರೀರಾಮ ಸೇನಾ ಕರ್ನಾಟಕ ರಾಜ್ಯ ದಕ್ಷಿಣ ಪ್ರಾಂತ ಜಿಲ್ಲಾಧ್ಯಕ್ಷ ಹರೀಶ್ ಟಿ.ಎನ್. ಉಪಾಧ್ಯಕ್ಷ ಎಸ್.ರಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಟಿ.ಆನಂದ್, ಕಾರ್ಯದರ್ಶಿ ಸಿ.ರಂಗಸ್ವಾಮಿ, ಸಹ ಸಂಘಟನಾ ಕಾರ್ಯದರ್ಶಿ ಯಶವಂತರಾಜ್ ಎಂ.ಆರ್. ಸಹ ಕಾರ್ಯದರ್ಶಿ ಕುಮಾರ್ ಎಂ. ತಾಲ್ಲೂಕು ಅಧ್ಯಕ್ಷ ರಾಘವೇಂದ್ರ ಜೆ.ಇವರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಶಿಕ್ಷಣ ಕೇವಲ ಸರ್ಕಾರಿ ಉದ್ಯೋಗಕ್ಕಷ್ಟೇ ಅಲ್ಲ, ಸಂಸ್ಕಾರಕ್ಕೆಂದು ಭಾವಿಸಿ : ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ಶೋಷಿತರು, ಬಡವರ್ಗದ ಜನರನ್ನು ಸಮಾಜದ ಮುನ್ನಲೆಗೆ ತರಬೇಕೆಂಬ ಉದ್ದೇಶದೊಂದಿಗೆ ಡಾ. ಬಿ.ಆರ್ ಅಂಬೇಡ್ಕರ್ ಅವರು ನೀಡಿದ ಸಂವಿಧಾನ ಆಶಯದಂತೆ ಅವರ ಕನಸು ನನಸು ಮಾಡಲು ಶಿಕ್ಷಣ ಅತಿ ಮುಖ್ಯ ಎಂದು ಶಾಸಕ ಹೆಚ್.ಡಿ.ತಮ್ಮಯ್ಯ ಅಭಿಪ್ರಾಯಿಸಿದರು.

ನಗರದ ಬಸವೇಶ್ವರ ಬಡಾವಣೆ ಪೈ ಕಲ್ಯಾಣಮಂಟಪ ಹಿಂಭಾಗ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಸುಮಾರು 7 ಕೋರಿ ರೂ ವೆಚ್ಚದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಡಾ. ಬಿ.ಆರ್ ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಾಣದ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.



ಉನ್ನತ ಶಿಕ್ಷಣ ಪಡೆದವರು ಹುಲಿಹಾಲಿನ ರೀತಿ ಘರ್ಜಿಸುತ್ತಾರೆ, ಶಿಕ್ಷಣ ಕೇವಲ ಸರ್ಕಾರಿ ಉದ್ಯೋಗಕ್ಕೆ ಎಂದು ಭಾವಿಸದೆ ಬದುಕಿನ ಸಂಸ್ಕಾರ ಕಲಿಯಲು ಎಂದು ಭಾವಿಸುವ ಮೂಲಕ ಶಿಕ್ಷಣ ಪಡೆಯಿರಿ ಎಂದು ಸಲಹೆ ನೀಡಿದರು. ಸಮಾಜಕಲ್ಯಾಣ ಸಚಿವ ಹೆಚ್.ಸಿ ಮಹಾದೇವಪ್ಪ ಅವರು 7 ಕೋಟಿ ರೂ ಅನುದಾನವನ್ನು ವಿದ್ಯಾರ್ಥಿ ನಿಲಯಕ್ಕೆ ಮಂಜೂರು ಮಾಡಿರುವುದನ್ನು ಅಭಿನಂದಿಸಿದ ಅವರು, ಸರ್ಕಾರಿ ಕಟ್ಟಡ ಎಂಬ ತಾತ್ಸಾರ ಮನೋಭಾವ ಬಿಟ್ಟು ಸ್ವಂತ ಮನೆಯಂತೆ ಗುಣಮಟ್ಟದ ಕಟ್ಟಡ ಕಾಮಗಾರಿ ನಡೆಸಬೇಕೆಂದು ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಈ ನೂತನ ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿನಿಯರಿಗೆ ಅತ್ಯಾಧುನಿಕ ರೀತಿಯ ಸೌಲಭ್ಯಗಳು ದೊರೆಯಬೇಕು ಜೊತೆಗೆ ಗುಣಮಟ್ಟದ ಕಾಮಗಾರಿ ನಡೆಸಬೇಕೆಂದು ಹೇಳಿದ ಅವರು, ಸರ್ಕಾರದ ಗ್ಯಾರಂಟಿ ಯೋಜನೆಗಳು ಬಡವರ ಬದುಕಿಗೆ ಆಸರೆಯಾಗಿದೆ. ಈ ನಿಟ್ಟಿನಲ್ಲಿ ಅಭಿವೃದ್ಧಿಗೂ ಅನುದಾನ ನೀಡಿದೆ ಎಂದರು.

ಈ ನೂತನ ವಸತಿ ನಿಲಯವನ್ನು ಚಿಕ್ಕಮಗಳೂರಿನ ವಿದ್ಯಾರ್ಥಿನಿಯರು ಸದುಪಯೋಗಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆಯಬೇಕೆಂದು ಕರೆನೀಡಿದರು.

### ಸೇವಾ ನ್ಯೂನತೆ ಆರೋಪ: ಬಡ್ಡಿ ಸಹಿತ ಹಣ ವಾಪಸಿಗೆ ಆದೇಶ

## ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ತೀರ್ಪು

**ಚಿಕ್ಕಮಗಳೂರು, ಅ.18:** ಒಪ್ಪಿಗೆ ಪಡೆ–ಯದೆ ಗುಂಪು ಆರೋಗ್ಯ ವಿಮೆಗಾಗಿ ಹಣ ಕಡಿತಗೊಳಿಸಿ ಸೇವಾ ನ್ಯೂನತೆ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬ್ಯಾಂಕ್ ಹಾಗೂ ಇನ್‌ಶೂರೆನ್ಸ್ ಕಂಪನಿಗಳ ವಿರುದ್ಧ ತೀರ್ಪು ನೀಡಿರುವ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಬಡ್ಡಿ ಸಹಿತ ಹಣ ಮರಳಿಸುವಂತೆ ಕಂಪನಿಗಳಿಗೆ ಆದೇಶ ನೀಡಿದೆ.

ನಗರದ ಕೋಟೆ ಚೆನ್ನಾಪುರದ ಎ.ಪಿ.ನಾಗೇಶ್ ಗೌಡ ಎಂಬುವವರು ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ನ ವಸ್ತಾರೆ ಶಾಖೆಯಲ್ಲಿ ಉಳಿತಾಯ ಖಾತೆ ಹೊಂದಿದ್ದಾರೆ. ನಾಗೇಶ್ ಗೌಡರ ಖಾತೆಯಿಂದ ತಲಾ 76,793 ರೂ.ಗಳಂತೆ ಒಟ್ಟು 1,53,586 ರೂ.ಗಳನ್ನು ಕಡಿತಗೊಳಿಸಿದ್ದು, ಈ ಬಗ್ಗೆ ಬ್ಯಾಂಕ್ ವ್ಯವಸ್ಥಾಪಕರನ್ನು ಸಂಪರ್ಕಿಸಿದ ಅವರು ಈ ಹಣವನ್ನು ಮರಳಿಸುವಂತೆ ಮನವಿ ಮಾಡಿಕೊಂಡಿದ್ದರು. ಆದರೆ ಹಣ ಮರಳಿಸದೆ ಸೇವಾ ನ್ಯೂನತೆ ಎಸಗಿದ್ದರೆನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಬ್ಯಾಂಕ್ ವ್ಯವಸ್ಥಾಪಕರು, ಹೆಚ್‌ಡಿಎಫ್‌ಸಿ ಎರ್ಗೋ ಜನರಲ್ ಇನ್‌ಶೂರೆನ್ಸ್ ಕಂಪನಿಯ ಮಂಗಳೂರು ಹಾಗೂ ಬೆಂಗಳೂರು ಕಚೇ–ರಿಯ ವ್ಯವಸ್ಥಾಪಕರುಗಳು ಹಾಗೂ ಈ ಸಂಸ್ಥೆಯ ಕಾರ್ಯಾಚರಣೆ ಮತ್ತು ಸೇವಾ ಗುಂಪಿನ ಹಿರಿಯ ಉಪಾಧ್ಯಕ್ಷರು ಹಾಗೂ ಅಧ್ಯಕ್ಷರ ವಿರುದ್ಧ ಕಳೆದ ಡಿಸೆಂಬರ್ 4 ರಂದು ನಾಗೇಶ್‌ಗೌಡ ಅವರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ಸಲ್ಲಿಸಿದ್ದರು.

ಈ ಬಗ್ಗೆ ವಿಚಾರಣೆ ನಡೆಸಿದ ಆಯೋಗವು ಇತ್ತೀಚೆಗೆ ತೀರ್ಪು ನೀಡಿ ವಿಮೆ ಮೊತ್ತವಾದ ಎರಡು ಬಾರಿ ಖಾತೆಯಿಂದ ಕಡಿತಗೊಳಿಸಿದ ಒಟ್ಟು ಮೊತ್ತ 1,53,586 ರೂ.ಗಳನ್ನು ಶೇ.9ರ ವಾರ್ಷಿಕ ಬಡ್ಡಿ ಸಹಿತ ದೂರುದಾರರಿಗೆ ಮರಳಿಸುವಂತೆ ಹಾಗೂ ಪರಿಹಾರವಾಗಿ 20 ಸಾವಿರ ರೂ.ಗಳು ಮತ್ತು ಪ್ರಕರಣದ ಖರ್ಚು–ವೆಚ್ಚಕ್ಕಾಗಿ 10 ಸಾವಿರ ರೂ.ಗಳನ್ನು ನೀಡುವಂತೆ ಆದೇಶ ನೀಡಿದೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**